ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 262

15–4–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 262

### 25 ವರ್ಷಗಳ ನಂತರ ಸಾಕಾರಗೊಂಡ ಡಾ. ಬಿ.ಆರ್.ಅಂಬೇಡ್ಕರ್ ಭವನ

## ಅನುದಾನದ ಕೊರತೆ ಇಲ್ಲ, ಸುಸಜ್ಜಿತ ಭವನ ನಿರ್ಮಾಣವಾಗಿ ಎಲ್ಲರಿಗೂ ಉಪಯುಕ್ತವಾಗಬೇಕು. ಎಸ್.ಎಸ್.ಮಲ್ಲಿಕಾರ್ಜುನ್

**ದಾವಣಗೆರೆ :** ಜಿಲ್ಲೆಯಲ್ಲಿ ಅನೇಕ ಕಡೆ ಡಾ; ಬಿ.ಆರ್.ಅಂಬೇಡ್ಕರ್ ಭವನಗಳಿದ್ದರೂ ಜಿಲ್ಲಾ ಮಟ್ಟದಲ್ಲಿ ಭವನ ನಿರ್ಮಾಣ ಮಾಡಲು 25 ವರ್ಷಗಳ ಹಿಂದೆ ಪ್ರಯತ್ನಿಸಿದರೂ ಸಾಕಾರಗೊಂಡಿರಲಿಲ್ಲ. ಇದು ಡಾ;ಬಿ.ಆರ್.ಅಂಬೇಡ್ಕರ್ ಅವರ 134 ನೇ ಜಯಂತಿ ಸಂದರ್ಭದಲ್ಲಿ ಸಾಕಾರಗೊಂಡಿದ್ದು ಸುಸಜ್ಜಿತ ಭವನ ನಿರ್ಮಾಣವಾಗಿ ಎಲ್ಲರಿಗೂ ಇಲ್ಲಿ ಕಾರ್ಯಕ್ರಮ ಮಾಡಲುಅವಕಾಶಗಳುಸಿಗುವಂತಾಗಬೇಕೆಂದು ತೋಟಗಾರಿಕೆ, ಗಣಿ ಮತ್ತು ಭೂ ವಿಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.



ಅವರು ಸೋಮವಾರ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಸರ್ಕ್ಯೂಟ್‌ಹೌಸ್ ಪಕ್ಕದಲ್ಲಿ ಡಾ; ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಸಮಾರಂಭದಲ್ಲಿ ಮಾತನಾಡಿದರು. ಜಿಲ್ಲಾ ಮಟ್ಟದಲ್ಲಿ ಡಾ;ಬಿ.ಆರ್.ಅಂಬೇಡ್ಕರ್ ರವರ ಭವನ ನಿರ್ಮಾಣ ಮಾಡುವುದು ಬಹಳ ದಿನಗಳ ಬೇಡಿಕೆಯಾಗಿತ್ತು. ಮುಖಂಡರ ಒಮ್ಮತದ ನಿರ್ಣಯದ ಕೊರತೆಯಿಂದ ಭವನ ನಿರ್ಮಾಣ 2000 ಇಸವಿಯಿಂದಲೂ ನೆನೆಗುದಿಗೆ ಬಿದ್ದಿತ್ತು. ಆದರೆ ಈಗ ಇದಕ್ಕೆ ಕಾಲಕೂಡಿಬಂದಿತು. ಸರ್ಕ್ಯೂಟ್‌ಹೌಸ್ ಪಕ್ಕದಲ್ಲಿ ಡಿಸಿಸಿ ಬ್ಯಾಂಕ್‌ಗೆ ಹಂಚಿಕೆಯಾದ 20 ಗುಂಟೆ ಜಾಗವನ್ನು ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಸರ್ಕಾರದ ಮಟ್ಟದಲ್ಲಿ ಮಂಜೂರಾತಿ ದೊರಕಿಸಿ, ಈ ಜಾಗಕ್ಕಾಗಿ ಡಿಸಿಸಿ ಬ್ಯಾಂಕ್‌ನಿಂದ ಭರಿಸಲಾಗಿದ್ದ 78 ಲಕ್ಷವನ್ನು ವಾಪಸ್ ಮಾಡಿಸುವ ಮೂಲಕ ಡಿಸಿಸಿ ಬ್ಯಾಂಕ್‌ಗೆ ಎಪಿಎಂಸಿ ಆವರಣದಲ್ಲಿ ಸ್ಥಳಾವಕಾಶ ಮಾಡಿಕೊಡಲಾಗಿದೆ ಎಂದರು. ಸರ್ಕಾರವು ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ರೂ.5 ಕೋಟಿಗೆ ಮಂಜೂರಾತಿ ನೀಡಿ ರೂ.1.5 ಕೋಟಿ ಅನುದಾನ ಬಿಡುಗಡೆ ಮಾಡಿದೆ. ಆದರೆ ಈ ಅನುದಾನ ಸಾಕಾಗದಿರುವುದರಿಂದ, ಇನ್ನೂ ಹೆಚ್ಚಿನ ಅನುದಾನ ತಂದು ಅತ್ಯಾಧುನಿಕ ಸೌಲಭ್ಯವುಳ್ಳ ಭವನ ನಿರ್ಮಾಣ ಮಾಡುವ ಮೂಲಕ, ಎಲ್ಲರೂ ಇಲ್ಲಿ ಕಾರ್ಯಕ್ರಮ ಮಾಡುವ ನಿಟ್ಟಿನಲ್ಲಿ ಭವನ ನಿರ್ಮಾಣ ಮಾಡಲಾಗುತ್ತದೆ ಎಂದರು.

ಈ ಹಿಂದೆ ಶಾಮನೂರು, ಬೇತೂರಿನಲ್ಲಿ ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲಾಗಿದೆ. ಅಲ್ಲಿ ಎಲ್ಲಾ ಸಮುದಾಯದವರು ಮದುವೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನೆರವೇರಿಸುತ್ತಾರೆ. ಈ ನಿಟ್ಟಿನಲ್ಲಿ ಭವನಗಳು ಉಪಯುತ್ತವಾಗಿದೆ. ಆದರೆ ನಗರದಲ್ಲಿನ ಬಾಬು ಜಗಜೀವನ್ ರಾಂ ಭವನ ಉಪಯೋಗಿಸಲು ಸಾಧ್ಯವಾಗದಿರುವುದರಿಂದ ಇಲ್ಲಿ ಸಮಾಜ ಕಲ್ಯಾಣ ಇಲಾಖೆ ಕಚೇರಿಯನ್ನು ಆರಂಭಿಸಬೇಕೆಂದು ತಿಳಿಸಿದರು.

ಮಾಯಕೊಂಡ ಶಾಸಕರಾದ ಕೆ. ಎಸ್.ಬಸವಂತಪ್ಪ ಮಾತನಾಡಿ ಬಹು ದಿನಗಳ ಬೇಡಿಕೆಯಾಗಿದ್ದ ಡಾ; ಬಿ.ಆರ್. ಅಂಬೇಡ್ಕರ್ ಭವನ ಆದಷ್ಟು ಬೇಗ ನಿರ್ಮಾಣವಾಗಬೇಕು. ಬೆಂಗಳೂರಿನ ವಸಂತ ನಗರದಲ್ಲಿ ನಿರ್ಮಾಣವಾಗಿರುವ ಅಂಬೇಡ್ಕರ್ ಭವನದಂತೆ ಈ ಭವನ ನಿರ್ಮಾಣವಾಗಬೇಕು. ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ನಿರ್ಮಾಣವಾಗುವುದರಿಂದ ಸರ್ವಋತು ಸಂಪರ್ಕಕ್ಕೆ ಅನುಕೂಲವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಪಾಲಿಕೆ ಆಯುಕ್ತೆ ರೇಣುಕಾ, ಮುಖಂಡರಾದ ಡಿ.ಬಸವರಾಜು, ಸಿ.ಉಮೇಶ್, ಮಲ್ಲೇಶಪ್ಪ, ಮಂಜುನಾಥ್, ರವಿನಾರಾಯಣ್, ಅಣ್ಣಪ್ಪ, ಹಾಲೇಶಪ್ಪ, ಎಂ.ನೀಲಗಿರಿಯಪ್ಪ, ಹನುಮಂತಪ್ಪ, ದುಗ್ಗಪ್ಪ, ಹೆಚ್.ಸಿ.ಮಲ್ಲಪ್ಪ, ಹೆಗ್ಗೆರೆ ರಂಗಪ್ಪ ಹಾಗೂ ವಿವಿಧ ಮುಖಂಡರು ಉಪಸ್ಥಿತರಿದ್ದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್ ಕೆ ಸ್ವಾಗತಿಸಿದರು.

## ಕಾರ್ಮಿಕ ಇಲಾಖೆಯೊಂದಿಗೆ ಸಭೆ, ಶೂಟೌಟ್ ಬಗ್ಗೆ ತನಿಖೆ



**ಬೆಂಗಳೂರು:** ಇತರ ರಾಜ್ಯಗಳಿಂದ ವಲಸೆ ಬಂದ ಕಾರ್ಮಿಕರನ್ನು ಒಳಗೊಂಡ ಹೆಚ್ಚುತ್ತಿರುವ ಅಪರಾಧಗಳ ಬಗ್ಗೆ ತೆಗೆದುಕೊಳ್ಳಬಹುದಾದ ಕ್ರಮಗಳ ಕುರಿತು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರೊಂದಿಗೆ ಗೃಹ ಮತ್ತು ಕಾರ್ಮಿಕ ಇಲಾಖೆಗಳ ಜಂಟಿ ಸಭೆ ನಡೆಸುವುದಾಗಿ ಗೃಹ ಸಚಿವ ಜಿ ಪರಮೇಶ್ವರ ಸೋಮವಾರ ಹೇಳಿದ್ದಾರೆ.

ಇತರ ರಾಜ್ಯಗಳಿಂದ ಕರ್ನಾಟಕಕ್ಕೆ ಬರುವ ಕಾರ್ಮಿಕ ಬಲವನ್ನು ತಡೆಯಲು ಸಾಧ್ಯವಿಲ್ಲ. ಆದರೆ, ಅವರು ಒಳಗೊಂಡಿರುವ ಅಪರಾಧ ಚಟುವಟಿಕೆಗಳನ್ನು ಗಮನಿಸಿ ಅದರ ವಿರುದ್ಧ ಕ್ರಮಗಳನ್ನು ತೆಗೆದುಕೊಳ್ಳುವ ಅವಶ್ಯಕತೆಯಿದೆ ಎಂದು ಹೇಳಿದರು.

ಬಿಹಾರದ ಪಾಟ್ನಾ ಮೂಲದ 35 ವರ್ಷದ ರಿತೇಶ್ ಕುಮಾರ್ ಎಂಬಾತ ಹುಬ್ಬಳ್ಳಿಯಲ್ಲಿ ಐದು ವರ್ಷದ ಬಾಲಕಿಯನ್ನು ಅಪಹರಿಸಿ, ಕೊಲೆ ಮಾಡಿದ್ದಾನೆ ಎಂಬ ಆರೋಪದ ಬೆನ್ನಲ್ಲೇ ಗೃಹ ಸಚಿವರು ಈ ಹೇಳಿಕೆ ನೀಡಿದ್ದಾರೆ. ಭಾನುವಾರ ರಿತೇಶ್ ಕುಮಾರ್ ಪೊಲೀಸರ ಗುಂಡಿಗೆ ಬಲಿಯಾಗಿದ್ದಾನೆ.

'ಬೆಂಗಳೂರು ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ನಗರವಾಗಿರುವುದರಿಂದ ಮತ್ತು ದೇಶದ ವಿವಿಧ ಭಾಗಗಳಿಂದ ರಾಜ್ಯಕ್ಕೆ ಕಾರ್ಮಿಕರು ಬರುತ್ತಿದ್ದಾರೆ. ಅನೇಕ ಸಂದರ್ಭಗಳಲ್ಲಿ ಅವರು ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದನ್ನು ನಾವು ನೋಡುತ್ತೇವೆ. ನಾವು ಈ ಬಗ್ಗೆ ಖಂಡಿತವಾಗಿಯೂ ಗಮನ ಹರಿಸುತ್ತೇವೆ' ಎಂದು ದೇಶದ ಇತರ ಭಾಗಗಳಿಂದ ಬರುವ ಜನರು ಇಂತಹ ಅಪರಾಧಗಳಲ್ಲಿ ಹೆಚ್ಚು ಭಾಗಿಯಾಗಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನಾನು ಕಾರ್ಮಿಕ ಸಚಿವರು ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸುತ್ತೇನೆ. ಇದನ್ನು ತಡೆಯಲು ನಾವು ಏನು ಮಾಡಬಹುದು ಎಂದು ನೋಡುತ್ತೇನೆ. ವಿವಿಧ ರಾಜ್ಯಗಳಿಂದ ಬರುವ ಕಾರ್ಮಿಕ ಬಲವನ್ನು ನಾವು ತಡೆಯಲು ಸಾಧ್ಯವಿಲ್ಲ. ಆದರೆ, ನಾವು ಕೆಲವು ಕ್ರಮಗಳನ್ನು ತೆಗೆದುಕೊಳ್ಳಬಹುದು. ನಾನು ಕಾರ್ಮಿಕ ಸಚಿವರೊಂದಿಗೆ ಚರ್ಚಿಸುತ್ತೇನೆ. ತೆಗೆದುಕೊಳ್ಳಬಹುದಾದ ಕ್ರಮಗಳ ಕುರಿತು ನಾವು (ಗೃಹ ಮತ್ತು ಕಾರ್ಮಿಕ ಇಲಾಖೆಗಳ) ಜಂಟಿ ಸಭೆ ನಡೆಸುತ್ತೇವೆ' ಎಂದರು.

ತನಿಖೆಗೆ ಆದೇಶ : ಭಾನುವಾರ ಹುಬ್ಬಳ್ಳಿಯಲ್ಲಿ ಬಿಹಾರದ ವ್ಯಕ್ತಿಯೊಬ್ಬ ಐದು ವರ್ಷದ ಬಾಲಕಿಯನ್ನು ಅಪಹರಿಸಿ ಕೊಂದ ಘಟನೆಯನ್ನು 'ಭಯಾನಕ' ಎಂದು ಕರೆದ ಗೃಹ ಸಚಿವರು, ಪೊಲೀಸರು ಆರೋಪಿಯನ್ನು ತಕ್ಷಣವೇ ಬಂಧಿಸಿದರು ಮತ್ತು ಸಾಕ್ಷ್ಯಗಳನ್ನು ಸಂಗ್ರಹಿಸಲು ಆತ ವಾಸಿಸುತ್ತಿದ್ದ ಸ್ಥಳಕ್ಕೆ ಕರೆದೊಯ್ಯುವಾಗ, ಆತ ಇದ್ದಕ್ಕಿದ್ದಂತೆ ಪೊಲೀಸರ ಮೇಲೆ ದಾಳಿ ಮಾಡಿದ್ದಾನೆ. ಈ ವೇಳೆ ಪೊಲೀಸರು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಆತನ ಮೇಲೆ ಗುಂಡು ಹಾರಿಸಿದ್ದಾರೆ. ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಆತ ಸಾವಿಗೀಡಾಗಿದ್ದಾನೆ' ಎಂದು ಹೇಳಿದರು.

'ಸತ್ಯಾಂಶ ಹೊರಬರಲು ಹಿರಿಯ ಅಧಿಕಾರಿಯಿಂದ ತನಿಖೆಗೆ ಆದೇಶಿಸಿದ್ದೇನೆ. ವರದಿ ಬರಲಿ' ಎಂದು ಅವರು ಹೇಳಿದರು.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಿಂದ ಅಹವಾಲು ಸ್ವೀಕಾರ

**ದಾವಣಗೆರೆ :** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರು ಏಪ್ರಿಲ್ 16 ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

ಎಸ್‌ಹೆಚ್‌ಡಬ್ಲ್ಯೂ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಸರ್ಕಾರಿ, ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಅಂತರಿಕ ದೂರು ಸಮಿತಿ, ಮಹಿಳಾ ದೌರ್ಜನ್ಯ ಪ್ರಕರಣ, ಮಹಿಳಾ ಮೀಸಲಾತಿ, ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಜಿಲ್ಲಾ ಪ್ರವಾಸ

**ದಾವಣಗೆರೆ :** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಏಪ್ರಿಲ್ 15, 16 ಮತ್ತು 17 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳುವರು.

ಏಪ್ರಿಲ್ 14 ರಂದು ರಾತ್ರಿ 8.30 ಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 15 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಯದೇವ ವೃತ್ತದ ಬಳಿ ಬ್ರಾಹ್ಮಣ ಹಾಸ್ಟೆಲ್ ಮುಂಭಾಗದಲ್ಲಿ ದಲಿತ ಸಂರಕ್ಷಣಾ ಸಮಿತಿಯಿಂದ ಹಮ್ಮಿಕೊಂಡಿರುವ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಲ್ಲಿ ಭಾಗವಹಿಸುವರು. ಮ.1.30 ಕ್ಕೆ ಆವರಗೊಳ್ಳ ಗ್ರಾಮ ವ್ಯಾಪ್ತಿಯ ಕೇಂದ್ರೀಯ ವಿದ್ಯಾಲಯ ಹಿಂಭಾಗದಲ್ಲಿ ವಾಸಿಸುತ್ತಿರುವ ಕುಟುಂಬಗಳ ಸ್ಥಳಕ್ಕೆ ಭೇಟಿ ನೀಡುವರು. ನಂತರ ಸಂಜೆ 5 ಗಂಟೆಗೆ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಕ್ಕೆ ಭೇಟಿ ನೀಡಿ ವಾಸ್ತವ್ಯ ಮಾಡುವರು.

ಏಪ್ರಿಲ್ 16 ರಂದು ಬೆಳಿಗ್ಗೆ 10.30ಕ್ಕೆ ಜಗಳೂರು ತಾಲ್ಲೂಕು ಆಸ್ಪತ್ರೆ ಹಾಗೂ ತಾಲ್ಲೂಕು ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 12 ಗಂಟೆಗೆ ಜಗಳೂರು ತಾಲ್ಲೂಕಿನ ಹನುಮಂತಪುರ ಗೊಲ್ಲರಹಟ್ಟಿ ಗ್ರಾಮಕ್ಕೆ ಭೇಟಿ ನೀಡುವರು. ನಂತರ ಮ.3 ರಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

## ವಿದ್ಯಾರ್ಥಿ ಜೀವನದಲ್ಲಿ ಗುರಿ–ಛಲ ಮುಖ್ಯ: ಡಾ. ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ:** ವಿದ್ಯಾರ್ಥಿಗಳಿಗೆ ಜೀವನದಲ್ಲಿ ಮುಂದೆ ಏನು ಮಾಡಬೇಕು ಎಂಬ ಗುರಿ ಇರಬೇಕು. ಜೊತೆಗೆ ಯಾವುದೇ ಅಡೆತಡೆಗಳು ಬಂದರೂ ಅದನ್ನು ಸಮರ್ಥವಾಗಿ ಎದುರಿಸುವ ಛಲ ಇರಬೇಕು ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕಿವಿಮಾತು ಹೇಳಿದರು.

ನಗರದ ನೂತನ ಕಾಲೇಜು ಸಭಾಂಗಣದಲ್ಲಿ ಜಿಲ್ಲಾ ಖಾಸಗಿ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘ ಮತ್ತು ಜಿಲ್ಲಾ ಪಂಚಾಯತ್,ಷಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ಸಕ್ಷಮ' ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಕೆಸಿಇಟಿ ಮತ್ತು ನೀಟ್ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಪರೀಕ್ಷೆಯಲ್ಲಿ ಸಮಯ ನಿರ್ವಹಣೆ ಮುಖ್ಯ ಈ ಬಗ್ಗೆ ಗಮನಹರಿಸಬೇಕು. ಈ ನಿಟ್ಟಿನಲ್ಲಿ ಸಕ್ಷಮ ತರಬೇತಿ ಉಪಯುಕ್ತವಾಗಿದೆ ಹಾಗೂ ದೈನಂದಿನ ಚಟುವಟಿಕೆಗಳಲ್ಲಿ ಇಲ್ಲಿ ಕಲಿತುಕೊಂಡ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಸಾಧ್ಯ ಎಂದರಲ್ಲದೆ, ವಿದ್ಯಾರ್ಥಿಗಳ ಯಶಸ್ಸಿನಲ್ಲಿ ನಮ್ಮ ಸಕ್ಷಮದ ಯಶಸ್ಸು ಅಡಗಿದೆ ಎಂದರು.

ಮಕ್ಕಳು ಪರೀಕ್ಷೆ ಬರೆಯುವ ಮುನ್ನ ಮನಸ್ಸನ್ನು ಶಾಂತರೀತಿಯಲ್ಲಿಟ್ಟುಕೊಳ್ಳಬೇಕು ಆಗ ಅಭ್ಯಾಸ ಮಾಡಿದ ಅಂಶಗಳು ನೆನಪಿನಲ್ಲಿರುತ್ತದೆ. ಸಕ್ಷಮದ ಮೂಲಕ ಉತ್ತಮ ತರಬೇತಿ ನೀಡಲಾಗಿದೆ. ವಿದ್ಯಾರ್ಥಿಗಳು ಪರೀಕ್ಷೆ ಯಲ್ಲಿ ಉತ್ತಮ ಅಂಕಗಳಿಸುವ ಮೂಲಕ ನಮ್ಮ ಶ್ರಮ ಸಾರ್ಥಕಗೊಳಿಸಬೇಕು ಎಂದು ಕರೆ ನೀಡಿದರು

ಸಿಇಟಿ, ನೀಟ್ ಹಾಗೂ ಜೆಇಇ ಪರೀಕ್ಷೆ ಯಾವ ರೀತಿ ಬರೆಯಬಹುದು ಎಂದು ಶಿಕ್ಷಣ ತಜ್ಞರಾದ ಚೇತನ್ ರಾಂ ಅವರು ಈಗಾಗಲೇ ತಮ್ಮ ನುಡಿಗಳ ಮೂಲಕ ಹುರಿದುಂಬಿಸಿದ್ದಾರೆ ಇದು ವಿದ್ಯಾರ್ಥಿಗಳಿಗೆ ಸಾಕಷ್ಟು ಉಪಯೋಗವಾಗಿದೆ.

ಪರೀಕ್ಷೆ ಇನ್ನೇನು ಸಮೀಪಿಸುತ್ತಿದೆ ಸಕ್ಷಮದ ಮೂಲಕ ನೀಡಿರುವ ತರಬೇತಿಯ ಮನನ ಮಾಡಿಕೊಳ್ಳಿರಿ ಎಂದು ಸಲಹೆ ನೀಡಿದರು.

ನಂತರ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಮಕ್ಕಳ ಅನಿಸಿಕೆಗಳನ್ನು ಆಲಿಸಿ ಅವರ ಅಭಿಪ್ರಾಯ ಪಡೆದರು.

ದೈನಂದಿನ ದಿನಚರಿ ಹಾಗೂ ವಿದ್ಯಾಭ್ಯಾಸದ ಬಗ್ಗೆ ಮಾಹಿತಿ ಪಡೆದುಕೊಂಡರು ಹಾಗೂ ಸಕ್ಷಮದ ಪ್ರಯೋಜನದ ಬಗ್ಗೆ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಇದೇ ಸಂದರ್ಭದಲ್ಲಿ 2024–25ನೇ ಸಾಲಿನ ದ್ವಿತೀಯ ಪಿಯುಸಿ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ವಿಭಾಗದ ದಾವಣಗೆರೆ ಜಿಲ್ಲಾ ಟಾಪರ್ಸ್ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಜಿಪಂ ಸಿಇಓ ಡಾ. ಸುರೇಶ್ ಬಿ ಇಟ್ನಾಳ್, ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್. ಜಿ. ಕರಿಸಿದ್ದಪ್ಪ, ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಶ್ರೀಧರ್ ನಗರದ ವಿವಿಧ ಕಾಲೇಜುಗಳ ಮುಖ್ಯಸ್ಥರಾದ ಡಾ. ಡಿ.ಎಸ್. ಜಯಂತ್, ವೀರೇಶ್ ಪಟೇಲ್, ಡಾ. ಜಿ.ಎನ್. ಹೆಚ್. ಕುಮಾರ್, ವೈ.ವಿ. ವಿನಯ್, ಕೆ.ಎಂ. ಮಂಜಪ್ಪ, ಡಾ. ಎ. ತಿಮ್ಮಾರೆಡ್ಡಿ, ಎನ್.ಸಿ. ಪ್ರಶಾಂತ್, ನಾಡಗೌಡರು, ಪ್ರಸಾದ್ ಬಂಗೇರ ಇನ್ನಿತರರು ಉಪಸ್ಥಿತರಿದ್ದರು.

## ಡಾ. ಬಾಬಾಸಾಹೇಬ್ ಅಂಬೇಡ್ಕರ್ ದೇಶದ ಮಹಾನ್ ಚೇತನ : ಚೌಡಪ್ಪ



**ದಾವಣಗೆರೆ :** ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಶೋಷಿತರ ಪರ, ಹಿಂದುಳಿದವರ ಪರ, ದಲಿತರ ಹಾಗೂ ಜಾತಿವಾದಿಗಳ ವಿರುದ್ಧ ಹೋರಾಟ ಮಾಡಿದ ಮಹಾನ್ ಚೇತನ ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಸಮಿತಿಯ ರಾಜ್ಯಾಧ್ಯಕ್ಷ ಚೌಡಪ್ಪ ಹೇಳಿದರು.

ನಗರದ ಎಸ್.ಓ.ಜಿ. ಕಾಲೋನಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯದ ನಾಯಕರಲ್ಲ. ಅವರು ಸಮಾನತೆಯ, ನ್ಯಾಯದ, ಮಾನವತೆಯ ಜಾಗೃತ ಚೇತನ. ಇಂದಿಗೂ ಅವರ ಚಿಂತನೆಗಳು ಅಸಮಾನತೆಯ ವಿರುದ್ಧದ ಹೋರಾಟದಲ್ಲಿ ಬೆಳಕಾಗಿವೆ. ಸಮಾಜದಲ್ಲಿ ಅಸ್ಪೃಶ್ಯತೆ ನಿವಾರಣೆಯಲ್ಲಿ ಅವರ ಪಾತ್ರ ಪ್ರಮುಖವಾಗಿದೆ. ಡಾ. ಬಾಬಾಸಾಹೇಬ್ ತಂದೆಯವರ ನೀತಿ ಪಾಠ ಇಡೀ ಸಮಾಜಕ್ಕೆ ಸಹಕಾರಿಯಾಗಿದೆ. ಪರಿಶಿಷ್ಟ, ಜಾತಿ ಪಂಗಡ, ಹಿಂದುಳಿದ ಜನಾಂಗದವರಿಗೆ ಮಾಡಿದ ಮಾಡಿದ ತ್ಯಾಗ ಇಂದಿಗೂ ಎಲ್ಲರ ಮನದಲ್ಲಿ ಹಚ್ಚಹಸಿರಾಗಿ ಉಳಿದಿದೆ ಎಂದು ಹೇಳಿದರು.

ಜಿಲ್ಲಾಧ್ಯಕ್ಷ ಬಿ. ಕಲ್ಲೇಶಪ್ಪ ಅವರು ಮಾತನಾಡಿ, ಸಂವಿಧಾನ ನಮ್ಮ ದೇಶದ ಸಂಪತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ನಮ್ಮ ದೇಶಕ್ಕೆ ಸಂವಿಧಾನ ರಚಿಸಿ ಇಡೀ ದೇಶಕ್ಕೆ ಮಹಾನ್ ನಾಯಕರಾಗಿದ್ದಾರೆ. ಅವರ ಆದರ್ಶ, ಚಿಂತನೆಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್. ತಿಮ್ಮಣ್ಣ ಮಾತನಾಡಿ, ನಮ್ಮ ದೇಶದಲ್ಲಿ ಸ್ವಾತಂತ್ರ್ಯ ಸಿಗುವುದಕ್ಕೆ ಮುಂಚೆ ಬ್ರಿಟೀಷ ಕಪಿಮುಷ್ಠಿಯಲ್ಲಿ ಇದ್ದೇವೆ, 1947ರಲ್ಲಿ ಸ್ವಾತಂತ್ರ್ಯ ಸಿಕ್ಕ ಮೇಲೆ ನಮಗೆ ಸುಮಾರು ವರ್ಷಗಳ ಕಾಲ ಮತದಾನದ ಹಕ್ಕು ಸಿಕ್ಕಿರಲಿಲ್ಲ, 1950ರಲ್ಲಿ ಅವರು ಡಾ. ಅಂಬೇಡ್ಕರ್ ಅವರು 1ನೇ ಕಾನೂನು ಮಂತ್ರಿಯಾದರು. ನಂತರ ಸಂವಿಧಾನದ ಕರಡು ಸಮಿತಿ ಅಧ್ಯಕ್ಷರಾದರು. ಅವರಿಗೆ ಸರ್ಕಾರ ಸಂವಿಧಾನ ರಚನೆ ಮಾಡಲು ಆಹ್ವಾನ ಬಂತು. ಆ ಸಂದರ್ಭದಲ್ಲಿ ಹಗಲು ರಾತ್ರಿ ಎನ್ನದೇ ನಿದ್ದೆಗೆಟ್ಟು ನಮ್ಮ ಭಾರತಕ್ಕೆ ಸಂವಿಧಾನ ರಚನೆ ಮಾಡಿದರು. ಆಗ ನಮ್ಮ ದೇಶಕ್ಕೆ ಸಂಪೂರ್ಣವಾಗಿ ಸ್ವಾತಂತ್ರ್ಯ ಸಿಕ್ಕಂತಾಯಿತು. ಅದೇ ರೀತಿ ಸಮಾಜದಲ್ಲಿ ಹೆಣ್ಣು ಮಕ್ಕಳಿಗೆ ಸಮಾನತೆ ದೊರೆಯಿತು ಎಂದು ಹೇಳಿದರು.

ಸಿದ್ದಲಿಂಗಪ್ಪ, ಟಿ. ಬವರಾಜ್, ಟ್ರ್ಯಾಕ್ಟರ್ ನಾಗಣ್ಣ, ಚೆಲುವರಾಜ್, ಪಾಂಡು, ಲಕ್ಷ್ಮಣ, ಹನುಮಂತ, ನಾಗರಾಜ್, ಶಿವಣ್ಣ, ಮೋಹನ, ಆಶೀಫ್ ಸಾಹೇಬ್, ಸಂತೋಷ್, ಶಿವಣ್ಣ, ಪೆದ್ದಣ್, ಅಂಬರೀಶ್, ಪ್ರಶಾಂತ್, ಬ್ಯಾಂಡ್ ಸಟ್ ಗುರುಮೂರ್ತಿ ಮತ್ತಿತರರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ಶಾಂತಿನಾಥ ಸ್ವಾಮಿ, ವರಮಹಾಲಕ್ಷ್ಮಿ ರಥೋತ್ಸವ



**ಕಳಸ:** ಸಂಸೆ ಗ್ರಾಮದ ಶಾಂತಿನಾಥ ಸ್ವಾಮಿ ಮತ್ತು ವರಮಹಾಲಕ್ಷ್ಮಿಯ ವಾರ್ಷಿಕ ರಥೋತ್ಸವ ಶ್ರದ್ಧಾ ಭಕ್ತಿಯಿಂದ ನೆರವೇರಿತು. ಧ್ವಜಾರೋಹಣದ ಮೂಲಕ ಶಾಂತಿನಾಥ ಸ್ವಾಮಿ, ವರಮಹಾಲಕ್ಷ್ಮಿ ದೇವಿಯ ರಥೋತ್ಸವಕ್ಕೆ ಚಾಲನೆ ನೀಡಲಾಗಿತ್ತು. ಕ್ಷೇತ್ರಪಾಲ ದೇವರು, ಬ್ರಹ್ಮಯಕ್ಷರಿಗೆ ಆರಾಧನಾ ಪೂರ್ವಕ ಕಲಾರೋಪಣ, ಶ್ರೀಪೀಠ ಯಂತ್ರಾರಾಧನೆ, ಸರ್ವಾಹ್ಣ ಯಕ್ಷರ ಪಲ್ಲಕ್ಕಿ ವಿಹಾರ ನಡೆದಿತ್ತು.ಪ್ರತಿದಿನ ನಡೆಯುತ್ತಿದ್ದ ಧಾರ್ಮಿಕ ವಿಧಿಗಳು ಮತ್ತು ಸಂಪ್ರದಾಯಗಳಲ್ಲಿ ಸಂಸೆ ಗ್ರಾಮದ ಭಕ್ತರು ಸಕ್ರಿಯವಾಗಿ ಪಾಲ್ಗೊಂಡಿದ್ದರು. ಮಹಾವೀರ ಜಯಂತಿ ದಿನದಂದು ಪದ್ಮಾವತಿ ಮತ್ತು ವರಮಹಾಲಕ್ಷ್ಮಿ ಅಮ್ಮನವರಿಗೆ ಕಲಾರೋಪಣೆ ಮತ್ತು ನಯನೋನ್ಮಿಲನ ನೆರವೇರಿಸಲಾಗಿತ್ತು.

ಶಾಂತಿಚಕ್ರ ಯಂತ್ರಾರಾಧನೆ ಮತ್ತು ಕಲಿಕುಂಡ ಯಂತ್ರಾರಾಧನೆ, ರಾತ್ರಿ ಬ್ರಹ್ಮದೇವರ ದಿಂಡಿ ಮಹೋತ್ಸವ ನೆರವೇರಿಸಲಾಗಿತ್ತು. ಶಾಂತಿನಾಥ ಸ್ವಾಮಿ, ಪಾರ್ಶ್ವನಾಥ ಸ್ವಾಮಿಗೆ ಅಭಿಷೇಕ ನೆರವೇರಿಸಿ ಆನಂತರ ಶಾಂತಿನಾಥ ತೀರ್ಥಂಕರ ಹಾಗೂ ವರಮಹಾಲಕ್ಷ್ಮಿ ದೇವಿಯ ರಥಾರೋಹಣ ಜರುಗಿತು. ಸ್ಥಳದಲ್ಲಿ ನೆರೆದಿದ್ದ ಭಕ್ತರು ಈ ಸಂದರ್ಭದಲ್ಲಿ ಜೈಕಾರ ಹಾಕಿದರು.

ಬಳಿಕ, ದೇವರ ಮನೆಯಿಂದ ಪದ್ಮಾವತಿ ದೇವಿ ಬಿಜಯವಾದ ನಂತರ ಮಲ್ಲೇಶ್ವರದಿಂದ ಧರ್ಮದೇವತೆಗಳ ಭಂಡಾರ ಬಂದು ದೈವ ದೇವರ ಸಮಾಗಮ ನಡೆಯಿತು. ಚಾವಡಿಯಿಂದ ದೇವಸ್ಥಾನಕ್ಕೆ ರಾಜಬೀದಿಯಲ್ಲಿ ಲಾಲಿಕೆ ಜೋಡು ಪಲ್ಲಕ್ಕಿಗಳ ಉತ್ಸವ ನಡೆದ ಬಳಿಕ, ರಥೋತ್ಸವ ನೆರವೇರಿತು.

## ಡಾ. ಬಿ.ಆರ್. ಅಂಬೇಡ್ಕರ್ ಬಹುಮುಖಿ ವ್ಯಕ್ತಿತ್ವದ ವಿಶ್ವಜ್ಞಾನಿ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು: ಏ. 14:** ದೇಶದಲ್ಲಿನ ಸಾಮಾಜಿಕ ಅಸಮಾನತೆ ಹೋಗಲಾಡಿಸಲು ಹಗಲಿರುಳು ಶ್ರಮಿಸಿ ಸಮಸಮಾಜದ ಬಲವರ್ಧನೆಗೆ ದಿಟ್ಟತನದಿಂದ ಹೋರಾಡಿದ ಡಾ. ಬಿ.ಆರ್. ಅಂಬೇಡ್ಕರ್ ಮಹಾನ್ ತಪಸ್ವಿಯಾಗಿದ್ದಾರೆ ಅವರೊಬ್ಬ ಬಹುಮುಖಿ ವ್ಯಕ್ತಿತ್ವದ ವಿಶ್ವಜ್ಞಾನಿ ಎಂದು ವಿಧಾನ ಸಭೆ ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಡಿದರು.



ಅಂಬೇಡ್ಕರ್ ಅವರ ವೈಜ್ಞಾನಿಕ ಚಿಂತನೆಗಳು ಪ್ರಸ್ತುತ ಮನುಕುಲದ ಉಳಿವಿಗೆ ಹಾಗೂ ದೇಶದ ಪ್ರಗತಿಗೆ ಆಧಾರ ಸ್ಥಂಭಗಳಾಗಿದೆ. ಅವರು ವಿಶ್ವದ ಮಹಾನ್ ಸಂಶೋಧಕರು, ದೇಶದ ಸಾಮಾಜಿಕ, ರಾಜಕೀಯ, ಶೈಕ್ಷಣಿಕ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಜ್ವಲಂತ ಸಮಸ್ಯೆಗಳಿಗೆ ವೈಜ್ಞಾನಿಕ ಸುಧಾರಣೆಗಳನ್ನು ಅವಿಷ್ಕರಿಸುವ ಮೂಲಕ ದೇಶದ ಭದ್ರತೆಗೆ ಸಂವಿಧಾನ ರಚಿಸಿದ್ದಾರೆ. ಅವರ ಮೌಲ್ಯಯುತ ಚಿಂತನೆ ಮತ್ತು ಸಾಧನೆಯನ್ನು ಯುವ ಜನಾಂಗ ಸ್ಮರಿಸಿಕೊಂಡು ಹೊಸತನದ ಸಮಾಜಕ್ಕೆ ಸ್ವತಂತ್ರ ಮನಸ್ಸಿನಿಂದ ತೆರೆದುಕೊಳ್ಳಬೇಕಿದೆ ಎಂದರು.

ಸಮಾನತೆಯ ಸಂದೇಶ ಸಾರಿದ ಡಾ. ಬಿ.ಆರ್ ಅಂಬೇಡ್ಕರ್ ಅವರ ಅಧ್ಯಯನದ ಶಿಸ್ತು, ಕಾರ್ಯಬದ್ಧತೆ ಮತ್ತು ಕರ್ತವ್ಯ ಪ್ರಜ್ಞೆಯ ಮೂಲಕ ಇಡೀ ಜಗತ್ತನ್ನೇ ಬೆಳಗಿದರು. ಸಮಾಜದ ಎಲ್ಲಾ ವರ್ಗಗಳ ಬದಲಾವಣೆಗೆ ಬೆಳಕು ತೋರಿದರು. ಅವರು ಕೌಟುಂಬಿಕ ಬದುಕಿಗೆ ಆದ್ಯತೆ ನೀಡದೆ ಶೋಷಿತ ಹಾಗೂ ದುರ್ಬಲರ ಪರವಾಗಿ ದಿಟ್ಟತನದಿಂದ ಹೋರಾಡಿದ ಮಹಾನ್ ಚೇತನ ಎಂದು ಹೇಳಿದರು.

ವಿಧಾನ ಪರಿಷತ್ ಶಾಸಕರಾದ ಸಿ.ಟಿ ರವಿ ಮಾತನಾಡಿ ಬಾಬಾಸಾಹೇಬ್ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಅವರು ದೇಶಕ್ಕೆ ನೀಡಿದ ಸಂವಿಧಾನದ ಆಶಯಕ್ಕೆ ಚ್ಯುತಿಯಾಗದಂತೆ ಪ್ರತಿಯೊಬ್ಬರು ಅದನ್ನು ಉಳಿಸುವ ಪ್ರಯತ್ನ ಮಾಡಿದಾಗ ಅಂಬೇಡ್ಕರ್ ಜಯಂತಿಗೆ ಪರಿಪೂರ್ಣ ಅರ್ಥ ದೊರೆಯುತ್ತದೆ ಎಂದು ಹೇಳಿದರು

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

### ವೃಷಭ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೆಯೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಪ್ರೀತಿಯಲ್ಲಿ ಬೀಳುವುದು ಇಂದು ನಿಮಗೆ ಕೆಟ್ಟದಾಗಿರಬಹುದಾದ್ದರಿಂದ ನೀವು ಜಾಗರೂಕರಾಗಿರಿ.

### ಮಿಥುನ ರಾಶಿ

ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪೋತ್ಸಾಹಿಸಿ. ತಾತ್ಕಾಲಿಕ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಮಕ್ಕಳು ಅಭ್ಯಾಸಗಳ ಮೇಲೆ ಗಮನ ಹರಿಸಬೇಕು ಹಾಗೂ ಭವಿಷ್ಯದ ಬಗ್ಗೆ ಯೋಜನೆ ರೂಪಿಸಬೇಕು. ನೀವು ಇನ್ನು ಮುಂದೆ ನಿಮ್ಮ ಕಾಮಪ್ರಚೋದಕ ಕಲ್ಪನೆಗಳ ಬಗ್ಗೆ ಕನಸು ಕಾಣಬೇಕಾಗಿಲ್ಲ; ಅವು ಇಂದು ನಿಜವಾಗಬಹುದು.

### ಕರ್ಕ ರಾಶಿ

ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಪಾಲಕರು ಮತ್ತು ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸಲು ಅವರಿಗೆ ಸಾಧ್ಯವಾದದ್ದನ್ನೆಲ್ಲ ಮಾಡುತ್ತಾರೆ

### ಸಿಂಹ ರಾಶಿ

ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ ಮತ್ತು ಬುದ್ಧಿವಂತಿಕೆಯನ್ನಿರಿಸಿದೆ – ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಕನ್ಯಾ ರಾಶಿ

ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರಣಯ ಮತ್ತು ಸಾಮಾಜಿಕವಾಗಿ ಬೆರೆಯುವುದು ಬಾಕಿಯಿರುವ ಕೆಲಸಗಳ ಹೊರತಾಗಿಯೂ ನಿಮ್ಮ ಮನಸ್ಸಿನ ಮೇಲೆ ಪ್ರಭಾವ ಬೀರುತ್ತವೆ. ನಿಮ್ಮ ವಿಶ್ವಾಸ ಬೆಳೆಯುತ್ತಿದೆ ಮತ್ತು ಪ್ರಗತಿ ಸ್ಪಷ್ಟವಾಗುತ್ತಿದೆ.

### ತುಲಾ ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ. ಅನಿರೀಕ್ಷಿತ ಬಿಲ್ಲುಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ.

### ವೃಶ್ಚಿಕ ರಾಶಿ

ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ದೂರದ ಸ್ಥಳದ ಸಂಬಂಧಿಗಳು ಇಂದು ನಿಮ್ಮನ್ನು ಸಂಪರ್ಕಿಸಬಹುದು. ನೀವು ಕೆಲವು ಪ್ರವಾಸೀ ತಾಣಗಳಿಗೆ ಭೇಟಿ ನೀಡುವ ಮೂಲಕ ನಿಮ್ಮ ಪ್ರೇಮ ಜೀವನವನ್ನು ಉಜ್ವಲಗೊಳಿಸಬಹುದು.

### ಧನು ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಸಂಬಂಧಿಗಳು / ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ.ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ

### ಮಕರ ರಾಶಿ

ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡಬೇಡಿ. ನೀವು ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ಇಂದು ರಾತ್ರಿ ಸಣ್ಣ ವಿಷಯಗಳಲ್ಲೂ ಕೂಡ ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧಗಳು ಶಿಥಿಲಗೊಳ್ಳುತ್ತವೆ.

### ಕುಂಭ ರಾಶಿ

ಖಂಡಿತವಾಗಿಯೂ ಆರೋಗ್ಯದ ಆರೈಕೆಯ ಅಗತ್ಯವಿದೆ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ. ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ. ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

### ಮೀನ ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ನಿಮ್ಮ ಜೀವನ ಸಂಗಾತಿಯೊಂದಿಗೆ ಹಣದ ಯಾವುದೇ ವಿಷಯದ ಬಗ್ಗೆ ಇಂದು ನಿಮ್ಮ ಜಗಳವಾಗಬಹುದು. ಆದಾಗ್ಯೂ ನೀವು ನಿಮ್ಮ ಶಾಂತ ಸ್ವಭಾವದಿಂದ ಎಲ್ಲವನ್ನು ಸರಿಗೊಳಿಸಬಹುದು.

# ಅನಂತನಾಗ್ ಸಹಜ ಅಭಿನಯದ ಪ್ರತಿಭೆ: ಡಾ.ಸಿ.ಕೆ.ಸುಬ್ಬರಾಯ

**ಚಿಕ್ಕಮಗಳೂರು:** ಅನಂತನಾಗ್ ಎಲ್ಲಾ ಕಾಲಕ್ಕೂ ಸಲ್ಲುವ ಬಹುಮುಖ ಪ್ರತಿಭೆಯ ನಟ. ಕನ್ನಡ, ಹಿಂದಿ ಸೇರಿದಂತೆ ಐದಾರು ಭಾಷೆಗಳಲ್ಲಿ ತಮ್ಮ ಸಹಜ ಅಭಿನಯದಿಂದ ಗಮನ ಸೆಳೆದವರು ಎಂದು ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್ ಡಾ.ಸಿ.ಕೆ.ಸುಬ್ಬರಾಯ ಅಭಿಪ್ರಾಯ ವ್ಯಕ್ತಪಡಿಸಿದರು.

ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್, ಯುರೇಕಾ ಅಕಾಡೆಮಿ ಹಾಗೂ ಮಲೆನಾಡು ವಿದ್ಯಾಸಂಸ್ಥೆಯ ಸಹಭಾಗಿತ್ವದಲ್ಲಿ ಎಂ.ಇ.ಎಸ್. ಕಾಲೇಜು ಆವರಣದಲ್ಲಿ ಭಾನುವಾರ ಸಂಜೆ ಆಯೋಜಿಸಿದ್ದ ಖ್ಯಾತ ನಟ ಪದ್ಮಭೂಷಣ ಅನಂತನಾಗ್ ಗೀತೆಗಳ ವಿಶೇಷ ಪೂರ್ವಿ ಗಾನಯಾನ–107ರ 'ಅನಂತಗಾನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅನಂತನಾಗ್ ವ್ಯಾಸಂಗ ಮಾಡುತ್ತಿರುವಾಗಲೇ ರಂಗಭೂಮಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡವರು. ಅನಂತರದಲ್ಲಿ ಸಿನಿಮಾ ರಂಗ ಹಾಗೂ ಕಿರಿತೆರೆಯಲ್ಲಿ ಕೂಡ ತಮ್ಮ ಅಭಿನಯ ಪ್ರತಿಭೆಯ ಛಾಪೊತ್ತಿದ ಮಹಾನ್ ಕಲಾವಿದ. ಅವರ ನಟನಾ ಶೈಲಿಯಿಂದ ಅನೇಕ ಉದಯೋನ್ಮುಖ ನಟರು ಸ್ಫೂರ್ತಿ ಪಡೆದುಕೊಂಡಿದ್ದಾರೆ. ಅವರೋರ್ವ ಪ್ರಬುದ್ಧ ನಟರಾಗಿ ನಾಡಿಗೆ, ವಿಶ್ವಕ್ಕೆ ನೀಡಿರುವ ಕೊಡುಗೆ ಅಪಾರ ಎಂದು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಂ.ಆರ್.ದೇವರಾಜಶೆಟ್ಟಿ ಮಾತನಾಡಿ, ನಗರದ ಅನೇಕ ಯುವ ಪ್ರತಿಭೆಗಳಿಗೆ ತಮ್ಮ ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್‌ನ ಅಧ್ಯಕ್ಷ ಎಂ.ಎಸ್.ಸುಧೀರ್ ಅವಕಾಶ ನೀಡಿ ಬೆಳೆಸಿದ್ದಾರೆ ಎಂದು ಶ್ಲಾಘಿಸಿದರು.

ಅಭಿನಂದನೆ ಸ್ವೀಕರಿಸಿದ ಗಾಯಕಿ ಪ್ರಣಮ್ಯ ಕಶ್ಯಪ್ ಮಾತನಾಡಿ, ತಾವು 5ನೇ ತರಗತಿ ವ್ಯಾಸಂಗ ಮಾಡುವ ಕಾಲಕ್ಕೆ ಚಿಕ್ಕಮಗಳೂರಿಗೆ ಬಂದಿದ್ದು, ಎಳವೆಯಿಂದ ಸಂಗೀತದ ಆಸಕ್ತಿ ಮೂಡಿತ್ತು. ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಿಯುವುದರ ಜೊತೆಗೆ ಸುಗಮ ಸಂಗೀತ ಕಲಿಕೆಯಲ್ಲಿ ಕೂಡ ತೊಡಗಿಸಿಕೊಂಡಿದ್ದು, ಅದಕ್ಕೆ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್‌ನ ಮುಖ್ಯಸ್ಥ ಎಂ.ಎಸ್.ಸುಧೀರ್ ಅವಕಾಶ ನೀಡಿ ಪ್ರೋತ್ಸಾಹಿಸಿದರು. ಈ ನಗರದಲ್ಲಿ ಶಾಸ್ತ್ರೀಯ ಸಂಗೀತಕ್ಕೆ ಉತ್ತೇಜನ ಕಡಿಮೆ ಇದ್ದು, ಮುಂದಿನ ದಿನಗಳಲ್ಲಿ ಈ ಕ್ಷೇತ್ರಕ್ಕೂ ಹೆಚ್ಚು ಅವಕಾಶ ವಿಸ್ತರಣೆಯಾಗಬೇಕೆನ್ನುವುದು ತಮ್ಮ ಆಶಯ ಎಂದು ಹೇಳಿದರು.

ಮಲೆನಾಡು ವಿದ್ಯಾಸಂಸ್ಥೆಯ ನಿರ್ದೇಶಕಿ ಜಯಶ್ರೀ ಜೋಷಿ ಮಾತನಾಡಿದರು. ಪ್ರಾಸ್ತಾವಿಕ ಮಾತನಾಡಿದ ಎಂ.ಎಸ್.ಸುಧೀರ್ ಸ್ವಾಗತಿಸಿದರು. ಸುಮಾ ಪ್ರಸಾದ್ ಕಾರ್ಯಕ್ರಮ ನಿರೂಪಿಸಿದರು. ರೂಪಾ ನಾಯ್ಕ್ ವಂದಿಸಿದರು.

ಗಾಯಕ ಎಂ.ಎಸ್.ಸುಧೀರ್ ಸಾರಥ್ಯದಲ್ಲಿ ಗಾಯಕರಾದ ಚೇತನ್‌ರಾಮ್, ದೀಪಕ್ ಪಿ.ಎಸ್., ರೂಪ ಅಶ್ವಿನ್, ಅನುಷ, ಸುಂದರ ಲಕ್ಷ್ಮೀ, ಚೈತನ್ಯ, ಪ್ರಣಮ್ಯ, ಪೃಥ್ವಿಶ್ರೀ ಅನಂತನಾಗ್ ಅಭಿನಯದ ಚಲನಚಿತ್ರಗಳ ವೈವಿಧ್ಯಮಯ ಗೀತೆಗಳಿಗೆ ಧ್ವನಿಯಾಗಿ ಸಭಿಕರನ್ನು ರಂಜಿಸಿದರು.




ಮಲೆನಾಡು ವಿದ್ಯಾಸಂಸ್ಥೆಯ ಸಹಭಾಗಿತ್ವದಲ್ಲಿ ಎಂ.ಇ.ಎಸ್. ಕಾಲೇಜು ಆವರಣದಲ್ಲಿ ಭಾನುವಾರ ಸಂಜೆ ಆಯೋಜಿಸಿದ್ದ ಪೂರ್ವಿ ಗಾನಯಾನ–107ರ 'ಅನಂತಗಾನ' ಕಾರ್ಯಕ್ರಮದಲ್ಲಿ ಗಾಯಕಿ ಪ್ರಣಮ್ಯ ಕಶ್ಯಪ್ ಅವರನ್ನು ಅಭಿನಂದಿಸಲಾಯಿತು.

# ಲಕ್ಷ್ಮೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವ, ಹನುಮನ ಜಯಂತಿಯಲ್ಲಿ ಜಿ. ಬಿ. ವಿನಯ್ ಕುಮಾರ್ ಭಾಗಿ

**ದಾವಣಗೆರೆ:** ಹರಿಹರ ತಾಲೂಕಿನ ಮಲೇಬೆನ್ನೂರಿನ ಕೋಮಾರನಹಳ್ಳಿಯ ಹೆಳವನಕಟ್ಟೆ ಲಕ್ಷ್ಮೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವದಲ್ಲಿ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಭಾಗಿಯಾದರು.

ಗಜೇಂದ್ರಮೋಕ್ಷದ ಬಳಿಕ ಆರಂಭವಾದ ಉತ್ಸವಮೂರ್ತಿಯ ಗ್ರಾಮ ಪ್ರದಕ್ಷಿಣೆಯಲ್ಲಿ ಪಾಲ್ಗೊಂಡು ಪುನೀತರಾದರು. ರಥಕ್ಕೆ ಭಕ್ತರು ಬಾಳೆಹಣ್ಣು, ತೆಂಗಿನಕಾಯಿ ಸಮರ್ಪಿಸಿದರಲ್ಲದೇ, ಹರಿಹರ ಮಹಾದೇವ, ಲಕ್ಷ್ಮೀ ರಮಣ ರಮಾರಮಣ, ಇಂದಿರಾ ರಮಣ, ಗೋವಿಂದ ಗೋವಿಂದ ಎಂದು ಹೇಳುತ್ತಾ ಭಕ್ತರ ಜೊತೆ ವಿನಯ್ ಕುಮಾರ್ ಅವರೂ ರಥೋತ್ಸವದಲ್ಲಿ ಪಾಲ್ಗೊಂಡು ಗಮನ ಸೆಳೆದರು.

ಜಿ. ಬಿ. ವಿನಯ್ ಕುಮಾರ್ ಅವರು ಕೊಮಾರನಹಳ್ಳಿಗೆ ಆಗಮಿಸುತ್ತಿದ್ದಂತೆ ಗ್ರಾಮದ ಮುಖಂಡರು ಅದ್ದೂರಿ ಸ್ವಾಗತ ಕೋರಿದರು. ಡೊಳ್ಳು, ತಮಟೆ ಹಾಗೂ ಜಾಂಜ್ ಮೇಳ ಸೇರಿದಂತೆ ವಿವಿಧ ಕಲಾ ತಂಡಗಳು ಮೆರವಣಿಗೆಗೆ ರಂಗು ತಂದವು. ಗ್ರಾಮಸ್ಥರ ಜೊತೆ ವಿನಯ್ ಕುಮಾರ್ ಅವರೂ ಸಹ ಡೊಳ್ಳು, ತಮಟೆ, ಜಾಂಜ್ ಮೇಳದಲ್ಲಿ ಕುಣಿಯುತ್ತಾ, ಬಾರಿಸುತ್ತಾ ಎಲ್ಲರನ್ನೂ ರಂಜಿಸಿದರು. ವಿನಯ್ ಕುಮಾರ್ ಅವರ ಸರಳತೆಗೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು. ಈ ವೇಳೆ ಯುವಕರು ವಿನಯ್ ಕುಮಾರ್ ಅವರ ಜೊತೆ ಸೆಲ್ಫಿ ತೆಗೆದುಕೊಳ್ಳಲು ಮುಗಿಬಿದ್ದ ದೃಶ್ಯವೂ ಕಂಡುಬಂತು.

ಈ ವೇಳೆ ಮಾತನಾಡಿದ ವಿನಯ್ ಕುಮಾರ್ ಅವರು, ಲಕ್ಷ್ಮೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವದಲ್ಲಿ ಪಾಲ್ಗೊಂಡಿದ್ದು ತುಂಬಾನೇ ಖುಷಿ ಕೊಟ್ಟಿದೆ. ಗ್ರಾಮಸ್ಥರು ತೋರಿದ ಪ್ರೀತಿಗೆ ನಾನು ಎಂದಿಗೂ ಚಿರಋಣಿಯಾಗಿರುತ್ತೇನೆ ಎಂದು ಹೇಳಿದರು.

ಲಕ್ಷ್ಮೀ ರಂಗನಾಥ ಸ್ವಾಮಿ ಎಲ್ಲರಿಗೂ ಒಳಿತು ಮಾಡಲಿ. ಉತ್ತಮ ಮಳೆ, ಬೆಳೆಯಾಗಲಿ. ಸರ್ವರಿಗೂ ದೇವರ ಅನುಗ್ರಹ ಸಿಗಲಿ ಎಂದು ದೇವರಲ್ಲಿ ಜಿ. ಬಿ. ವಿನಯ್ ಕುಮಾರ್ ಅವರು ಪ್ರಾರ್ಥಿಸಿದರು.

ಇನ್ನು ದಾವಣಗೆರೆ ತಾಲೂಕಿನ ಆಂಜನೇಯ ಮಿಲ್ ನ ಹನುಮನ ಜಯಂತಿ ಕಾರ್ಯಕ್ರಮದಲ್ಲಿಯೂ ವಿನಯ್ ಕುಮಾರ್ ಭಾಗಿಯಾದರು. ಈ ವೇಳೆ ಹನುಮನ ಜಯಂತಿಯ ಉತ್ಸವ ಮೂರ್ತಿ ಹೊತ್ತು ಭಕ್ತರ ಜೊತೆ ಹೆಜ್ಜೆ ಹಾಕಿದರು. ಆಂಜನೇಯ ಸ್ವಾಮಿ ದರ್ಶನ ಪಡೆದ ಬಳಿಕ ಮೆರವಣಿಗೆಯಲ್ಲಿ ಪಾಲ್ಗೊಂಡರು. ಭಕ್ತರು ಹಾಗೂ ಆಂಜನೇಯ ಮಿಲ್ ಭಾಗದ ಜನರು ವಿನಯ್ ಕುಮಾರ್ ಅವರಿಗೆ ಧನ್ಯವಾದ ಅರ್ಪಿಸಿದರು.



# ಎಕೆಬಿಎಂಎಸ್ ಅಧ್ಯಕ್ಷ ಸ್ಥಾನದ ಚುನಾವಣೆ ನಗರದಲ್ಲಿ ಶೇ.39.86 ರಷ್ಟು ಮತದಾನ

**ಚಿಕ್ಕಮಗಳೂರು:** ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ಭಾನುವಾರ ನಡೆದ ಚುನಾವಣೆಯಲ್ಲಿ ಒಟ್ಟು 818 ಮತದಾರರ ಪೈಕಿ 326 ಮಂದಿ ಮತದಾರರು ಮತ ಚಲಾಯಿಸಿದ್ದು, ಒಟ್ಟು ಶೇ. 39.86 ರಷ್ಟು ಮತದಾನವಾಗಿದೆ.

ಬೆಳಿಗ್ಗೆ 8 ಗಂಟೆಗೆ ಮತದಾನ ಪ್ರಕ್ರಿಯೆ ಆರಂಭಗೊಂಡಾಗ ನೀರಸವಾದ ಪ್ರತಿಕ್ರಿಯೆ ಕಂಡು ಬಂದಿತು. 11.30ರ ಬಳಿಕ ಮತದಾನ ಕೊಂಚ ವೇಗ ಪಡೆದುಕೊಂಡು 12.30 ರವರೆಗೆ ಸ್ವಲ್ಪಮಟ್ಟಿಗೆ ಬಿರುಸು ಕಂಡು ಬಂದಿತು. ಮಧ್ಯಾಹ್ನ 1.30ರ ಸುಮಾರಿಗೆ ಕೇವಲ ಶೇ.30 ರಷ್ಟು ಮಾತ್ರ ಮತದಾನವಾಗಿತ್ತು. ಮಧ್ಯಾಹ್ನ 2 ಗಂಟೆ ನಂತರ ಮತದಾನದಲ್ಲಿ ಸ್ವಲ್ಪ ಮಟ್ಟಿಗೆ ಚೇತರಿಕೆ ಕಂಡರೂ ಅನಂತರ ಮಂದಗತಿಗೆ ಇಳಿಯಿತು. ಸಂಜೆ 4 ಗಂಟೆಯ ವೇಳೆಗೆ ಮತದಾನ ಮುಕ್ತಾಯಗೊಂಡಾಗ ಒಟ್ಟು 326 ಮಂದಿ ಮತ ಚಲಾಯಿಸಿದ್ದು, ಶೇ.39.86 ರಷ್ಟು ಮತದಾನವಾಗಿದೆ.

ನಗರದ ಬ್ರಹ್ಮಸಮುದ್ರ ಶ್ರೀ ರಂಗಣ್ಣನ ಛತ್ರದಲ್ಲಿ ಏರ್ಪಡಿಸಿದ್ದ ಮತಗಟ್ಟೆಯು ಚಿಕ್ಕಮಗಳೂರು, ಕಳಸಾಪುರ, ಬೆಳವಾಡಿ, ಮೂಡಿಗೆರೆ, ಸಖರಾಯಪಟ್ಟಣ, ಕಡೂರು, ತರೀಕೆರೆ, ಬೀರೂರು ಹಾಗೂ ಅಜ್ಜಂಪುರ ವ್ಯಾಪ್ತಿಗೆ ಒಳಪಟ್ಟಿದೆ.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ವೇದಮೂರ್ತಿ ಡಾ.ಭಾನುಪ್ರಕಾಶ್ ಶರ್ಮ ಹಾಗೂ ರಘುನಾಥ್ ಎಸ್. ಸ್ಪರ್ಧಿಸಿದ್ದು, ಇವರಲ್ಲಿ ಒಬ್ಬರ ಆಯ್ಕೆಗಾಗಿ ಶಾಂತಿಯುತವಾಗಿ ಮತದಾನ ನಡೆಯಿತು. ಅನಂತರ ಮತ ಎಣಿಕೆ ಕಾರ್ಯ ನಡೆಯಿತು

. ಸಹಕಾರ ಇಲಾಖೆಯ ಒಟ್ಟು ಎಂಟು ಮಂದಿ ಅಧಿಕಾರಿ, ಸಿಬ್ಬಂದಿ ಕಾರ್ಯ ನಿರ್ವಹಿಸಿದ್ದು, ಯಾವುದೇ ಅಹಿತಕರ ಘಟನೆಗೆ ಅವಕಾಶವಾಗದಂತೆ ಪೊಲೀಸ್ ರಕ್ಷಣಾ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು.

ಎಕೆಬಿಎಂಎಸ್‌ನ ಜಿಲ್ಲಾ ಪ್ರತಿನಿಧಿ ಸ್ಥಾನಕ್ಕೆ ಜಿಲ್ಲೆಯಿಂದ ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷ ಡಾ.ಜಿ.ಎಸ್.ಮಹಾಬಲ ಮಾತ್ರ ನಾಮಪತ್ರ ಸಲ್ಲಿಸಿದ್ದು, ಅವರಿಗೆ ಎದುರಾಳಿಯಾಗಿ ಯಾರೂ ನಾಮಪತ್ರ ಸಲ್ಲಿಸದಿರುವುದರಿಂದ ಅವರ ಆಯ್ಕೆ ಅವಿರೋಧವಾಗಿ ಆಗಲಿದೆ.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ಭಾನುವಾರ ನಗರದ ರಂಗಣ್ಣನ ಛತ್ರದಲ್ಲಿ ಶಾಂತಿಯುತವಾಗಿ ಮತದಾನ ನಡೆಯಿತು.



# ಅಂದಿಗಾಲೀಶ ಗುಡ್ಡದಲ್ಲಿ ಹನುಮ ಜಯಂತಿ ಆಚರಣೆ

**ಕೊಪ್ಪಳ:** ಜಿಲ್ಲೆಯ ಅಗಳಕೇರಿ ವ್ಯಾಪ್ತಿಯಲ್ಲಿರುವ ಶ್ರೀ ಅಂದಿಗಾಲೀಶ ಗುಡ್ಡದಲ್ಲಿ ಅಷ್ಟಸಿದ್ಧಿ ಪ್ರದಾತನಾದ ಶ್ರೀ ಅಂದಿಗಾಲೀಶನ ಗುಡ್ಡದಲ್ಲಿ ಹನುಮ ಜಯಂತಿಯನ್ನು ವಿಶಿಷ್ಟವಾಗಿ ಆಚರಿಸಲಾಯಿತು.

ವಿಶ್ವಾವಸು ನಾಮ ಸಂವತ್ಸರದ ಚೈತ್ರ ಮಾಸದ, ಶುಕ್ಲ ಪಕ್ಷ ಹುಣ್ಣಿಮೆಯ ಈ ದಿನ ಶನಿವಾರ ಬಂದಿದ್ದರಿಂದ ಹನುಮ ಜಯಂತಿಗೆ ವಿಶೇಷತೆ ಬಂದಿದೆ. ಹನುಮಾನ ಜಯಂತಿ, ಹನುಮಾನ ಜನ್ಮೋತ್ಸವ, ಚೈತ್ರ ಪೂರ್ಣಿಮಾ ಎಂದು ಕರೆಯುವ ಈ ದಿನ ಹನುಮಂತ ದೇವರಿಗೆ ವಿಶಿಷ್ಟ ಕಳೆ ಮೂಡಿದೆ. ಚೈತ್ರ ನವಪದ ಒಲಿ ಮುಕ್ತಾಯದ ಈ ದಿನ ಪೂರ್ಣಿಮ ವ್ರತ ಆಚರಿಸುವುದರಿಂದ ಸದ್ಭಕ್ತರಿಗೆ ಇಷ್ಟಾರ್ಥ ಸಿದ್ಧಿ ಆಗುತ್ತದೆ ಎನ್ನುವ ನಂಬಿಕೆ ಇದೆ. ಹೀಗಾಗಿ ಇಂದು ಹನುಮ ಜಯಂತಿಗೆ ವಿಶೇಷತೆ ಇದೆ.

ಆನೆಗೊಂದಿ, ಅಂಜನಾದ್ರಿ, ಪಂಪಾ ಸರೋವರದ ಪಶ್ಚಿಮ ಭಾಗದಲ್ಲಿರುವ ಶಿವಪುರ ಗ್ರಾಮದ ಬಳಿಯ ಗುಡ್ಡದಲ್ಲಿ ಶ್ರೀ ಅಂದಿಗಾಲೀಶ ಸ್ವಾಮಿ ನೆಲೆ ನಿಂತಿದ್ದಾನೆ. ಸುಂದರಕಾಂಡದಲ್ಲಿ ಮಹೇಂದ್ರ ಪರ್ವತ ಸಮುಚ್ಚಯದ ಒಂದು ಭಾಗ ಎಂದು ಕರೆಯುವ ಈ ಗುಡ್ಡದಲ್ಲಿ ಭಜರಂಗಿಯ ಭಕ್ತರು ಇಂದು ಗುಡ್ಡ ಹತ್ತಿ ಅಂದಿಗಾಲೀಶನ ದರ್ಶನ ಪಡೆದರು. ಬೆಳಿಗ್ಗೆಯಿಂದಲೇ ಗೋವಿಂದ ನಾಮ ಉದ್ಘೋಷಿಸುತ್ತ, ಹನುಮಂತನ ನಾಮಗಾನ ಪಾಡುತ್ತ, ವಿಶೇಷ ಪೂಜೆ ಸಲ್ಲಿಸಿದರು.

ನಿರ್ಮಾಲ್ಯ ವಿಸರ್ಜನೆ, ಅಭಿಷೇಕ, ಕುಂಕುಮಾರ್ಚನೆ, ಎಲೆ ಚೆಟ್ಟಿ ಸೇವೆ, ಹೂವಿನ ಅಲಂಕಾರ ಸೇವೆ, ಹಣ್ಣು ಕಾಯಿ ಸಲ್ಲಿಸಿ ಬಳಿಕ ಮಹಾ ಮಂಗಳಾರತಿ ಬೆಳಗಿದರು. ಶ್ರೀ ಅಂದಿಗಾಲೀಶ ದೇವರು ಅಣಿಮಾ, ಮಹಿಮಾ, ಗರಿಮಾ, ಲಘಿಮಾ, ಪ್ರಾಪ್ತಿ, ಪ್ರಾಕಾಮ್ಯ, ಈಶಿತ್ವ ಮತ್ತು ವಶಿತ್ವ ಎನ್ನುವ ಎಂಟು ಸಿದ್ಧಿಗಳನ್ನು ಹೊಂದಿದ್ದಾನೆ.

ಅಸಾಧಾರಣ ಶಕ್ತಿಗಳನ್ನು ಪ್ರತಿನಿಧಿಸುತ್ತಿರುವ ಶ್ರೀ ಅಂದಿಗಾಲೀಶನ ಗುಡ್ಡಕ್ಕೆ ವರ್ಷದಿಂದ ವರ್ಷಕ್ಕೆ ಆಗಮಿಸುವ ಭಕ್ತರ ಸಂಖ್ಯೆ ಹೆಚ್ಚುತ್ತಿದೆ ಎಂದು ಭಕ್ತರು ಹೇಳುತ್ತಿದ್ದಾರೆ. ಇಂದು ನಡೆದ ಹನುಮ ಜಯಂತಿ ಆಚರಣೆಯ ಸೇವೆಯನ್ನು ಶ್ರೀ ಅಂದಿಗಾಲೀಶ ಸ್ವಾಮಿಯ ಭಕ್ತರಾದ ಕೃಷ್ಣ ಗಡಾದ, ವ, ಪರಶುರಾಮ ಗಮಣಿ, ಬಸವರಾಜ ಕರ್ಕಿಹಳ್ಳಿ, ವೀರಣ್ಣ ಕೋಮಲಾಪುರ, ಕೆಂಚಪ್ಪ ಹಿಟ್ನಾಳ್, ಹನುಮಂತ ಬಿ., ಸೇರಿದಂತೆ ಅಗಳಕೇರಿ, ಶಹಪುರ, ಶಿವಪುರ ಮತ್ತು ಸುತ್ತಮುತ್ತಲ ಗ್ರಾಮದ ಭಕ್ತರು ಸಲ್ಲಿಸಿದರು.



# ಅಂತಾರಾಷ್ಟ್ರೀಯ ಮಟ್ಟದ ಕವಿಗೋಷ್ಠಿ ಪ್ರಶಸ್ತಿ ಪ್ರದಾನ

**ದಾವಣಗೆರೆ:** ಬೆಳಗಾವಿಯ ಕವಿತ್ತ ಕರ್ಮಮಣಿ ಟ್ರಸ್ಟ್ ವತಿಯಿಂದ ಅಂತರ ರಾಷ್ಟ್ರೀಯ ಮಟ್ಟದ ಅಂತರ್ಜಾಲ ಕವಿಗೋಷ್ಠಿ ಹಮ್ಮಿಕೊಂಡಿದ್ದು, ಜೊತೆಗೆ ಸಾಹಿತ್ಯ, ಶಿಕ್ಷಣ, ವೈದ್ಯಕೀಯ, ಚಿತ್ರಕಲೆ, ನೃತ್ಯ, ವಿಜ್ಞಾನ, ಸಮಾಜ ಸೇವೆ, ಸಂಗೀತ ಇತ್ಯಾದಿ ಕ್ಷೇತ್ರಗಳಲ್ಲಿ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಪ್ರತಿಭಾನ್ವಿತ ಬಾಲ, ಯುವ, ಹಿರಿಯ ಪ್ರತಿಭೆಗಳಿಗೆ ಗೌರವಪೂರ್ವಕವಾಗಿ ವಿವಿಧ ಪ್ರಶಸ್ತಿ / ಪುರಸ್ಕಾರಗಳನ್ನು ನೀಡಿ ಗೌರವಿಸಲಾಗುವುದು.

ಆಸಕ್ತ ಪ್ರತಿಭಾನ್ವಿತ ಸಾಧಕ ಮಿತ್ರರು ಸ್ವವಿವರವುಳ್ಳ ಪಿಡಿಎಫ್ ಅನ್ನು ವಾಟ್ಸಪ್ ನಂ.: 9743867298 ಇಲ್ಲಿಗೆ ಏ.30 ರೊಳಗೆ ಕಳುಹಿಸಿ ಅರ್ಜಿಯನ್ನು ಸಲ್ಲಿಸಬಹುದು ಎಂದು ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಶ್ರೀ ಎಲ್.ಎಚ್. ಪೆಂಡಾರಿ ಅವರು ತಿಳಿಸಿದ್ದಾರೆ.

## ಜೀವನ ಸಾರ್ಥಕತೆಗೆ ಅಕ್ಕನ ವಚನಗಳು ದಾರಿದೀಪ: ಬಸವಪ್ರಭು ಸ್ವಾಮೀಜಿ

**ದಾವಣಗೆರೆ:** ಮಾನವನ ಜೀವನ ಸಾರ್ಥಕತೆ ಹೊಂದಲು ಅಕ್ಕನ ವಚನಗಳ ಅಗತ್ಯವಿದ್ದು, ತನ್ನ ವಚನಗಳ ಅರಿವಿನ ಬೆಳಕಿನಿಂದ ಅಕ್ಕಮಹಾದೇವಿ ಇಂದಿಗೂ ಜೀವಂತವಾಗಿದ್ದಾಳೆ ಎಂದು ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮೀಜಿ ನುಡಿದರು.

ನಗರದ ಶ್ರೀಮತಿ ಮೋತಿ ಚನ್ನಬಸಮ್ಮ ವೀರಪ್ಪ ಕಲ್ಯಾಣ ಮಂಟಪದಲ್ಲಿ ಅಕ್ಕಮಹಾದೇವಿ ಸಮಾಜದಿಂದ ಶನಿವಾರ ಏರ್ಪಡಿಸಿದ್ದ ಶ್ರೀ ಅಕ್ಕಮಹಾದೇವಿ ಜಯಂತ್ಯುತ್ಸವ ಹಾಗೂ ವಚನೋತ್ಸವದ ಸಾನ್ನಿಧ್ಯ ವಹಿಸಿ, ಅಕ್ಕ ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವಚನ ನೀಡಿದರು.ಅಕ್ಕಮಹಾದೇವಿಯ ವ್ಯಕ್ತಿತ್ವ ಮಹಿಳಾ ಕುಲದ ಸ್ವಾಭಿಮಾನದ ಪ್ರತಿರೂಪವಾಗಿದೆ.ಜಗತ್ತಿನ ಪ್ರಥಮ ಸ್ತ್ರೀವಾದಿ ಚಿಂತಕಿಯಾಗಿರುವ ಅಕ್ಕಮಹಾದೇವಿ ಅನುಭವ ಮಂಟಪದ ಮೊದಲ ಮಹಿಳಾ ವಚನಕಾರ್ತಿಯಾಗಿ ಬೆಳೆದರು. ಅಕ್ಕನ ಜೀವನ ಕೇವಲ ಮಹಿಳೆಯರಿಗೆ ಸ್ಫೂರ್ತಿಯಲ್ಲ, ಪುರುಷರಿಗೂ ಆದರ್ಶಪ್ರಾಯವಾಗಿದ್ದಾರೆ.

ಪ್ರಸ್ತುತ ಸಮಸ್ಯೆಗಳಿಗೂ ಅಕ್ಕಮಹಾದೇವಿ ಅವರ ವಚನಗಳಲ್ಲಿ ಪರಿಹಾರ ಸಿಗಲಿದ್ದು, ನೊಂದವರಿಗೆ ಅವುಗಳಿಂದ ಸಾಂತ್ವನ ಸಿಗುತ್ತದೆ ಎಂದು ಹೇಳಿದರು.ಇದೇ ವೇಳೆ ಶ್ರೀಅಕ್ಕಮಹಾದೇವಿ ವಧು–ವರರ ಅನ್ವೇಷಣಾ ಕೇಂದ್ರದ ಅಧ್ಯಕ್ಷೆ ಶಾಂತಾ ಯಾವಗಲ್ ಅವರಿಗೆ 'ಅಕ್ಕ' ಪ್ರಶಸ್ತಿ ಪ್ರದಾನ ಮಾಡಲಾಯಿತು.'ಅಕ್ಕ' ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಶಾಂತ ಯಾವಗಲ್, " ಅಕ್ಕ ಪ್ರಶಸ್ತಿ ನನಗೆ ಬಯಸದೆ ಬಂದ ಭಾಗ್ಯವಾಗಿದೆ. ಪ್ರಶಸ್ತಿಯಿಂದ ನನ್ನ ಸಾಮಾಜಿಕ ಜವಾಬ್ದಾರಿ ಹೆಚ್ಚಾಗಿದೆ ಎಂದರು.ಅಕ್ಕಮಹಾದೇವಿ ಸಮಾಜದ ಅಧ್ಯಕ್ಷ ಕಂಚಿಕೇರಿ ಸುಶೀಲಮ್ಮ ಅಧ್ಯಕ್ಷತೆ ವಹಿಸಿದ್ದರು. ಸಹ ಪ್ರಾಧ್ಯಾಪಕಿ ಡಾ. ಬಿ.ಜಿ. ಸಿದ್ದಲಿಂಗಮ್ಮ ಉಪನ್ಯಾಸ ನೀಡಿದರು. ಸಮಾಜದ ಉಪಾಧ್ಯಕ್ಷೆ ಜಯಮ್ಮ ನೀಲಗುಂದ, ಬಿ.ಟಿ. ಜಯದೇವಮ್ಮ, ದೊಗ್ಗಳ್ಳಿ ಸುವರ್ಣಮ್ಮ, ಸೌಭಾಗ್ಯ ಹಿರೇಮಠ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಜಿಲ್ಲಾ ಪ್ರವಾಸ

**ದಾವಣಗೆರೆ :** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌದರಿ ಅವರು ಏಪ್ರಿಲ್ 15, 16 ಮತ್ತು 17 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳುವರು. ಏಪ್ರಿಲ್ 14 ರಂದು ರಾತ್ರಿ 8.30 ಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 15 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಯದೇವ ವೃತ್ತದ ಬಳಿ ಬ್ರಾಹ್ಮಣ ಹಾಸ್ಟೆಲ್ ಮುಂಭಾಗದಲ್ಲಿ ದಲಿತ ಸಂರಕ್ಷಣಾ ಸಮಿತಿಯಿಂದ ಹಮ್ಮಿಕೊಂಡಿರುವ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಲ್ಲಿ ಭಾಗವಹಿಸುವರು.

ಮ.1.30 ಕ್ಕೆ ಆವರಗೊಳ್ಳ ಗ್ರಾಮ ವ್ಯಾಪ್ತಿಯ ಕೇಂದ್ರೀಯ ವಿದ್ಯಾಲಯ ಹಿಂಭಾಗದಲ್ಲಿ ವಾಸಿಸುತ್ತಿರುವ ಕುಟುಂಬಗಳ ಸ್ಥಳಕ್ಕೆ ಭೇಟಿ ನೀಡುವರು. ನಂತರ ಸಂಜೆ 5 ಗಂಟೆಗೆ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಕ್ಕೆ ಭೇಟಿ ನೀಡಿ ವಾಸ್ತವ್ಯ ಮಾಡುವರು.

ಏಪ್ರಿಲ್ 16 ರಂದು ಬೆಳಿಗ್ಗೆ 10.30ಕ್ಕೆ ಜಗಳೂರು ತಾಲ್ಲೂಕು ಆಸ್ಪತ್ರೆ ಹಾಗೂ ತಾಲ್ಲೂಕು ಕಚೇರಿಗೆ ಭೇಟಿ ನೀಡುವರು.

ಮಧ್ಯಾಹ್ನ 1 ಗಂಟೆಗೆ ಜಗಳೂರು ತಾಲ್ಲೂಕಿನ ಹನುಮಂತಪುರ ಗೊಲ್ಲರಹಟ್ಟಿ ಗ್ರಾಮಕ್ಕೆ ಭೇಟಿ ನೀಡುವರು ನಂತರ ಸಂಜೆ 5 ಗಂಟೆಗೆ ದಾವಣಗೆರೆಯಲ್ಲಿ ಬಾಲಕಿಯರ ಮೆಟ್ರಿಕ್ ನಂತರ ಹಾಸ್ಟೆಗೆ ಭೇಟಿ ನೀಡಿ ವಾಸ್ತವ್ಯ ಮಾಡುವರು. ಏಪ್ರಿಲ್ 17 ರಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ಭೇಟಿ, ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ನಂತರ ಮ. 2 ಗಂಟೆಗೆ ಪತ್ರಿಕಾಗೋಷ್ಠಿ ನಡೆಸಿ ಮ.3 ಗಂಟೆಗೆ ಬೆಂಗಳೂರಿಗೆ ಪ್ರಯಾಣಿಸುವರು.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಸಾರ್ವಜನಿಕರಿಂದ ಸಹವಾಲು ಸ್ವೀಕಾರ

**ದಾವಣಗೆರೆ :** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿಚೌದರಿ ಅವರು ಏಪ್ರಿಲ್ 14 ರಿಂದ 17 ರವರೆಗೆ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಏಪ್ರಿಲ್ 16 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಚ್‌ಹೆಡಬ್ಲ್ಯೂ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಹಾಗೂ ಪ್ರಕರಣಗಳು ದಾಖಲಾದ ಬಗ್ಗೆ, ಅಂಕಿ ಅಂಶಗಳೊಂದಿಗೆ ಚರ್ಚೆ, ಸರ್ಕಾರಿ,

ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಆಂತರಿಕ ದೂರು ಸಮಿತಿ ಬಗ್ಗೆ ಪರಿಶೀಲನೆ, ಮಹಿಳಾ ದೌರ್ಜನ್ಯ ಪ್ರಕರಣಗಳ ಬಗ್ಗೆ ಚರ್ಚೆ, ಮಹಿಳಾ ಮೀಸಲಾತಿ, ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಕುರಿತಂತೆ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಭೆಯ ನಂತರ ಸಂಜೆ 4 ಗಂಟೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಸನಾತನ ಧರ್ಮದ ಆಚರಣೆಗಳು ಮೂಢನಂಬಿಕಯಲ್ಲ



**ಕೊಪ್ಪ :** ವೈಜ್ಞಾನಿಕ ಕಾರಣ ತೋರಿಸದ ಆಚರಣೆಗಳನ್ನು ಮೂಢನಂಬಿಕೆ ಎಂಬುದು ಸರಿಯಲ್ಲ. ಶೃತಿ, ಸ್ಮೃತಿ, ಶಿಷ್ಟಾಚಾರದಿಂದ ಪ್ರಮಾಣೀಕರಿಸಿದ ಸನಾತನ ಧರ್ಮದ ಆಚರಣೆಗಳು ಮೂಢನಂಬಿಕೆ ಆಗುವುದಿಲ್ಲ ಎಂದು ಶೃಂಗೇರಿ ಶ್ರೀಶಾರದಾ ಪೀಠದೀಶ್ವರರಾದ ಶ್ರೀ ವಿಧುಶೇಖರ ಭಾರತೀ ಮಹಾಸ್ವಾಮಿಗಳವರು ತಿಳಿಸಿದರು. ಪಟ್ಟಣದ ಜೊರವಲಯದ ಹುಲ್ಲುಮಗ್ಗಿಯ ಶ್ರೀವೀರಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ದೇವರ ಪುನಃಪ್ರತಿಷ್ಠೆ ಮತ್ತು ಕುಂಭಾಭಿಷೇಕ ನೆರವೇರಿಸಿ ನೆರೆದಿದ್ದ ಭಕ್ತಾಧಿಗಳಿಗೆ ಪ್ರವಚನ ನೀಡಿದರು. ಸಂದರ್ಭಕ್ಕೆ ತಕ್ಕಂತೆ ಭಗವಂತನು ವಿವಿಧ ರೂಪಗಳಲ್ಲಿ ಅವತರಿಸುತ್ತಾನೆ. ಆಂಜನೇಯಸ್ವಾಮಿಯ ಅವತಾರ ವಿಶಿಷ್ಟವಾದುದು. ನಮ್ಮ ಎಲ್ಲಾ ರೀತಿಯ ತೊಂದರೆಗಳಿಂದ ಪಾರಗಬೇಕಾದರೆ ಆಂಜನೇಯ ಸ್ವಾಮಿಯ ಆರಾಧನೆ ಮಾಡಬೇಕು. ಅಹಂಕಾರ ಇಲ್ಲದೇ ಆತ್ಮವಿಶ್ವಾಸದಿಂದ ಸಾಧನೆ ಮಾಡಿದರೆ ಗುರಿ ತಲುಪಲು ಸಾಧ್ಯ ಎನ್ನುವುದನ್ನು ಆಂಜನೇಯ ಸ್ವಾಮಿ ತೋರಿಸಿಕೊಟ್ಟಿದ್ದಾರೆ. ಒಳ್ಳೆಯ ಕೆಲಸ ಮಾಡುವಾಗ ಸಹಕಾರ ನೀಡುವವರು ಕಡಿಮೆ. ಆದರೆ ಭಗವ<ತವ ಅನುಗ್ರಹ ಸದಾ ಇರುತ್ತದೆ. ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ನಮ್ಮ ಜೀವನವನ್ನು ಸಾರ್ಥಕಗೊಳಿಸಬೇಕು ಎಂದರು.ಸನಾತನ ಧರ್ಮದ ಆಚರಣೆಗಳು ವಿಜ್ಞಾನಿಗಳಿಂದ ಪ್ರಮಾಣೀಕರಿಸಲು ಆಗಿಲ್ಲ. ಆದರೆ ಅವೆಲ್ಲವೂ ಋಷಿಮುನಿಗಳು ಸಿದ್ಧಿಸಿಕೊಂಡು ಬಂದಿರುವ ಆಚರಣೆಗಳು. ಅದನ್ನು ನಮ್ಮ ಜೀವನದಲ್ಲಿ ಅಳವಡಿಕೊಂಡು ಸನಾತನ ಧರ್ಮದ ಪರಂಪರೆಯನ್ನು ಮುಂದುವರೆಸಬೇಕು ಎಂದರು. ಕಾರ್ಯಕ್ರಮದ ಅಂಗವಾಗಿ ದೇವಸ್ಥಾನವನ್ನು ಹೂ ಹಾಗೂ ವಿದ್ಯುದ್ದೀಪಗಳಿಂದ ಅಲಂಕರಿಸಲಾಗಿತ್ತು. ಆಂಜನೇಯ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಆಗಮಿಸಿದ್ದ ಭಕ್ತಾಧಿಕಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

## ರಾಮನವಮಿ ರಾಮೋತ್ಸವ

**ಚಂದ್ರಗುತ್ತಿ:** ಸಮೀಪದ ಚಿಕ್ಕಮಾಕೊಪ್ಪಗ್ರಾಮದ



ಶ್ರೀ ರಾಮೇಶ್ವರದೇವಸ್ಥಾನದಲ್ಲಿ ಶ್ರೀ ರಾಮನವಮಿರಾಮೋತ್ಸವ ಅಂಗವಾಗಿ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆದವು.ಬೆಳಗ್ಗೆಯಿಂದಲೇ ದೇವಸ್ಥಾನದಲ್ಲಿಗಣಪತಿ ಪೂಜೆ, ಪುಣ್ಯಹವಾಚನ, ನಾಂದಿ, ಕಳಶಸ್ಥಾಪನೆ, ಸಗ್ರಾಹಮುಚನ, ಪವಮಾನ, ಪಂಚಸೂಕ್ತ ಹವನ, ಸೇರಿದಂತೆಧಾರ್ಮಿಕ ಪೂಜಾ ವಿಧಿ ವಿಧಾನಗಳು ನೆರವೇರಿದವು.ಪೂರ್ಣಾಹುತಿ, ಮಹಾ ಮಂಗಳಾರತಿ ಬಳಿಕ ತೀರ್ಥ ಪ್ರಸಾದ, ಕೋಸುಂಬರಿ ಮತ್ತು ಪಾನಕ ವಿತರಣೆ ಮಾಡಲಾಯಿತು. ನಂತರ ಸಾರ್ವಜನಿಕ ಭಕ್ತಾದಿಗಳಿಗೆ ಅನ್ನದಾಸೋಹ ಸೇವೆ ನಡೆಯಿತು. ಶ್ರೀರಾಮೇಶ್ವರ ದೇವಸ್ಥಾನದಅರ್ಚಕ ನಿರಂಜನ್ ಭಟ್‌ಅವರ ನೇತೃತ್ವದಲ್ಲಿ ಪೂಜಾ ವಿಧಿ ವಿಧಾನಗಳು ಜರುಗಿದವು. ಶ್ರೀ ರಾಮನವಮಿ ಅಂಗವಾಗಿ ಗ್ರಾಮವನ್ನುಕೇಸರಿ ಬಣ್ಣದ ಧ್ವಜಗಳಿಂದ ಅಲಂಕರಿಸಲಾಗಿತ್ತು. ರಾಮೇಶ್ವರದೇವಸ್ಥಾನಕ್ಕೆ ಬಾಳೆ ಕಂಬ, ಮಾವಿನ ಎಲೆ ತೋರಣಗಳಿಂದ ಶೃಂಗರಿಸಿದ್ದರು. ಚಂದ್ರಗುತ್ತಿ ಸೇರಿದಂತೆ ಸುತ್ತಲಿನ ಗ್ರಾಮಗಳಿಂದ ನೂರಾರು ಭಕ್ತರು ಆಗಮಿಸಿ ಶ್ರೀ ರಾಮೇಶ್ವರದೇವರದರ್ಶನ ಪಡೆದರು. ಶ್ರೀ ರಾಮೇಶ್ವರ ಸೇವಾ ಸಮಿತಿಯವರು ಪೂಜಾಕಾರ್ಯದಲ್ಲಿ ಪಾಲ್ಗೊಂಡಿದ್ದರು.

## ರಾಮನವಮಿ: ರಥೋತ್ಸವ

ತ್ಯಾಗರ್ತಿ: ಅಯೋಧ್ಯೆಯಲ್ಲಿ ರಾಮಮಂದಿರ



ನಿರ್ಮಾಣವಾದ ದಿನದಿಂದ ಜನರಲ್ಲಿ ರಾಮನ ಸ್ಮರಣೆ ಹಾಗೂ ರಾಮನ ಮೇಲಿನ ಭಕ್ತಿ ಹೆಚ್ಚುತ್ತಿದ್ದು ಇಂದು ರಾಮನವಮಿಯನ್ನು ಜನರು ಹಬ್ಬದಂತೆ ಆಚರಿಸುತ್ತಿದ್ದಾರೆ. ಎಲ್ಲರಿಗೂ ಶುಭವಾಗಲಿ ಎಂದು ಸಾಗರ ಶಾಸಕರಾದ ಗೋಪಾಲಕೃಷ್ಣ ಬೇಳೂರು ಹೇಳಿದರು. ಸಾಗರ ತಾಲ್ಲೂಕಿನ ಚಿಕ್ಕಬಿಲಗುಂಜಿಯಲ್ಲಿ ರಾಮನವಮಿ ರಥೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನೂತನವಾಗಿ ನಿರ್ಮಾಣಗೊಂಡ ರಥದ ಕಮಲೇಶ್ವರ ಸ್ವಾಮಿಯ ಉತ್ಸವಕ್ಕೆ ಚಾಲನೆ ನೀಡಿಭಗವಂತನ ಆಶೀರ್ವಾದ ನಾಡಿಗೆ ಸುಭೀಕ್ಷೆ ನೀಡಲಿ ಎಂದು ಆಶಿಸಿದರು. ಈ ಸಂಧರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಚೇತನ್‌ರಾಜ್ ಕಣ್ಣೂರು ವಿಎಸ್‌ಎಸ್‌ಎನ್ ನಿರ್ದೇಶಕರಾದ ಕಿರಣ್‌ಕುಮಾರ್, ಮುಖಂಡರಾದ ಮಂಡಗಳಲೆ ಗಣಪತಿ, ಯಶೋಧರ ಚಿಕ್ಕಬಿಲಗುಂಜಿ ಇದ್ದರು. ವಿಧ್ವಾನ್ ಜಗದೀಶ ಶರ್ಮ ಮರ್ಗದರ್ಶನದಲ್ಲಿ ಕೆಳದಿ ವಿಧ್ವಾನ್ ರಾಮಭಟ್ ಇವರ ನೇತೃತ್ವದಲ್ಲಿ ಋತ್ವಿಜರ ಸಮಕ್ಷಮ ರಥೋತ್ಸವ ವಿಜೃಂಭಣೆಯಿಂದ ನೆಡೆಯಿತು. ಚಿಕ್ಕಬಿಲಗುಂಜಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರ ಸಹಕಾರದಿಂದ ರಥೋತ್ಸವ ಕಾರ್ಯಕ್ರಮ ಅದ್ಧೂರಿಯಾಗಿ ಜರುಗಿತು.

# ಹೊಳೆ ಸಿರಿಗೆರೆ ಆಂಜನೇಯ ಸ್ವಾಮಿಯ ರಥೋತ್ಸವ




**ಮಲೇಬೆನ್ನೂರು:** ಸಮೀಪದ ಹೊಳೆ ಸಿರಿಗೆರೆ ಗ್ರಾಮದ ಆಂಜನೇಯ ಸ್ವಾಮಿ ರಥೋತ್ಸವ ಶ್ರದ್ಧಾ ಭಕ್ತಿಯಿಂದ ನಡೆಯಿತು.

ನಾನ ತರದ ಹೂ ಮಾಲೆಗಳಿಂದ ಭಕ್ತರು ರಥವನ್ನು ಅಲಂಕರಿಸಿದ್ದರು. ಆಂಜನೇಯ ಸ್ವಾಮಿ ಮತ್ತು ಗ್ರಾಮದ ಎಲ್ಲಾ ದೇವರುಗಳ ಉತ್ಸವ ಮೂರ್ತಿಗಳನ್ನು ಹೂಗಳಿಂದ ಅಲಂಕೃತ ಪಲ್ಲಕ್ಕಿಯಲ್ಲಿ ಆರೋಹಿಸಲಾಗಿತ್ತು. ಭಕ್ತರು ಪಲ್ಲಕ್ಕಿ ಹೊತ್ತು ಆಂಜನೇಯ ಸ್ವಾಮಿ ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಲಾಯಿತು. "ಹರಿಹರ ಮಹಾದೇವ್"" ರಾಮ ಸಿತಾರಾಮ್" ಮುಂತಾದ ಬಿರುದು ಬಾವಲಿಗಳು ಉದ್ಘೋಷಗೊಂಡವು. ವಿವಿಧ ವಾದ್ಯಗಳು ಮೊಳಗಿದವು. ನಂತರ ರಥದ ಪ್ರದಕ್ಷಿಣೆ ನಡೆಯಿತು ಮತ್ತು ಆಂಜನೇಯ ಸ್ವಾಮಿ ಉತ್ಸವ ಮೂರ್ತಿಯನ್ನು ರಥಾರೋಹಣ ಮಾಡಲಾಯಿತು. ಅಷ್ಟ ಬಲಿದಾನ ಪೂಜೆ,ರಥಪೂಜೆ ನಡೆಯಿತು. ರಥದ ಗಾಲಿಗೆ ತೆಂಗಿನಕಾಯಿ ಒಡೆದು, ಬಾಳೆಹಣ್ಣು, ಸಮರ್ಪಿಸಲಾಯಿತು. ನಂತರ "ಗೋವಿಂದ ಗೋವಿಂದ" ಎನ್ನುತ್ತಾ ರಥ ಎಳೆದರು. ದೊಳ್ಳು ಕುಣಿತ, ವಿರಗಾಸೆ, ಭಜನೆ ಮುಂತಾದವು ಗಮನ ಸೆಳೆದವು.

ಭಕ್ತರು ಧವನ ಚುಚಿದ ಬಾಳೆಹಣ್ಣು, ಉತ್ತತ್ತಿ, ಮೆಣಸಿನ ಕಾಳು, ಮಂಡಕ್ಕಿಯನ್ನು ರಥಕ್ಕೆ ಎರಚುವ ಮೂಲಕ ಭಕ್ತಿ ಸಮರ್ಪಿಸಿದರು.

ರಥೋತ್ಸವದ ಅಂಗವಾಗಿ ಆಂಜನೇಯ ಸ್ವಾಮಿಗೆ ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು.

ಆಂಜನೇಯ ಸ್ವಾಮಿ ಪಾದುಕೆಗಳನ್ನು(ಪಾದರಕ್ಷೆಗಳು) ಭಕ್ತರು ಪೂಜಿಸಿದರು.

ದೇವಸ್ಥಾನ ಮತ್ತು ರಥಬೀದಿ ವಿದ್ಯುತ್ ದೀಪಗಳಿಂದ ಅಲಂಕೃತವಾಗಿದ್ದವು. ತಳಿರು ತೋರಣಗಳಿಂದ ಅಲಂಕೃತವಾಗಿತ್ತು.

ಮಕ್ಕಳ ಆಟಿಕೆಗಳು, ಬೆಂಡು ಬೆತ್ತಾಸು, ಬಳೆ ಅಂಗಡಿಗಳಲ್ಲಿ ವ್ಯಾಪಾರ ವಹಿವಾಟು ಜೋರಾಗಿತ್ತು.

ರಥದ ಭಗವಾಧ್ವಜ ಮೂರು ಲಕ್ಷಕ್ಕೆ, ಹಾರ 50000 ರೂಗಳು, ಅಂತರ ತೆಂಗಿನಕಾಯಿ 41000 ಕ್ಕೆ ಭಕ್ತರು ಹರಾಜಿನಲ್ಲಿ ಪಡೆದರು.

# ಶ್ರೀಆಂಜನೇಯಸ್ವಾಮಿ, ಕಲ್ಯಾಣ ವೆಂಕಟೇಶ್ವರ ದೇವರ ಬ್ರಹ್ಮರಥೋತ್ಸವ



ಕುಳಗಟ್ಟೆ: ಗ್ರಾಮದ ಶ್ರೀಆಂಜನೇಯಸ್ವಾಮಿ ಕಲ್ಯಾಣ ವೆಂಕಟೇಶ್ವರ ದೇವರ ಬ್ರಹ್ಮರಥೋತ್ಸವವು ಗ್ರಾಮದ ಧಾರ್ಮಿಕ ಆಚರಣೆಯ ಪದ್ಧತಿಯಂತೆ ಶ್ರೀರಾಮನವಮಿಯಂದು ಸಂಜೆ ಗೋಧೋಳಿಯ ಸುಸಂದರ್ಭದಲ್ಲಿ ಭಾನುವಾರ ಸಂಜೆ 6-50ರ ವೇಳೆಗೆ ಗ್ರಾಮದೇವರಾದ ಶ್ರೀಆಂಜನೇಯಸ್ವಾಮಿ ಕಲ್ಯಾಣ ವೆಂಕಟೇಶ್ವರ ದೇವರ ಬ್ರಹ್ಮರಥೋತ್ಸವವು ಶ್ರದ್ಧಾಭಕ್ತಿಯಿಂದ ನೆರವೇರಿತು. ರಥೋತ್ಸವದ ಅಂಗವಾಗಿ ಶ್ರೀಆಂಜನೇಯಸ್ವಾಮಿ ಕಲ್ಯಾಣ ವೆಂಕಟೇಶ್ವರ ದೇವರಿಗೆ ಜರತಾರಿ ವಸ್ತ್ರಾಭರಣ ಸಹಿತವಾಗಿ ಪೂಜಿಸಿ ಫಲ-ಪುಷ್ಪ-ಪತ್ರೆ ತುಳಸಿ ಮಾಲೆಗಳಿಂದ ಶೃಂಗರಿಸಲಾಗಿತ್ತು. ಗ್ರಾಮದ ಸಂಪ್ರದಾಯದಂತೆ ಕೋರೂಟ ಸೇವೆಯಾಗಿ ರಥಬೀದಿಗೆ ದೇವತಾ ಉತ್ಸವ ಆಗಮಿಸುತ್ತಿದ್ದಂತೆ, ರಥಶಾಂತಿ ಪೂಜೆಯನ್ನು ಪುರೋಹಿತರು ಗ್ರಾಮದ ಗುರು-ಹಿರಿಯರೊಂದಿಗೆ ಶಾಸ್ತ್ರೋಕ್ತ ಪೂಜಾವಿಧಿವಾಧನಗಳೊಂದಿಗೆ ನೆರವೇರಿಸಿದರು. ಗ್ರಾಮಕ್ಕೆ ಹಾಗೂ ಕರುನಾಡು ಸೇರಿದಂತೆ ದೇಶಾದ್ಯಂತ ಮಳೆ-ಬೆಳೆ ಸಮೃದ್ಧಿಯಾಗಲ್ಲೆಂದು ಭಕ್ತಿಯಿಂದ ಪ್ರಾರ್ಥಿಸಿ ಬ್ರಹ್ಮರೋತ್ಸವಕ್ಕೆ ಚಾಲನೆಯನ್ನು ನೀಡಲಾಯಿತು. ರಥೋತ್ಸವದಲ್ಲಿ ಮನೆದೇವರೆಂದು ರಾಜ್ಯದ ವಿವಿದೆಡೆಗಳಲ್ಲಿ ವಾಸವಿದ್ದು ಆರಾಧಿಸುವ ಭಕ್ತರು ಸೇರಿದಂತೆ ಇಷ್ಟಾರ್ಥ ವರಗಳ ಪ್ರಾಪ್ತಿಗೊಳಗಾದ ಭಕ್ತಬಾಂದವರನೇಕರು ಗ್ರಾಮದ ಹಾಗೂ ಸುತ್ತ-ಮುತ್ತಲ ಗ್ರಾಮಸ್ತರು, ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿ ಪೂಜೆಯನ್ನು ಸಲ್ಲಿಸಿ ಮೆಣಸು-ಮಂಡಕ್ಕಿ, ಬಾಳೆಹಣ್ಣು ಸಮರ್ಪಿಸಿ ಭಕ್ತಿಯಿಂದ ತೇರನೆಳೆದರು. ಯುವ ಸಂಘಟಕರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

## ಕೊಪ್ಪ : ಆಂಜನೇಯಸ್ವಾಮಿ ರಥೋತ್ಸವ



**ಕೊಪ್ಪ :** ತಾಲ್ಲೂಕಿನಾದ್ಯಂತ ಶೃದ್ಧಾಭಕ್ತಿಯಿಂದ ರಾಮನವಮಿ ಆಚರಿಸಲಾಯಿತು ಕೊಪ್ಪ ಪಟ್ಟಣದ ಶ್ರೀರಾಮಮಂದಿರ, ಅಂದಗಾರಿನ ಲಕ್ಷ್ಮೀನಾರಾಯಣ ಮತ್ತು ಶ್ರೀಆಂಜನೇಯ ಸ್ವಾಮಿ ದೇವಸ್ಥಾನಗಳಲ್ಲಿ ವಾರ್ಷಿಕ ರಥೋತ್ಸವ ನೆರವೇರಿತು. ಹರಿಹರಪುರದ ಶ್ರೀರಾಮಮಂದಿರದಲ್ಲಿ ವಿಶೇಷ ಪೂಜೆ, ಭಜನೆ ಹಮ್ಮಿಕೊಳ್ಳಲಾಗಿತ್ತು. ಹರಿಹರಪುರ ಶ್ರೀಮಠದಲ್ಲಿ ಶ್ರೀ ಶಾರದಾಲಕ್ಷ್ಮೀನೃಸಿಂಹ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಅಲ್ಲದೇ ವಿವಿಧ ದೇವಸ್ಥಾಗಳಲ್ಲಿ ದೇವರಿಗೆ ವಿಶೇಷ ಅಲಂಕಾರ, ಪೂಜೆಗಳನ್ನು ಏರ್ಪಡಿಸಲಾಗಿತ್ತು. ದೇವಸ್ಥಾನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಸೇರಿದ್ದರು. ಕೊಪ್ಪ ಶ್ರೀರಾಮಮಂದಿರದಲ್ಲಿ ಶ್ರೀರಾಮದೇವರ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು. ಮಧ್ಯಾಹ್ನ ದೇವರ ರಥಾರೋಹಣ ಸಂದರ್ಭ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ನೂರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿ ದೇವರ ದರ್ಶನ ಪಡೆದು ರಥವನ್ನು ಎಳೆದು ಸಂಭ್ರಮಿಸಿದರು. ಪುಟಾಣಿ ಮಕ್ಕಳು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ನೆರೆದಿದ್ದರು. ಆಗಮಿಸಿದ್ದ ಭಕ್ತಾಧಿಗಳಿಗೆ ದೇವಸ್ಥಾಣದ ವತಿಯಿಂದ ಪ್ರಸಾಧ ವ್ಯವಸ್ಥೆ ಮಾಡಲಾಗಿತ್ತು. ಸಂಜೆ ರಥೋತ್ಸವ ನೆರವೇರಿತು.

ಅಂದಗಾರಿನ ಶ್ರೀಲಕ್ಷ್ಮೀನಾರಾಯಣ ಮತ್ತು ಶ್ರೀಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ರಥೋತ್ಸವದ ಪ್ರಯುಕ್ತ ದೇವಸ್ಥಾನವನ್ನು ಹೂ ಹಾಗೂ ಬಣ್ಣದ ದೀಪಗಳಿಂದ ಸಿಂಗರಿಸಲಾಗಿತ್ತು. ರಥವನ್ನು ಬಣ್ಣದ ಪತಾಕೆಗಳಿಂದ ಅಲಂಕರಿಸಲಾಗಿತ್ತು. ಮಧ್ಯಾಹ್ನ ದೇವರ ಶ್ರೀಮನ್ ರಥಾರೋಹಣ ನೆರವೇರಿತು. ನೆರದಿದ್ದ ಭಕ್ತಾಧಿಗಳು ದೇವರಿಗೆ ಜಯಘೋಷ ಮೊಳಗಿಸಿದರು. ರಥಕ್ಕೆ ಅಕ್ಕಿ, ಬಾಳೆಹಣ್ಣು, ಹಾಗೂ ದವಸ ಧಾನ್ಯಗಳನ್ನು ಎರಚಿದರು. ದೇವಸ್ಥಾನದ ತುಸು ದೂರದವರೆಗೆ ರಥವನ್ನು ಎಳೆದು ತರಲಾಯಿತು. ಸಂಜೆ ರಥೋತ್ಸವ ನೆರವೇರಿತು.

## ಹೊನ್ನಾಳಿ : ಆಂಜನೇಯಸ್ವಾಮಿ ರಥೋತ್ಸವ

**ಹೊನ್ನಾಳಿ:** ತಾಲೂಕಿನ ಹಿರೇಗೋಣಿಗೆರೆ ಗ್ರಾಮದಲ್ಲಿ ಬೆಳಗ್ಗೆ ಆಂಜನೇಯಸ್ವಾಮಿ ರಥೋತ್ಸವ ಹಾಗೂ ರಾಮನವಮಿ ಭಾನುವಾರ ಗ್ರಾಮದ ಸುತ್ತಮುತ್ತಲ ಗ್ರಾಮಗಳ ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಿತು. ರಥೋತ್ಸವದ ಪ್ರಾರಂಭವಾಗುತ್ತಿದ್ದಂತೆ ಭಕ್ತರು ಉತ್ತತ್ತಿ,ಬಾಳೆಹಣ್ಣುಗಳನ್ನು ರಥಕ್ಕೆ ಎಸೆದು ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ರಥೋತ್ಸವದಲ್ಲಿ ಡೊಳ್ಳುಕುಣಿತ,ರಣಹಲಗೆಯೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿದರು.ಸಂಜೆ ಮುಳ್ಳೋತ್ಸವ,ಭೂತನಸೇವೆ ನಡೆಯಿತು.ಕುದುರೆ ದೇವರ ಕುಣಿತ ನೆರದವರ ಗಮನ ಸೆಳೆಯಿತು.ರಥೋತ್ಸವ ಹಾಗೂ ರಾಮನವಮಿ ಪ್ರಯುಕ್ತಾ ಮಜ್ಜಿಗೆ,ಪಾನಕ ಹಾಗೂ ಲಘು ಉಪಹಾರ ಸೇವೆ ನಡೆಯಿತು.ಸಂಜೆ ಗರ್ಭದಲ್ಲಿ ಘರ್ಜಿಸಿದ ಗರುಡ ಎಂಬ ನಾಟಕ ನೆರವೇರಿತು.





# ಅಂಕಸಮುದ್ರ ಕೆರೆ ರಾಮ್‌ಸಾರ್ ತಾಣ

ತುಂಗಭದ್ರಾ ಜಲಾಶಯದ ಹಿನ್ನೀರು ಪ್ರದೇಶದಿಂದ ಕೂಗಳತೆ ದೂರದಲ್ಲಿ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಅಂಕಸಮುದ್ರ ಎಂಬ ಗ್ರಾಮವಿದೆ. ಇಲ್ಲಿ 244 ಎಕರೆ ವಿಸ್ತಾರವಾದ ಕೆರೆಯೊಇದೆ. ಕೆರೆಯಲ್ಲಿ ಹರಡಿರುವ ಕರಿಜಾಲಿ ಮರಗಳು ಅಪರೂಪದ, ದೇಶ-ವಿದೇಶದ ಸಹಸ್ರಾರು ಬಾನಾಡಿಗಳಿಗೆ ಆಶ್ರಯತಾಣವಾಗಿವೆ. ಹೀಗಾಗಿ ವಿಶಾಲವಾದ ಕೆರೆಯೊಂದು ಪಕ್ಷಿಧಾಮ ಎಂದು ಹೆಗ್ಗಳಿಕೆ ಪಡೆದಿದೆ. ಇದು ಕಲ್ಯಾಣ ಕರ್ನಾಟಕದ ಮೊದಲ ಪಕ್ಷಿಧಾಮ.

ಕೆರೆ ಮಧ್ಯದಲ್ಲಿ ನಿರ್ಮಿಸಿರುವ 50ಕ್ಕೂ ಹೆಚ್ಚು ಕೃತಕ ನಡುಗಡ್ಡೆಗಳಲ್ಲಿ ಎತ್ತರದ ಮತ್ತು ನೆಲಕ್ಕೊರಗಿದ ಗಿಡಮರಗಳಲ್ಲಿ ಪಕ್ಷಿಗಳು ಬೀಡುಬಿಟ್ಟಿವೆ. ಜೊತೆಗೆ ನೀರಿನಲ್ಲಿ ಹೇರಳವಾಗಿ ದೊರೆಯುವ ಆಹಾರ ಕೂಡ ಅವುಗಳಿಗೆ ವರದಾನವಾಗಿದೆ. ತುಂಗಭದ್ರಾ ಹಿನ್ನೀರಿನಿಂದ ಯಂತ್ರಗಳ ಸಹಾಯದಿಂದ ಕೆರೆಗೆ ನೀರು ಹರಿಸಿದ್ದು ಮತ್ತುಉತ್ತಮ ಮುಂಗಾರಿನಿಂದಾಗಿ ಕೆರೆ ಸಂಪೂರ್ಣ ಭರ್ತಿಯಾಗಿದ್ದು ಸೊಬಗು ಹೆಚ್ಚಾಗಿದೆ.

ವಿಜಯನಗರ–ಬಳ್ಳಾರಿ ಜಿಲ್ಲೆಯ ಪಕ್ಷಿ ತಜ್ಞರು, ಪಕ್ಷಿ ಪ್ರೇ ಮಿಗಳು, ಅಂಕಸಮುದ್ರದಯುವ ಬ್ರಿಗೇಡ್ ಸದಸ್ಯರು, ಹಗರಿಬೊಮ್ಮನಹಳ್ಳಿಯ ಗ್ರೀನ್ ಎಚ್ಬಿಎಚ್ ತಂಡದ ಸದಸ್ಯರ ಕಾಳಜಿ ಮತ್ತು ನಿರಂತರ ಶ್ರಮ, ರಾಜ್ಯ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ ಪರಿಣಾಮವಾಗಿ ಬಾನಾಡಿಗಳಿದ್ದ ಈ ಕೆರೆ ಪಕ್ಷಿಧಾಮವಾಗುವ ಮೂಲಕ ಪಕ್ಷಿಪ್ರೇಮಿಗಳು ಕಂಡಿದ್ದ ಕನಸು ನನಸಾಗಿದೆ. 2016ರ ಸೆಪ್ಟೆಂಬರ್ನಲ್ಲಿ ರಾಜ್ಯ ವನ್ಯಜೀವಿ ಸಲಹಾ ಮಂಡಳಿಯಲ್ಲಿ ಪಕ್ಷಿಧಾಮಕ್ಕಾಗಿ ಪಕ್ಷಿತಜ್ಞ ಸಮದ್ ಕೊಟ್ಟೂರು, ವಿಜಯ್ ಇಟ್ಟಿಗಿ ಮತ್ತು ತಂಡ ಸಲ್ಲಿಸಿದ್ದ ಪ್ರಸ್ತಾವನೆ ಅಂಗೀಕಾರಗೊಂಡಿತು. 2017ರ ಫೆಬ್ರುವರಿಯಲ್ಲಿ ಅಂಕಸಮುದ್ರ ಕೆರೆ ಪಕ್ಷಿಗಳ ಸಂರಕ್ಷಿತ ಪ್ರದೇಶವೆಂದು ಘೋಷಣೆ ಆಯಿತು. ಈ ಪ್ರದೇಶ ಅರಣ್ಯ ಇಲಾಖೆಯ ಸುಪರ್ದಿಗೆ ಸೇರಿತು. ಒಂದೊಂದೇ ಮೂಲಸೌಕರ್ಯಗಳು ಬರತೊಡಗಿದವು. ಒತ್ತುವರಿಯಾಗಿದ್ದ ಕೆರೆ ಪ್ರದೇಶವನ್ನು ತೆರವುಗೊಳಿಸಲಾಯಿತು. ವೀಕ್ಷಣಾ ಗೋಪುರ ನಿರ್ಮಾಣಗೊಂಡಿತು. ನಾಲ್ಕು ಜನ ಕಾವಲುಗಾರರ ನೇಮಕವೂ ಆಯಿತು. ಮೀನುಗಾರರ ಬಲೆಗಳು ಪಕ್ಷಿಗಳ ಪ್ರಾಣಕ್ಕೆ ಕಂಟಕವಾಗಿತ್ತು. ಇದನ್ನು ತಡೆಯುವುದಕ್ಕೂ ಸಾಧ್ಯವಾಯಿತು.

ಜೀವವೈ ವಿಧ್ಯದ ದೃಷ್ಟಿಯಿಂದ ತುಂಬಾ ಮಹತ್ವವಾದ ಕೆರೆ, ಸರೋ ವರ, ಜಲಾಶಯ, ಅಳಿವೆಗಳನ್ನು ಗುರುತಿಸಿ ಅವುಗಳಿಗೆ ರಾಮ್ಸಾರ್ ಜಾಗತಿಕ ಮನ್ನಣೆಯನ್ನು ನೀಡಲಾಗುತ್ತದೆ. ಈ ಗೌರವ ಮತ್ತು ಭದ್ರತೆಗೆ ವಿಜಯನಗರ ಜಿಲ್ಲೆ



ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಅಂಕಸಮುದ್ರ ಪಕ್ಷಿ ಸಂರಕ್ಷಣಾ ಮೀಸಲು ಪ್ರದೇಶ ಕಳೆದ ವರ್ಷ ಪಾತ್ರವಾಗಿದೆ.

ಇಲ್ಲಿರುವ 50 ಸಾವಿರಕ್ಕೂ ಹೆಚ್ಚು ಪಕ್ಷಿಗಳು ವಿಶೇಷವಾಗಿ ಅಲಾಸ್ಕ, ಸೈಬೀರಿಯಾ,ಯುರೋಪ್ ಸೇರಿದಂತೆ ದೇಶ-ವಿದೇಶಗಳಿಂದ ಆಹಾರ ಅರಸಿ ವಲಸೆ ಬಂದಿವೆ.

ಐಯುಸಿಎನ್ (ಇಂಟರ್ನ್ಯಾಷನಲ್ಯೂನಿಯನ್ ಫಾರ್ ಕನ್ಸರ್ವೇಶನ್ ಆಫ್ ನೇಚರ್)ನ ವರದಿಯಂತೆ ಅಳಿವಿನಂಚಿನಲ್ಲಿರುವ ದೇಶಿಯ ಹೆಜ್ಜಾರ್ಲೆ ಸಂತತಿ ಹೆಚ್ಚಿಸಿಕೊಂಡಿರುವುದು ಇಲ್ಲಿನ ವೈಶಿಷ್ಟ್ಯ . ಇಲ್ಲಿ ಹೇರಳವಾಗಿ ದೊರೆಯುವ ಮೀನು ಮತ್ತಿತರ ಜಲಚರಗಳನ್ನು ಪಕ್ಷಿಗಳು ಹಿಡಿಯುವ ಬಗೆ ಮತ್ತು ತುಂಗಭದ್ರಾ ಹಿನ್ನೀರು ಪ್ರದೇಶದಲ್ಲಿನ ಸಮೃದ್ಧ ಆಹಾರ ಅರಸಿ ಪಕ್ಷಿಗಳು ಗುಂಪುಗುಂಪಾಗಿ ಬೆಳಗಿನ ಜಾವ ತೆರಳುವ, ಸಂಜೆ ವೇಳೆ ಆಗಮಿಸುವ ದೃಶ್ಯವನ್ನು ನೋಡುವುದೇ ಚಂದ. ಅದೊಂದು ದೃಶ್ಯ ಕಾವ್ಯವೇ ಸರಿ.

2024 ಫೆಬ್ರುವರಿಯಲ್ಲಿ ಪಕ್ಷಿ ತಜ್ಞರು ನಡೆಸಿದ ಗಣತಿಯಲ್ಲಿ ಸ್ಥಳೀಯ ಮತ್ತು ದೇಶ–ವಿದೇ ಶಗಳ 168 ಪ್ರಭೇದಗಳ 48,825 ಪಕ್ಷಿಗಳು ಇದ್ದವು. ಈ ವರ್ಷ ಜನವರಿ 25 ರಂದು ನಡೆಸಿದ ಗಣತಿಯಲ್ಲಿ 132 ಪ್ರಭೇದಗಳ 50 ಸಾವಿರಕ್ಕೂ ಹೆಚ್ಚು ಬಾನಾಡಿಗಳು ಕಂಡುಬಂದಿವೆ. ನವೆಂಬರ್ ತಿಂಗಳಿನಿಂದ ಮಾರ್ಚ್‌ವರೆಗೂ ಜಲಪಕ್ಷಿಗಳ ಈ ಆವಾಸಸ್ಥಾನ ಸದಾ ಜೀವಂತಿಕೆಯಿಂದ ಕೂಡಿರುತ್ತದೆ. ಈ ಪ್ರದೇಶವನ್ನು ಸುಂದರಗೊಳಿಸಿ ಹೆಚ್ಚು ಪ್ರಭೇದಗಳ ಪಕ್ಷಿಗಳು ಇಲ್ಲಿಗೆ ಬರುವಂತೆಮಾಡಿದ್ದರ ಫಲವೇ 2024ರ ಜನವರಿ 31ರಂದು ರಾಮ್ಸಾರ್ ಎನ್ನುವ ಅಪರೂಪದ ಜೀವವೈ ವಿಧ್ಯಹೊಂದಿರುವ ಜಾಗತಿಕ ಮನ್ನಣೆ ಪಡೆದ ತಾಣವಾಯಿತು. ಇದೇ ವೇಳೆ ಗದಗ ಜಿಲ್ಲೆಯ ಮಾಗಡಿ ಕೆರೆ ಸಂರಕ್ಷಣಾ ಮೀಸಲು ಪ್ರದೇಶ, ಉತ್ತರ ಕನ್ನಡ ಜಿಲ್ಲೆಯ ಅಘನಾಶಿನಿ ನದೀಮುಖ ಸಹ ಈ ಮನ್ನಣೆ ಪಡೆದವು.

ಕರ್ನಾಟಕದ ಮೊದಲ ಸಂರಕ್ಷಿತ ಜೌಗು ಪ್ರದೇಶವಾದ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನತಿಟ್ಟು ಪಕ್ಷಿಧಾಮಕ್ಕೆ ರಾಮ್ಸರ್ ಟ್ಯಾಗ್ ದೊರೆತ ಎರಡು ವರ್ಷಗಳ ನಂತರ ಕರ್ನಾಟಕದ ಈ ತಾಣಗಳಿಗೆ ಮನ್ನಣೆ ಸಿಕ್ಕಿದೆ.

ಅಂಕಸಮುದ್ರ ಕೆರೆಯಲ್ಲಿ ಕೋಂಬ್ ಡಕ್ ಇಲ್ಲಿ ಪ್ರತಿವರ್ಷ ಚಳಿಗಾಲದಲ್ಲಿ ಬಾನಾಡಿಗಳ ಮಹಾಸಂಗಮವಾಗುತ್ತದೆ. ವಲಸೆ ಬರುವ ಬಾರ್ನ್ ಸ್ವಾಲೋ (ಕವಲು ತೋ ಕೆ), ರೋಸಿ ಸ್ಟಾರ್ಲಿಂಗ್ (ಗುಲಾಬಿ ಕಬ್ಬಕ್ಕಿ), ಓಸ್ಪ್ರೆ (ಮೀನು ಡೇಗೆ), ವಿಸ್ಕರ್ಡ್ ಟರ್ನ್ (ಮೀಸೆ ರೀವ), ಗ್ರೀನಿಷ್ ವಾರ್ಬಲರ್ (ಹಸಿರು ಎಲೆ ಉಲಿಯಕ್ಕಿ), ಗ್ರೇವಾಗ್ಟೈಲ್ (ಬೂದು ಸಿಪಿಲೆ),ಮಾರ್ಷ್ ಹ್ಯಾರಿಯರ್ (ಜಾಗು ಸೆಳೆವ), ಚೆಸ್ನಟ್ ಟೇಲ್ಡ್ ಸ್ಟಾರ್ಲಿಂ ಗ್, ಕಾಮನ್ ಸ್ಯಾಂಡ್ಪೈಪರ್ (ಗದ್ದೆಗೊರವ), ಬ್ರೌನ್ ಶ್ರೈಕ್ (ಕಂದು ಕಳಿಂಗ), ಕಾಮನ್ ಸ್ಟೋ ನ್ಚಾಟ್ (ಕಲ್ಲು ಚಟಕ), ವುಡ್ ಸ್ಯಾಂಡ್ಪೈಪರ್ (ಚುಕ್ಕೆ ಗದ್ದೆಗೊರವ), ಬ್ಲಾಕ್ ಹೆಡೆಡ್ ಬಂಟಿಂಗ್ (ಕಪ್ಪು ತಲೆಯ ದೊಡ್ಡ ಗುಬ್ಬಚ್ಚಿ), ಸ್ಪೋಟೆಡ್ ರೆಡ್ಶ್ಯಾಂಕ್,ಯುರೆಸಿಯನ್ ವಿಜಿಯನ್, ನಾರತನ್ ಪಿನ್ಟೈಲ್, ರೂಡಿ ಶೆಲ್ಡಕ್, ಗಾರ್ಗನಿ (ಬಿಳಿ ಹುಬ್ಬಿನ ಬಾತು), ನಾರ್ಥರ್ನ್ ಶೋವಲರ್ (ಚಲುಕ ಬಾತು), ಕಾಮನ್ ಟೆಲ್-ಹೀಗೆ ಬಾನಾಡಿಗಳ ಪ್ರಭೇದಗಳ ಸಂಖ್ಯೆ ಬೆಳೆಯುತ್ತಲೇ ಹೋಗುತ್ತದೆ. ಸಂತಾನೋತ್ಪತ್ತಿ ನಡೆಸುವುದಕ್ಕಾಗಿ ಬರುವ 80ಕ್ಕೂ ಹೆಚ್ಚು ಪ್ರಭೇದಗಳಲ್ಲಿ ಮುಖ್ಯವಾಗಿ ಪೇಂಟೆಂಡ್ ಸ್ಟಾರ್ಕ್ (ಬಣ್ಣದ ಕೊಕ್ಕರೆ) ಸ್ಪಾಟ್ ಬಿಲ್ಡ್ ಪೆಲಿಕಾನ್ (ಹೆಜ್ಜಾರ್ಲೆ), ಕೋಂಬ್‌ಡಕ್ (ಬಾಚಣಿಗೆ ಬಾತುಕೋ ಳಿ), ಇಂ ಡಿಯನ್ ಕಾರ್ಮೊರೆಂಟ್ ( ಉದ್ದಕೊಕ್ಕಿನ ಕಾಗೆ), ಡಾರ್ಟರ್ (ಹಾವಕ್ಕಿ), ಲೆಸರ್ ವಿಸಿಲಿಂಗ್ ಡಕ್ (ಚಿಕ್ಕ ಸಿಳ್ಳೆಬಾತು), ಲಿಟಲ್ ಕಾರ್ಮೊರೆಂಟ್ (ಸಣ್ಣ ನೀರು ಕಾಗೆ), ಲಾರ್ಜ್ ಕಾರ್ಮೊರೆಂಟ್ (ದೊಡ್ಡ ನೀರುಕಾಗೆ), ಗ್ಲೋಸಿ ಐಬೀಸ್ (ಮಿಂಚು ಕೆಂಬರಲು), ಕಾಮನ್ ಟೇಲರ್ ಬರ್ಡ್ (ಸಿಂಪಿಗೆ), ರೆಡ್ ವೆಂಟೆಡ್ ಬುಲ್ಬುಲ್ (ಕೆಂಪು ಚಿಬ್ಬೊಟ್ಟೆಯ ಪಿಕಳಾರ), ಲಾರ್ಜ್ ಗ್ರೇಬಾಬ್ಲರ್, ಕಾಪರ್ಸ್ಮಿತ್ ಬರ್ಬೆಟ್ ಸೇರಿದಂತೆ ಇಲ್ಲಿನ ಪ್ರದೇಶವನ್ನು ಹೆರಿಗೆ ಮನೆಯನ್ನಾಗಿಸಿಕೊಂಡಿವೆ.

ನೀ ರುನಾಯಿಗಳು ಚಿನ್ನಾಟ...

ಪಕ್ಷಿಪ್ರಿಯರನ್ನು ಆಕರ್ಷಿಸುವ ಈ ಪ್ರದೇಶದಲ್ಲಿ ನೀರುನಾಯಿಗಳ ತುಂಟಾಟ ನೋಡಲು ಬಲು ಚೆಂದ. ತುಂಗಭದ್ರಾ ಹಿನ್ನೀರು ಮತ್ತು ಕೆರೆಯ ಪ್ರದೇಶದ ನಡುವೆ ಕೇವಲ 500 ಮೀ ಟರ್ ಅಂತರವಿದೆ. ಅಲ್ಲಿಂದ ಬಂದಿರುವ ನೀರುನಾಯಿಗಳು ಕಳೆದ ವರ್ಷ ಆರು ಇದ್ದವು. ಈ ವರ್ಷವೂ ಇಲ್ಲಿಯೇ ಇವೆ. ಪಕ್ಷಿಧಾಮದಲ್ಲಿ ದೊರೆಯುವ ಕ್ಯಾಟ್ ಫಿಷ್ (ಮುರುಗೋ ಡ) ಇವುಗಳಿಗೆ ಭರ್ಜರಿ ಭೋಜನ ಒದಗಿಸುತ್ತಿವೆ. ಬಾನಾಡಿಗಳ ಜೀವವೈ ವಿಧ್ಯಕ್ಕೆ ಕಂಟಕವಾಗಿರುವ ಕ್ಯಾಟ್ಫಿಷ್ಗಳಿಗೆ, ಅವುಗಳ ಉಪಟಳಕ್ಕೆ ಬ್ರೇಕ್ ಹಾಕಲು ಪ್ರಕೃತಿಯೇ ನೀರುನಾಯಿಗಳನ್ನು ಸ್ವಾಗತಿಸಿದಂತಿದೆ.







# ಪ್ರತಿ ಐವರು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ: ಅಧ್ಯಯನ ಬಹಿರಂಗ




**ನವದೆಹಲಿ: ಭಾರತೀಯರು ಗುಪ್ತ ಆರೋಗ್ಯ ಸಮಸ್ಯೆಯ ಸಂಕಷ್ಟದಲ್ಲಿ ಸಿಲುಕಿಹಾಕಿಕೊಂಡಿದ್ದಾರೆಯೇ? ಇತ್ತೀಚಿನ ಅಧ್ಯಯನವೊಂದರ ಪ್ರಕಾರ, ಪ್ರತಿ ಐದು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದೆ. ಜನರ ಜೀವನಶೈಲಿ, ಆಹಾರ ಪದ್ಧತಿ ಮತ್ತು ನೀತಿ ನಿರೂಪಣೆಯಲ್ಲಿನ ನ್ಯೂನತೆಗಳಿಂದಾಗಿ ಆರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಾಡುತ್ತಿವೆ ಎಂಬ ಆತಂಕಕಾರಿ ಅಂಕಿಅಂಶಗಳನ್ನು ಅಧ್ಯಯನವು ತೋರಿಸಿದೆ.**

**ಭಾರತೀಯ ಅಂತಾರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿ (ಖಅಖಖಇಖ) ಮತ್ತು ಒಗಿಏಂ ಫೌಂಡೇಶನ್ ನಡೆಸಿದ ಸಂಶೋಧನೆ ಪ್ರಕಾರ, ದೇಶದ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಈ ವಿಷಯ ಬಹಿರಂಗವಾಗಿದೆ.**

ಭಾರತ ದೇಶದ ಪೂರ್ವ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆಯು ಹೆಚ್ಚಾಗಿದೆ. ಹದಿಹರೆಯದವರು, ಶಿಶುಗಳು, ವೃದ್ಧರು ಮತ್ತು ಎಲ್ಲಾ ವಯೋಮಾನದ ಮಹಿಳೆಯರು ವಿಟಮಿನ್ ಡಿ ಕೊರತೆಯಿಂದ ಹೆಚ್ಚು ಬಳಲುತ್ತಿದ್ದಾರೆ. ನಗರ ಪ್ರದೇಶದ ಜನರ ಜೀವನಶೈಲಿ ಮತ್ತು ಸೂರ್ಯನ ಬೆಳಕಿಗೆ ಸೀಮಿತ ಒಡ್ಡಿಕೊಳ್ಳುವಿಕೆಯಿಂದಾಗಿ, ಗ್ರಾಮೀಣ ಪ್ರದೇಶದವರಿಗಿಂತ ಕಾಯಿಲೆಗಳಿಗೆ ಹೆಚ್ಚಾಗಿ ಒಳಗಾಗುತ್ತಿದ್ದಾರೆ.

ವಿಟಮಿನ್ ಡಿ ಕೊರತೆಯು ರಿಕೆಟ್ಸ್ ಮತ್ತು ಆಸ್ಟಿಯೋಮಲೇಶಿಯಾದಂತಹ ಅಸ್ಥಿಪಂಜರದ ಅಸ್ವಸ್ಥತೆಗಳನ್ನು ಮೀರಿ ಬೆಳೆಯುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ಇದು ಸ್ನಾಯು ದೌರ್ಬಲ್ಯ, ಖಿನ್ನತೆ, ಹೃದಯ ಸಂಬಂಧಿ ಕಾಯಿಲೆಗಳು, ಟೈಪ್ 2 ಮಧುಮೇಹ ಮತ್ತು ಕೆಲವು ಕ್ಯಾನ್ಸರ್ಗೆ ಕಾರಣವಾಗುತ್ತದೆ.

ವಿಟಮಿನ್ ಡಿ ಕೊರತೆಯು ಲಕ್ಷಾಂತರ ಜನರನ್ನು ಬಾಧಿಸುವ ಮೌನ ಸಾಂಕ್ರಾಮಿಕ ರೋಗವಾಗಿದೆ, ಆದರೆ ಹೆಚ್ಚಾಗಿ ಜನರು ಇದನ್ನು ಕಡೆಗಣಿಸುತ್ತಾರೆ. ಇದರ ಪರಿಣಾಮಗಳು ದುರ್ಬಲ ಮೂಳೆಗಳನ್ನು ಮೀರಿ ವಿಸ್ತರಿಸುತ್ತವೆ. ಆರೋಗ್ಯ ವ್ಯವಸ್ಥೆಯನ್ನು ಒತ್ತಡಕ್ಕೆ ಒಳಪಡಿಸುತ್ತದೆ. ನಮ್ಮ ರಾಷ್ಟ್ರೀಯ ಆರೋಗ್ಯ ಗುರಿಗಳನ್ನು ದುರ್ಬಲಗೊಳಿಸುತ್ತದೆ ಎಂದು ಆಕಾಶ್ ಹೆಲ್ತ್ಕೇರ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಯನದ ಸಹ–ಲೇಖಕ ಡಾ. ಆಶಿಶ್ ಚೌಧರಿ ಹೇಳುತ್ತಾರೆ.

ಬಿಕ್ಕಟ್ಟನ್ನು ಪರಿಹರಿಸಲು ಹಲವಾರು ವ್ಯವಸ್ಥಿತ ಅಡೆತಡೆಗಳನ್ನು ವರದಿಯು ಗುರುತಿಸುತ್ತದೆ. ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ಹೆಚ್ಚಿನ ಪರೀಕ್ಷಾ ವೆಚ್ಚಗಳು ಮತ್ತು ಆರೋಗ್ಯ ಪೂರಕಗಳ ಮೇಲಿನ ಶೇಕಡಾ 18ರಷ್ಟು ಜಿಎಸ್ಟಿಯು ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಅನೇಕರಿಗೆ ಭರಿಸಲಾಗದಂತೆ ಮಾಡುತ್ತದೆ.

### ಗರ್ಭಧಾರಣೆ–ಮಗುವಿಗೆ 2 ವರ್ಷ ತುಂಬುವವರೆಗೆ ಸಕ್ಕರೆ ಸೇವನೆಗೆ ನಿರ್ಬಂಧ

# ಶೇ.35ರಷ್ಟು ಮಧುಮೇಹ ಅಪಾಯ ಕಡಿಮೆ

**ನವದೆಹಲಿ: ಬದಲಾದ ಜೀವನಶೈಲಿಯಿಂದ ಇಂದು ಮಕ್ಕಳಲ್ಲಿಯೂ ಮಧುಮೇಹವನ್ನು ಸರ್ವೇಸಾಮಾನ್ಯವಾಗಿ ನೋಡುತ್ತಿದ್ದೇವೆ. ಇದು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ಅಪಾಯಕಾರಿ. ಹುಟ್ಟಲಿರುವ ಮಗುವಿನ ಆರೋಗ್ಯವು ತಾಯಿಯ ಆರೋಗ್ಯದ ಮೇಲೆ ಅವಲಂಬಿತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಇತ್ತೀಚಿನ ಅಧ್ಯಯನವೊಂದು ಹಲವು ಕುತೂಹಲಕಾರಿ ಸಂಗತಿಗಳನ್ನು ಬಹಿರಂಗಪಡಿಸಿದೆ.**

**ತಾಯಿಯು ಗರ್ಭಧಾರಣೆಯಿಂದ ಮಗು ಹುಟ್ಟಿದ 2 ವರ್ಷಗಳ ವರೆಗೆ ಮಕ್ಕಳಿಗೆ ಸಕ್ಕರೆ ಅಂಶಗಳನ್ನು ಪರಿಚಯಿಸದೇ ಇದ್ದರೆ, ವಯಸ್ಕ ಜೀವನದಲ್ಲಿ ದೀರ್ಘಕಾಲದ ಕಾಯಿಲೆಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಇದು ಕಡಿಮೆ ಮಾಡುತ್ತದೆ ಎಂದು ಹೇಳಿದೆ.**



ದಕ್ಷಿಣ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾನಿಲಯ ಈ ಅಧ್ಯಯನ ನಡೆಸಿದ್ದು, ಈ ಅಧ್ಯಯನವು ಸೈನ್ಸ್ ಜರ್ನಲ್‌ನಲ್ಲಿ ಪ್ರಕಟವಾಗಿದೆ.

ಮಕ್ಕಳ ಆರಂಭಿಕ ಜೀವನದಲ್ಲಿ ಸಕ್ಕರೆಯ ಸೇವನೆಯನ್ನು ಕಡಿಮೆ ಮಾಡುವುದರಿಂದ ಟೈಪ್ 2 ಮಧುಮೇಹವನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಶೇ.35% ರಷ್ಟು ಮತ್ತು ಅಧಿಕ ರಕ್ತದೊತ್ತಡವು ಶೇ.20 ರಷ್ಟು ಕಡಿಮೆ ಮಾಡಬಹುದು ಎಂದು ಅಧ್ಯಯನ ತಿಳಿಸಿದೆ,

ನ್ಯೂಟ್ರಿಷನ್ ಅಡ್ವೊಕಸಿಯ ಸಂಚಾಲಕ ಡಾ ಅರುಣ್ ಗುಪ್ತಾ ಅವರು ಮಾತನಾಡಿ, ಗರ್ಭಾವಸ್ಥೆಯಲ್ಲಿ ಮತ್ತು ಬಾಲ್ಯದಲ್ಲಿ ಸಕ್ಕರೆ ಸೇವನೆಯನ್ನು ಕಡಿಮೆ ಮಾಡುವಂತೆ ಅಧ್ಯಯನ ಸಲಹೆ ನೀಡಿದೆ ಎಂದು ಹೇಳಿದ್ದಾರೆ,

ಸೆಪ್ಟೆಂಬರ್ 1953 ರಲ್ಲಿ 2ನೇ ಮಹಾಯುದ್ಧದಿಂದ ಬ್ರಿಟನ್ ಚೇತರಿಸಿಕೊಳ್ಳುತ್ತಿರುವಾಗ ಸಕ್ಕರೆ ಪಡಿತರದಿಂದಾಗಿ ಸುಮಾರು 60,000 ಜನರು ಪ್ರಭಾವಿತರಾಗಿದ್ದರು. ಸಕ್ಕರೆ ಪಡಿತರ ವಿತರಣೆ ಬಳಿಕ ಜನರದಲ್ಲಿ ದೀರ್ಘಕಾಲಿಕ ರೋಗಗಳಿಗೆ ಒಳಗಾಗುವುದು ಹೆಚ್ಚಾಗಿರವುದನ್ನು ಅಧ್ಯಯನ ಪತ್ತೆ ಮಾಡಿದೆ.

ಅಧ್ಯಯನ ನಡೆಸಿದ ಸಂಶೋಧಕರು ಪಡಿತರ ವಿತರಣೆಗೂ ಮುನ್ನ ಹಾಗೂ ನಂತರದ ಗರ್ಭಿಣಿಯರ ಆರೋಗ್ಯ ಮತ್ತು ಮಕ್ಕಳ ಆರೋಗ್ಯವನ್ನು ಅವಲೋಕನ ನಡೆಸಿದ್ದು, ಇದರ ನಡುವಿನ ವ್ಯತ್ಯಾಸವು ಮಗುವಿನ ಜೀವನದ ಮೊದಲ 1,000 ದಿನಗಳು ಅದರ ಭವಿಷ್ಯದ ಆರೋಗ್ಯವನ್ನು ರೂಪಿಸಲು ನಿರ್ಣಾಯಕ ಅವಧಿಯಾಗಿದೆ ಎಂಬುದನ್ನು ಕಂಡುಕೊಂಡಿದೆ.

ಗರ್ಭಾವಸ್ಥೆಯಲ್ಲಿ ತಾಯಿ ಸೇವನೆ ಮಾಡುವ ಆಹಾರವು ಅತ್ಯಂತ ಮುಖ್ಯವಾಗಿದೆ, ಕಡಿಮೆ ಸಕ್ಕರೆಯ ಆಹಾರದ ಮೂರನೇ ಒಂದು ಭಾಗವು ಗರ್ಭದಲ್ಲಿರುವಾಗಲೇ ಮಗುವಿನ ಮೇಲೆ ಪರಿಣಾಮ ಬೀರುತ್ತದೆ. ಆದಾಗ್ಯೂ, ಮಗುವಿಗೆ ಗರ್ಭದಲ್ಲಿರುವಾಗ ಸಕ್ಕರೆ ಅಂಶವನ್ನು ಕಡಿತಗೊಳಿಸಿದಾಗ ಮತ್ತು ಘನ ಆಹಾರಗಳ ಮೂಲಕ ಆಹಾರ ಸೇವಿಸುವಂತೆ ಮಾಡಿದರೆ ಆರೋಗ್ಯದಲ್ಲಿ ಸುಧಾರಣೆಗಳನ್ನು ತರಬಹುದು ಎಂದು ಅಧ್ಯಯನ ತಿಳಿಸಿದೆ.

## ಶ್ರವಣದೋಷ ಅಸಡ್ಡೆ ಬೇಡ...



**ಬೆಂಗಳೂರು:** ವಯಸ್ಸಾದವರಲ್ಲಿ ಶ್ರವಣದೋಷವು ಸಾಮಾನ್ಯ ಸಮಸ್ಯೆಯಾಗಿರುತ್ತದೆ. ಆರಂಭದಲ್ಲಿ ಸೌಮ್ಯ ಗಾತ್ರದಿಂದ ಹಿಡಿದು ತೀವ್ರ – ಆಳವಾದ ಮಟ್ಟಗಳವರೆಗೆ ಶ್ರವಣದೋಷ ಸಮಸ್ಯೆ ಇರುತ್ತದೆ. ವಯಸ್ಸಾದವರು ಕಿವಿ ಕೇಳಿಸದಿರುವ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ, ಅವರ ಕುಟುಂಬದವರು ಸಹ ಅಸಡ್ಡೆ ಮಾಡುತ್ತಾರೆ. ಮನುಷ್ಯನಿಗೆ ದೃಷ್ಟಿಹೀನತೆ ಸಮಸ್ಯೆ ಬಂದರೆ ಅದನ್ನು ಹೊಂದಿರುವ ವ್ಯಕ್ತಿ ಕಡೆಗೆ ತಕ್ಷಣದ ಗಮನ ನೀಡುತ್ತಾರೆ. ಆದರೆ ವಯಸ್ಸಾದವರಲ್ಲಿ ಶ್ರವಣ ನಷ್ಟವನ್ನು ತಡವಾಗಿ ಅಥವಾ ಎಂದಿಗೂ ಪರಿಹರಿಸುವುದಿಲ್ಲ. ವ್ಯಕ್ತಿಗೆ ಶ್ರವಣ ದೋಷ ಉಂಟಾದಾಗ ಸಾಮಾಜಿಕ ಕೌಶಲ್ಯ ಕೂಡ ಕಡಿಮೆಯಾಗುತ್ತದೆ. ಬೇರೆಯವರು ಅವರನ್ನು ಅಷ್ಟಾಗಿ ಮಾತನಾಡಿಸುವುದಿಲ್ಲ,

ಹೀಗಾದಾಗ ಅವರು ಪ್ರತ್ಯೇಕವಾಗುತ್ತಾರೆ. ಶ್ರವಣದೋಷವುಳ್ಳ ಹಿರಿಯರೊಂದಿಗೆ ಸಂಭಾಷಣೆ ನಡೆಸುವಾಗ, ಬೇರೆಯವರು ಅವರನ್ನು ಅಷ್ಟಾಗಿ ಮಾತನಾಡಿಸುವುದಿಲ್ಲ, ಹೀಗಾದಾಗ ಅವರು ಪ್ರತ್ಯೇಕವಾಗುತ್ತಾರೆ.

ಶ್ರವಣದೋಷವುಳ್ಳ ಹಿರಿಯರೊಂದಿಗೆ ಸಂಭಾಷಣೆ ನಡೆಸುವಾಗ, ಸಂಭಾಷಣೆಯಲ್ಲಿ ಸ್ಪಷ್ಟತೆಯನ್ನು ಹೊಂದಲು ಸಾಧ್ಯವಾಗದಿದ್ದಾಗ ಅಥವಾ ವಿಭಿನ್ನವಾಗಿ ಉತ್ತರಿಸಲು ಸಾಧ್ಯವಾಗದಿದ್ದಾಗ ಅವರು ನಗುವುದನ್ನು ನಾವು ಅನೇಕ ಬಾರಿ ಗಮನಿಸುತ್ತೇವೆ. ದಿನನಿತ್ಯದ ಚಟುವಟಿಕೆಗಳಿಗೆ ಮಾತನಾಡುವ ಭಾಷೆ ಮತ್ತು ಸಕ್ರಿಯ ಸಂಭಾಷಣೆಗಳನ್ನು ಆಲಿಸುವ ಅಗತ್ಯವಿದೆ, ಇದು ಅವರನ್ನು ಮಾನಸಿಕವಾಗಿ ತೊಡಗಿಸಿಕೊಳ್ಳುತ್ತದೆ ಮತ್ತು ಉತ್ತಮ ಸ್ಮರಣೆಯನ್ನು ಹೊಂದಲು ಸಹಾಯ ಮಾಡುತ್ತದೆ.

## ಬೇಬಿ ಕಾರ್ನ್ ಫ್ರೈ



ಬೇಕಾಗುವ ಪದಾರ್ಥಗಳು...
ಬೇಬಿ ಕಾರ್ನ್– 1 ಬಟ್ಟಲು
ಕಡಲೆ ಹಿಟ್ಟು– 1 ಬಟ್ಟಲು
ಈರುಳ್ಳಿ– 1
ಬ್ರೆಡ್ ಪೌಡರ್– 1 ಬಟ್ಟಲು
ಅಕ್ಕಿ ಹಿಟ್ಟು– 1 ಚಮಚ
ಕ್ಯಾಪ್ಸಿಕಂ– 1
ಅಚ್ಚ ಖಾರದ ಪುಡಿ– 1 ಚಮಚ
ಕಾಳುಮೆಣಸಿನ ಪುಡಿ– ಅರ್ಧ ಚಮಚ
ಉಪ್ಪು–ರುಚಿಗೆ ತಕ್ಕಷ್ಟು

**ಮಾಡುವ ವಿಧಾನ...**

ಒಂದು ಪಾತ್ರೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಲು ಇಡಿ. ಮತ್ತೊಂದು ಪಾತ್ರೆಯಲ್ಲಿ ಕಡಲೆ ಹಿಟ್ಟು, ಕಾಳು ಮೆಣಸಿನ ಪುಡಿ, ಖಾರದ ಪುಡಿ, ಅಕ್ಕಿ ಹಿಟ್ಟು, ಉಪ್ಪು ಹಾಗೂ ಸ್ವಲ್ಪ ನೀರು ಹಾಕಿ ದಪ್ಪ ಮಿಶ್ರಣ ಮಾಡಿಕೊಳ್ಳಿ.ಒಲೆಯ ಮೇಲೆ ಬಾಣಲೆ ಇಟ್ಟು, ಎಣ್ಣೆ ಹಾಕಿ. ಬಿಸಿಯಾದ ಮೇಲೆ ಕತ್ತರಿಸಿದ ಕ್ಯಾಪ್ಸಿಕಂ ಹಾಗೂ ಕತ್ತರಿಸಿದ ಈರುಳ್ಳಿಯನ್ನು ಎಣ್ಣೆಗೆ ಹಾಕಿ ಫ್ರೈ ಮಾಡಿ. ಬದಿಗಿಟ್ಟುಕೊಳ್ಳಿ.

ನಂತರ ಬೇಬಿ ಕಾರ್ನ್ ಪೀಸ್ ಗಳನ್ನು ಕಡಲೆ ಹಿಟ್ಟಿನ ಮಿಶ್ರಣದಲ್ಲಿ ಅದ್ದಿ. ನಂತರ ಬ್ರೆಡ್ ಪೌಡರ್ ನಲ್ಲಿ ಹೊರಳಿಸಿ ಎಣ್ಣೆಯಲ್ಲಿ ಬಿಡಿ. ಬೇಬಿ ಕಾರ್ನ್ ಗೋಲ್ಡನ್ ಬಣ್ಣಕ್ಕೆ ಬರ್ತಿದ್ದಂತೆ ತೆಗೆದು, ಕರಿದ ಈರುಳ್ಳಿ, ಕ್ಯಾಪ್ಸಿಕಂ ಮೇಲೆ ಉದುರಿಸಿದರೆ ರುಚಿಕರಾದ ಬೇಬಿ ಕಾರ್ನ್ ಫ್ರೈ ಸವಿಯಲು ಸಿದ್ಧ.

## ಪುರುಷರ ಆರೋಗ್ಯ ಜಾಗೃತಿ: ಈ ರೋಗಲಕ್ಷಣಗಳು ಕಂಡುಬಂದರೆ ಖಂಡಿತಾ ನಿರ್ಲಕ್ಷಿಸಬೇಡಿ!

**ಬೆಂಗಳೂರು:** ಆರೋಗ್ಯ ಮನುಷ್ಯ ಜೀವನದ ನಿಜವಾದ ಸಂಪತ್ತು, ಮಾನಸಿಕ ಮತ್ತು ದೈಹಿಕ ಆರೋಗ್ಯವು ಸರಿಯಾಗಿದ್ದರೆ ಏನನ್ನು ಬೇಕಾದರೂ ಸಾಧಿಸಬಹುದು ಎಂಬ ಮಾತಿದೆ.ಇತ್ತೀಚಿನ ಒತ್ತಡದ ವೇಗದ ಬದುಕಿನಲ್ಲಿ ಅನೇಕರು ತಮ್ಮ ಆರೋಗ್ಯದ ಕಡೆಗೆ ಗಮನ ಹರಿಸುವುದನ್ನು ನಿರ್ಲಕ್ಷಿಸುತ್ತಾರೆ. ಹೀಗಾದಾಗ ದೇಹದಲ್ಲಿ ಕೆಲವು ನ್ಯೂನತೆ ಕಂಡುಕೊಂಡು ನಮಗೆ ಎಚ್ಚರಿಕೆ ನೀಡುತ್ತಿರುತ್ತದೆ. ಯಾವುದೇ ನಿರಂತರ ಅಥವಾ ಅಸಾಮಾನ್ಯ ರೋಗಲಕ್ಷಣಗಳಿಗೆ ಪೂರ್ವಭಾವಿಯಾಗಿ ವೈದ್ಯಕೀಯ ಸಲಹೆಯನ್ನು ಪಡೆಯುವುದು ಸಂಭಾವ್ಯ ಆರೋಗ್ಯ ಸಮಸ್ಯೆಗಳನ್ನು ಮೊದಲೇ ಪತ್ತೆಹಚ್ಚಲು ಮತ್ತು ಫಲಿತಾಂಶಗಳನ್ನು ಸುಧಾರಿಸಲು ಕಾರಣವಾಗಬಹುದು. ಪುರುಷರು ಸಾಮಾನ್ಯವಾಗಿ ನಿರ್ಲಕ್ಷಿಸುವ ಕೆಲವು ರೋಗಲಕ್ಷಣಗಳು ಈ ರೀತಿ ಇವೆ:ಎದೆಯಲ್ಲಿ ಅಸ್ವಸ್ಥತೆ ಅಥವಾ ನೋವುಪುರುಷರು ನಿರ್ಲಕ್ಷಿಸುವ ಸಾಮಾನ್ಯ ರೋಗ ಲಕ್ಷಣಗಳಲ್ಲಿ ಇದು ಮುಖ್ಯವಾಗಿದೆ. ಎದೆ ನೋವು ವಿವಿಧ ಕಾರಣಗಳನ್ನು ಹೊಂದಿರಬಹುದು. ಈ ರೋಗಲಕ್ಷಣವನ್ನು ನಿರ್ಲಕ್ಷಿಸುವುದು ಜೀವಕ್ಕೆ ಅಪಾಯಕಾರಿ. ಎದೆಯ ಅಸ್ವಸ್ಥತೆಯ ಯಾವುದೇ ರೂಪವು ಗಂಭೀರವಾದ ಪರಿಸ್ಥಿತಿಗಳನ್ನು ಭವಿಷ್ಯದಲ್ಲಿ ಉಂಟುಮಾಡುವ ಸಾಧ್ಯತೆಯಿರುವುದರಿಂದ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಉತ್ತಮ.

# ಎಚ್ಚರ... ಅತಿಯಾದ ಕಾಫಿ ಸೇವನೆಯಿಂದ ಬಿ.ಪಿ ಮಧುಮೇಹ ಹೆಚ್ಚಳ

**ಬೆಂಗಳೂರು:** ಕಾಫಿ ಕುಡಿಯುವ ಅಭ್ಯಾಸ ಯಾರಿಗೆ ತಾನೇ ಇಲ್ಲ ಹೇಳಿ. ಆದರೆ, ಅತಿಯಾದರೆ ಅಮೃತವೂ ವಿಷವಾಗುತ್ತದೆ ಎಂಬ ಮಾತಿದೆ. ಕಾಫಿ ಕೂಡ ದೀರ್ಘಕಾಲಿಕ ರೋಗಗಳನ್ನು ತಂದೊಡ್ಡುವ ಸಾಧ್ಯತೆಗಳಿದ್ದು. ಎಚ್ಚರವಹಿಸುವಂತೆ ವೈದ್ಯರು ಸಲಹೆ ನೀಡಿ–ದ್ದಾರೆ.

ಅತಿಯಾದ ಕಾಫಿ ಸೇವನೆಯು ಅಧಿಕ ರಕ್ತದೊತ್ತಡ ಹಾಗೂ ಆತಂಕ (Anxiety) ಸಮಸ್ಯೆಯನ್ನು ಹೆಚ್ಚಿಸುತ್ತದೆ ಎಂದು ಅಧ್ಯಯನವೊಂದು ಹೇಳಿದೆ.

ಆತಂಕ (Anxiety) ಸಮಸ್ಯೆಯೊಂದಿಗೆ ಆಸ್ಪತ್ರೆಗೆ ಬರುವ ಸಾಕಷ್ಟು ರೋಗಿಗಳು ಸಾಮಾನ್ಯವಾಗಿ ಅತಿಯಾದ ಕಾಫಿ ಸೇವನೆ ಮಾಡುವ ಅಭ್ಯಾಸವನ್ನು ರೂಢಿಸಿಕೊಂಡಿರುತ್ತಾರೆ. ಏಕೆಂದರೆ ಕೆಲಸ ಸಮಯದಲ್ಲಿ ಕಾಫಿ ಸುಲಭವಾಗಿ ಲಭ್ಯವಿರುವ ಕಾರಣ ಅಭ್ಯಾಸವನ್ನು ಬೆಳೆಸಿಕೊಂಡಿರುತ್ತಾರೆ. ಆದರೆ, ಇದರಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿದ್ದರೂ ಗಮನ ಹರಿಸುವುದಿಲ್ಲ.ನಮ್ಮಲ್ಲಿ ಅನೇಕರು ಕೆಲಸ ಒತ್ತಡ ದೂರಾಗಿಸಲು ಅತಿಯಾಗಿ ಕಾಫಿ ಸೇವನೆ ಮಾಡುವುದುಂಟು. ಆದರೆ, ಇದು



ಸಮಸ್ಯೆಯನ್ನು ಉಲ್ಬಣಿಸುತ್ತದೆ ಎಂಬ ಅರಿವು ಅವರಿಗಿರುವುದಿಲ್ಲ. ಅತಿಯಾದ ಕಾಫಿ ಸೇವನೆ ರಕ್ತದೊತ್ತಡವನ್ನು ಹಾಗೂ ಆತಂಕದ ಸಮಸ್ಯೆಗಳನ್ನು ಹೆಚ್ಚು ಮಾಡುತ್ತದೆ ಎಂದು ವೈದ್ಯರು ತಿಳಿಸಿದ್ದಾರೆ. ಜನರಲ್ ಹಾಸ್ಪಿಟಲ್ ಸೈಕಿಯಾಟ್ರಿಯಲ್ಲಿನ ಅಧ್ಯಯನಗಳಲ್ಲಿ ಒಂದಾಗಿರುವ ಮಾಸಿಕ ಆರೋಗ್ಯ ಜರ್ನಲ್ ಈ ಕುರಿತು ಅಧ್ಯಯನ ನಡೆಸಿದ್ದು, ಅಧ್ಯಯನದಲ್ಲಿ ಅತಿಯಾದ ಕೆಫೀನ್ ಸೇವನೆಯು ಆತಂಕ (Anxiety) ಹದಗೆಡುವಂತೆ ಮಾಡುತ್ತದೆ ಎಂದು ತಿಳಿದುಬಂದಿದೆ.

ಅಮೇರಿಕನ್ ಜರ್ನಲ್ ಆಫ್ ಕ್ಲಿನಿಕಲ್ ನ್ಯೂಟ್ರಿಷನ್‌ನಲ್ಲಿನ ಮತ್ತೊಂದು ಸಂಶೋಧನೆಯು ಅಧಿಕ ಕೆಫೀನ್ ಸೇವನೆಯನ್ನು ರಕ್ತದೊತ್ತಡ ಸಮಸ್ಯೆಯನ್ನು ಹೆಚ್ಚಿಸುತ್ತದೆ. ಇದು ಹೃದಯರಕ್ತನಾಳದ ಅಸ್ವಸ್ಥತೆಗಳ ಅಪಾಯವನ್ನು ಹೆಚ್ಚಿಸುತ್ತದೆ ಎಂದು ತಿಳಿಸಿದೆ.ಪ್ರತಿನಿತ್ಯ ಮೂರು–ನಾಲ್ಕು ಕಪ್ಗಳು ಅಥವಾ 400 ಮಿಗ್ರಾಂ ಕೆಫೀನ್ ಅನ್ನು ಸೇವಿಸುವುದು ಸುರಕ್ಷಿತವೆಂದು ಹೇಳಲಾಗುತ್ತದೆ. ಆದರೆ, ಅದಕ್ಕಿಂತೂ ಹೆಚ್ಚು ಸೇವನೆ ಅಪಾಯಕಾರಿ ಎಂದು ವೈದ್ಯರು ತಿಳಿಸಿದ್ದಾರೆ.ಮುಖ್ಯವಾಗಿ ಗರ್ಭಿಣಿಯರು ಜಾಗರೂಕರಾಗಿರಬೇಕು ಏಕೆಂದರೆ ಅತಿಯಾದ ಕೆಫೀನ್ ಸೇವನೆ ಗರ್ಭಪಾತ ಮತ್ತು ಕಡಿಮೆ ತೂಕದ ಅಪಾಯವನ್ನು ಹೆಚ್ಚಿಸುತ್ತದೆ. ಇದಲ್ಲದೆ, ಕಾಫಿ ಸೇವನೆಯು ನೇರವಾಗಿ ಸಕ್ಕರೆಯ ಬಳಕೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ.ಆಸ್ಟರ್ ಸಿಎಂಐ ಆಸ್ಪತ್ರೆಯ ಕ್ಲಿನಿಕಲ್ ನ್ಯೂಟ್ರಿಷನ್ ಮತ್ತು ಡಯೆಟಿಕ್ಸ್ ವಿಭಾಗದ ಮುಖ್ಯಸ್ಥ ಎಡ್ವಿನಾ ರಾಜ್ ಅವರು ಮಾತನಾಡಿ, ಅತಿಯಾದ ಕಾಫಿ ಸೇವನೆಯು ಹೆಚ್ಚಿದ ರಕ್ತದೊತ್ತಡ ಸೇರಿದಂತೆ ವಿವಿಧ ಅಡ್ಡಪರಿಣಾಮಗಳಿಗೆ ಕಾರಣವಾಗಬಹುದು.

# ಸಾಕುಪ್ರಾಣಿಗಳಿಂದಲೂ ಶ್ವಾಸಕೋಶದ ಕ್ಯಾನ್ಸರ್ ಸಾಧ್ಯತೆ!

**ಧೂಮಪಾನ ಮತ್ತು ವಾಯುಮಾಲಿನ್ಯದ ಪರಿಣಾಮವಾಗಿ ಶ್ವಾಸಕೋಶದ ಕಾಯಿಲೆಗಳು ಮತ್ತು ಕ್ಯಾನ್ಸರ್ ಕಂಡುಬರುತ್ತದೆ ಎಂದು ಹೇಳಲಾದರೂ ಕಡಿಮೆ ಮತ್ತು ಕಳಪೆ ಗಾಳಿ ಇರುವ ಸ್ಥಳಗಳಲ್ಲಿ ಸುಡುವ ಗಂಧದ ಕಡ್ಡಿ, ಏರ್ ಫ್ರೆಶ್ನರ್, ಪಾರಿವಾಳಗಳು, ಇಲಿಗಳು, ನಾಯಿಗಳು ಹಾಗೂ ಬೆಕ್ಕುಗಳಂತಹ ಸಾಕುಪ್ರಾಣಿಗಳಿಂದಲೂ ಶ್ವಾಸಕೋಶದ ಕಾಯಿಲೆ ಬರುವ ಸಾಧ್ಯತೆಯಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.**

**ಸಾಮಾನ್ಯವಾಗಿ ಕಡೆಗಣಿಸಲ್ಪಡುವ ಈ ಸಣ್ಣ ಅಂಶಗಳು ಉಸಿರಾಟದ ಆರೋಗ್ಯವನ್ನು ಹದಗೆಡಿಸುವ ಹಾನಿಕಾರಕ ಕಣಗಳನ್ನು ಬಿಡುಗಡೆ ಮಾಡುತ್ತವೆ ಎಂದು ವೈದ್ಯರು ಹೇಳಿದ್ದಾರೆ. ಸೆಪ್ಟೆಂಬರ್ 25 ರಂದು ವಿಶ್ವ ಶ್ವಾಸಕೋಶ ದಿನವನ್ನು ಆಚರಿಸಲಾಗುತ್ತದೆ. 'ಕ್ಲೋಸ್ ದಿ ಕೇರ್ ಗ್ಯಾಪ್: ಪ್ರತಿಯೊಬ್ಬರೂ ಕ್ಯಾನ್ಸರ್ ಕೇರ್ಗೆ ಪ್ರವೇಶಕ್ಕೆ ಅರ್ಹರು' ಎಂಬ 2024 ರ ಥೀಮ್ನೊಂದಿಗೆ ಆಚರಿಸಲಾಗುತ್ತಿದೆ.**



ಸ್ಥೂಲಕಾಯಕ್ಕೆ ಪ್ರಮುಖ ಕೊಡುಗೆ ನೀಡುವ ಸಂಸ್ಕರಿಸಿದ ಕಾರ್ಬೋಹೈಡ್ರೇಟ್ಗಳು ಮತ್ತು ಸ್ಯಾಚುರೇಟೆಡ್ ಕೊಬ್ಬಿನ ಸೇವನೆಯು ಉಸಿರಾಟದ ಸಮಸ್ಯೆಗಳಿಗೆ ಮೂಲ ಕಾರಣಗಳಾಗಿವೆ ಎಂದು ವೈದ್ಯರು ಉಲ್ಲೇಖಿಸಿದ್ದಾರೆ, ಏಕೆಂದರೆ ಅಧಿಕ ತೂಕವು ಶ್ವಾಸಕೋಶದ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ ಮತ್ತು ಡಯಾಫ್ರಾಮ್ನ ಮೇಲೆ ಹೆಚ್ಚು ಒತ್ತಡ ಬೀರುತ್ತದೆ, ಶ್ವಾಸಕೋಶಕ್ಕೆ ಸಂಬಂಧಿಸಿದ ಸಮಸ್ಯೆಗಳ ಅಪಾಯವನ್ನು ಹೆಚ್ಚಿಸುತ್ತದೆ. ಮನೆಯಲ್ಲಿ ರಾಸಾಯನಿಕಗಳ ಬಳಕೆ, ಕಡಿಮೆ ಗಾಳಿಯಿರುವ ಮನೆಯ ಒಳಾಂಗಣ ಕೆಲಸದ ಸ್ಥಳದಲ್ಲಿ ಹಾನಿಕಾರಕ ಪದಾರ್ಥಗಳಿಗೆ ಒಡ್ಡಿಕೊಳ್ಳುವುದು ಮತ್ತು ಆನುವಂಶಿಕ ಪ್ರವೃತ್ತಿಯು ಕೂಡ ಪ್ರಮುಖ ಕಾರಣಗಳಾಗಿವೆ. ಗಣಿಗಾರಿಕೆ, ನಿರ್ಮಾಣ ಮತ್ತು ಉತ್ಪಾದನೆಯಂತಹ ಕೆಲಸಗಳು ಶ್ವಾಸಕೋಶದ ಆರೋಗ್ಯಕ್ಕೆ ಹಾನಿ ಮಾಡುವ ಹಾನಿಕಾರಕ ಪದಾರ್ಥಗಳಿಗೆ ಕಾರ್ಮಿಕರನ್ನು ಒಡ್ಡುತ್ತವೆ ಎಂದು ಆಸ್ಟರ್ ಆಖಿಖ ಆಸ್ಪತ್ರೆಯ ಇಂಟರ್ವೆನ್ಷನಲ್ ಪಲ್ಮನಾಲಜಿಯ ಪ್ರಮುಖ ಸಲಹೆಗಾರರಾದ ಡಾ ಸುನಿಲ್ ಕುಮಾರ್ ಕೆ ತಿಳಿಸಿದ್ದಾರೆ.

ಹದಿಹರೆಯದವರು ವ್ಯಾಪಿಂಗ್ (ಹೊಗೆ ಮೂಲಕ ಒಂದು ರೀತಿಯ ಡ್ರಗ್ ಸೇವನೆ) ಶ್ವಾಸಕೋಶದ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುತ್ತದೆ ಎಂದು ಡಾ ಕುಮಾರ್ ಉಲ್ಲೇಖಿಸಿದ್ದಾರೆ. "ಜಡ ಜೀವನಶೈಲಿ ಮತ್ತು ಸಂಸ್ಕರಿಸಿದ ಆಹಾರಗಳು, ಉಪ್ಪು ಮತ್ತು ಕೊಬ್ಬು ಸಮೃದ್ಧವಾಗಿರುವ ಅನಾರೋಗ್ಯಕರ ಆಹಾರವು ಶ್ವಾಸಕೋಶದ ಕಾರ್ಯವನ್ನು ಇನ್ನಷ್ಟು ದುರ್ಬಲಗೊಳಿಸುತ್ತದೆ" ಎಂದು ಅವರು ಹೇಳಿದರು.

ಗ್ಲೆನೆಗಲ್ಸ್ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್, ಇಂಟರ್ವೆನ್ಷನಲ್ ಪಲ್ಮನಾಲಜಿಸ್ಟ್ ಡಾ ಮಂಜುನಾಥ್ ಪಿಎಚ್ ಮಾತನಾಡಿ, ವಾಯು ಮಾಲಿನ್ಯಕ್ಕೆ ದೀರ್ಘಕಾಲ ಒಡ್ಡಿಕೊಳ್ಳುವುದು ಮತ್ತು ರಾಸಾಯನಿಕ ಹೊಗೆಯಂತಹ ಔದ್ಯೋಗಿಕ ಅಪಾಯಗಳು ಈ ರೋಗಗಳಿಗೆ ಕೊಡುಗೆ ನೀಡುತ್ತವೆ ಎಂದು ಹೇಳಿದರು. ಈ ಮಾಲಿನ್ಯಕಾರಕಗಳು ಶ್ವಾಸಕೋಶದ ಕಿರಿಕಿರಿಯನ್ನು ಉಂಟುಮಾಡಬಹುದು, ಇದರ ಪರಿಣಾಮವಾಗಿ ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ (ಅಔಕಆ), ಆಸ್ತಮಾ ಮತ್ತು ಶ್ವಾಸಕೋಶದ ಕ್ಯಾನ್ಸರ್ಗಳಂತಹ ಪರಿಸ್ಥಿತಿಗಳು ಉಂಟಾಗಬಹುದು. ಜೆನೆಟಿಕ್ಸ್ ಕೂಡ ಶ್ವಾಸಕೋಶದ ಕಾಯಿಲೆಗಳಿಗೆ ಒಳಗಾಗುವಿಕೆಯ ಮೇಲೆ ಪ್ರಭಾವ ಬೀರಬಹುದು.ಗ್ಲೆನೆಗಲ್ಸ್ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್, ಇಂಟರ್ವೆನ್ಷನಲ್ ಪಲ್ಮನಾಲಜಿಸ್ಟ್ ಡಾ ಮಂಜುನಾಥ್ ಪಿಎಚ್ ಮಾತನಾಡಿ, ವಾಯು ಮಾಲಿನ್ಯಕ್ಕೆ ದೀರ್ಘಕಾಲ ಒಡ್ಡಿಕೊಳ್ಳುವುದು ಮತ್ತು ರಾಸಾಯನಿಕ ಹೊಗೆಯಂತಹ ಔದ್ಯೋಗಿಕ ಅಪಾಯಗಳು ಈ ರೋಗಗಳಿಗೆ ಕೊಡುಗೆ ನೀಡುತ್ತವೆ ಎಂದು ಹೇಳಿದರು. ಈ ಮಾಲಿನ್ಯಕಾರಕಗಳು ಶ್ವಾಸಕೋಶದ ಕಿರಿಕಿರಿಯನ್ನು ಉಂಟುಮಾಡಬಹುದು, ಇದರ ಪರಿಣಾಮವಾಗಿ ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ (ಅಔಕಆ), ಆಸ್ತಮಾ ಮತ್ತು ಶ್ವಾಸಕೋಶದ ಕ್ಯಾನ್ಸರ್ಗಳಂತಹ ಪರಿಸ್ಥಿತಿಗಳು ಉಂಟಾಗಬಹುದು. ಜೆನೆಟಿಕ್ಸ್ ಕೂಡ ಶ್ವಾಸಕೋಶದ ಕಾಯಿಲೆಗಳಿಗೆ ಒಳಗಾಗುವಿಕೆಯ ಮೇಲೆ ಪ್ರಭಾವ ಬೀರಬಹುದು.

ಧೂಮಪಾನವನ್ನು ತ್ಯಜಿಸುವುದು, ಅಪಾಯಕಾರಿ ಕೆಲಸದ ವಾತಾವರಣದಲ್ಲಿ ರಕ್ಷಣಾ ಸಾಧನಗಳನ್ನು ಬಳಸುವುದು ಮತ್ತು ಶ್ವಾಸಕೋಶದ ಆರೋಗ್ಯವನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡುವುದರಿಂದ ಶ್ವಾಸಕೋಶದ ಕಾಯಿಲೆ ಮತ್ತು ಕ್ಯಾನ್ಸರ್ ಕಡಿಮೆ ಮಾಡಬಹುದಾಗಿದೆ ಎಂದು ಡಾ ಮಂಜುನಾಥ್ ಹೇಳಿದರು. ನಿರಂತರ ಕೆಮ್ಮು, ಉಸಿರಾಟದ ತೊಂದರೆ, ಎದೆನೋವು, ಹಠಾತ್ ತೂಕ ನಷ್ಟ, ಅತಿಯಾದ ಆಯಾಸ ಮತ್ತು ಆಗಾಗ್ಗೆ ಅನಾರೋಗ್ಯದಂತಹ ರೋಗಲಕ್ಷಣಗಳಿಗೆ ಗಮನ ಕೊಡುವುದು ಬಹಳ ಮುಖ್ಯ ಎಂದು ತಜ್ಞರು ಹೇಳುತ್ತಾರೆ.

## ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು



ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿವೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು ವಾಸಿಮಾಡಲು ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳು ಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

## ಬಿಸಿಲ ಝಳಕ್ಕೆ ಬಾಡದಿರಲಿ ನಯನಗಳು

ಬೇಸಿಗೆ ಕಾಲ ಬಂತೆಂದರೆ ಸಾಕು ಹಲವು ರೋಗಗಳು ಬೆಂಬಿಡದೆ ಕಾಡುತ್ತವೆ. ಅವುಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ನಾವು ಕಣ್ಣಿನ ಆರೈಕೆಯನ್ನೇ ಮರೆತುಬಿಡುತ್ತೇವೆ. ಬೇಸಿಗೆಯ ಬಿಸಿಲ ಗಾಳಿ ಕಣ್ಣಿಗೆ ಹಲವು ರೀತಿಯ ಸಮಸ್ಯೆಗಳು ಎದುರಾಗುತ್ತವೆ. ಸುಡು ಬಿಸಿಲಿಗೆ ಕಣ್ಣುಗಳು ತೇವಾಂಶವನ್ನು ಕಳೆದುಕೊಂಡು ಮದ್ರಾಸ್ ಐ, ಕಾಮಾಲೆ, ಕಣ್ಣಿನಲ್ಲಿ ನವೆ, ಅಲರ್ಜಿ, ಕಣ್ಣಿನಲ್ಲಿ ಆಗಾಗ ನೀರು ಸುರಿಯುತ್ತಲೇ ಇರುವುದು, ಕಿರಿಕಿರಿ ಅನುಭವ ಇಲ್ಲವೇ ಕಣ್ಣಿನೊಳಗೆ ಚುಚ್ಚಿದಂತಾಗುವುದು...ಹೀಗೆ ಹಲವು ರೀತಿಯ ಕಣ್ಣಿನ ಸಮಸ್ಯೆಗಳು ಎದುರಾಗುತ್ತವೆ. ಇಂತಹ ಸಂದರ್ಭಗಳಲ್ಲಿ ಕಣ್ಣಿನ ಆರೈಕೆ ಮಾಡುವುದು ಅತ್ಯವಶ್ಯಕ.ಸನ್ಗ್ಲಾಸ್ ಬಳಕೆ ಮಾಡಿಸುಡು ಬಿಸಿಲಿನಲ್ಲಿ ಮನೆಯಿಂದ ಹೊರಗೆ ಬರುವ ಅಗತ್ಯ ಬಂದಾಗಲೆಲ್ಲಾ ಸನ್ಗ್ಲಾಸ್ ಬಳಕೆ ಮಾಡಿ. ಬೈಕ್, ಕಾರು ಅಥವಾ ಇನ್ಯಾವುದೇ ವಾಹನಗಳನ್ನು ಚಾಲನೆ ಮಾಡುವ ವೇಳೆಯೂ ಸನ್ಗ್ಲಾಸ್ ಬಳಕೆ ಮಾಡುವುದರಿಂದ ಧೂಳಿನ ಕಣಗಳು ಅಥವಾ ಬಿಸಿಗಾಳಿ ಕಣ್ಣುಗಳನ್ನು ಸೇರದಂತೆ ತಡೆಯುತ್ತದೆ. ಬೈಕ್ ಸವಾರರು ಆದಷ್ಟು ಮುಚ್ಚಿರುವ ಹೆಲ್ಮೆಟ್ಗಳನ್ನು ಬಳಸುವುದು ಉತ್ತಮ.ಶೇ.100ರಷ್ಟು ಗಗಿ ರಕ್ಷಣೆಯನ್ನು ಒದಗಿಸುವ ಗುಣಮಟ್ಟದ ಸನ್ಗ್ಲಾಸ್ ನ್ನು ಖರೀದಿ ಮಾಡಿ. ಯುವಿ ಕಿರಣಗಳು ನಿಮ್ಮ ಕಣ್ಣುಗಳಿಗೆ ಹಾನಿಯನ್ನು ಉಂಟುಮಾಡಬಹುದು, ಇದು ಕಣ್ಣಿನ ಪೊರೆ ಮತ್ತು ಮ್ಯಾಕ್ಯುಲರ್ ಡಿಜೆನರೇಶನ್ನಂತಹ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಹೀಗಾಗಿ ಗಗಿಂ ಮತ್ತು ಗಗಿಃ ಕಿರಣಗಳನ್ನು ನಿರ್ಬಂಧಿಸುವಂತೆ ಸನ್ಗ್ಲಾಸ್ಗಳನ್ನು ಖರೀದಿಸಿ.ರಕ್ಷಣಾತ್ಮಕ ಕನ್ನಡಕಗಳನ್ನು ಬಳಸಿಸ್ವಿಮ್ಮಿಂಗ್, ಕ್ರೀಡೆ ಅಥವಾ ಹೊರಾಂಗಣದ ಕೆಲಸ ಮಾಡುವಾಗ ಪ್ರೊಟೆಕ್ಟಿವ ಸನ್ ಗ್ಲಾಸ್ ಗಳನ್ನು ಬಳಕೆ ಮಾಡಿ. ಈ ಕನ್ನಡಕಗಳು ನಿಮ್ಮ ಕಣ್ಣುಗಳಿಗೆ ಧೂಳು, ರಾಸಾಯನಿಕ ಮತ್ತು ಇತರೆ ಹಾನಿಕಾರಕ ವಸ್ತುಗಳಿಂದ ರಕ್ಷಣೆ ಮಾಡುತ್ತವೆ.ಕಣ್ಣಿನ ಅಲರ್ಜಿಗಳ ಬಗ್ಗೆ ಜಾಗರೂಕರಾಗಿರಿಅಲರ್ಜಿಕ್ ಕಾಂಜಂಕ್ಟಿವಿಟಿಸ್ ಬಗ್ಗೆ ಕಾಳಜಿ ಇರಲಿ, ಸಾಮಾನ್ಯವಾಗಿ ಬೇಸಿಗೆಯಲ್ಲಿ ಈ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಕಣ್ಣು ಕೆಂಪಾಗುವುದು, ತುರಿಕೆ ಲಕ್ಷಣಗಳು ಕಂಡು ಬರುತ್ತವೆ.

## ಥೈರಾಯ್ಡ್ ನಿರ್ವಹಿಸಲು ಆಹಾರಕ್ರಮ ಪಾಲನೆ ನಿರ್ಣಾಯಕ

ಥೈರಾಯ್ಡ್.. ಇದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕೇಳುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ಒಂದು. ಅದರಲ್ಲೂ ಪುರಷರಿಗಿಂತ ಮಹಿಳೆಯರಲ್ಲೇ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ.ಥೈರಾಯ್ಡ್ ಕುತ್ತಿಗೆ ಭಾಗದಲ್ಲಿ ಚಿಟ್ಟೆಯಾಕಾರ ಗ್ರಂಥಿಯಾಗಿದ್ದು, ಇದು ಟಿ–3 ಹಾಗೂ ಟಿ–4 ಹಾರ್ಮೋನ್ಗಳನ್ನು ಉತ್ಪತ್ತಿಸುತ್ತವೆ. ಇದು ಪಿಟ್ಯುಟರಿ ಗ್ರಂಥಿಯಿಂದ ಸ್ರವಿಸುವ ಥೈರಾಯ್ಡ್ ಆಗಿದ್ದು, ಟಿಎಸ್ಎಚ್ ಹಾರ್ಮೋನ್ ಉತ್ಪದಿಸಲಿದ್ದು, ದೇಹದ ಪಚನ ಕ್ರಿಯೆಯನ್ನು ನಿಯಂತ್ರಿಸುತ್ತದೆ. ಥೈರಾಯ್ಡ್ನಲ್ಲಿ ಹೈಪೋ ಥೈರಾಯ್ಡ್ ಮಹಿಳೆಯರಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತದೆ. ಇದು ತೂಕ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದು ಅತ್ಯಂತ ಅಪಾಯಕಾರಿ ಕೂಡ ಹೌದು. ಹೈಪೋ ಥೈರಾಯ್ಡಿನಿಂದ ಪಚನ ಕ್ರಿಯೆ ಸಂಪೂರ್ಣ ನಿಧಾನವಾಗುವುದರಿಂದ ದೇಹದಲ್ಲಿ ತೂಕ ಹೆಚ್ಚಳವಾಗುತ್ತದೆ. ಇದು ಕೂದಲು ಉದುರುವಿಕೆ, ರಕ್ತದೊತ್ತಡ ಹೆಚ್ಚಳ, ಸಕ್ಕರೆ ಕಾಯಿಲೆ ಇತ್ಯಾದಿ ರೋಗಕ್ಕೆ ಕಾರಣವಾಗಬಹುದು. ಹೀಗಾಗಿ ಥೈರಾಯ್ಡ್ನ ಲಕ್ಷಣ ಕಂಡು ಬಂದ ಕೂಡಲೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆದುಕೊಳ್ಳಬೇಕು.ಥೈರಾಯ್ಡ್ ಹೊಂದಿರುವವರು ಆಹಾರ ಸೇವನೆಯಲ್ಲಿ ಹೆಚ್ಚು ಗಮನ ವಹಿಸಬೇಕು. ಥೈರಾಯ್ಡ್ ನಿರ್ವಹಣೆಯಲ್ಲಿ ಆಹಾರ ಕ್ರಮ ನಿರ್ಣಾಯಕವಾಗಿದೆ. ಈ ಆಹಾರ ಕ್ರಮದಿಂದ ಥೈರಾಯ್ಡ್ ಸಮಸ್ಯೆ ಗುಣಪಡಿಸಲು ಸಾಧ್ಯವಾಗುವುದಿಲ್ಲ.

### ಆನಗೋಡು ಮರುಳು ಸಿದ್ಧೇಶ್ವರ ಸ್ವಾಮಿ ರಥೋತ್ಸವದಲ್ಲಿ ಶ್ರೀಗಳು

# ಸಿರಿಗೆರೆ ಮಠದ ಭಕ್ತರಿಗೆ ಅದ್ಬುತ ಶಕ್ತಿ: ತರಳಬಾಳು ಶ್ರೀ

**ಮಾಯಕೊಂಡ:** 'ಸಿರಿಗೆರೆ ಮಠದ ಭಕ್ತರಿಗೆ ಮರುಳುಸಿದ್ದರಂತೆ ಕಠಿಣ ಸವಾಲನ್ನು ಎದುರಿಸುವ ಅದ್ಬುತ ಶಕ್ತಿ ಇದೆ, ಎಂದು ತರಳಬಾಳು ಜಗದ್ಗುರು ಡಾ..ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಪ್ರತಿಪಾದಿಸಿದರು.

ಕಷ್ಟಕೊಡುವುದು, ದ್ವೇಷಿಸುಬುದು ಮನುಷ್ಯನ ಸ್ವಭಾವ. ಮರುಳುಸಿದ್ದರೂ ಹಲವು ಕಷ್ಟ ಅನುಭವಿಸಿದ್ದರು. ಅವರನ್ನು ಆನೆಯಿಂದ ತುಳಿದು ಸಾಯಿಸುವ ಹುನ್ನಾರ ನಡೆದರೂ.ಮರುಳುಸಿದ್ದರು ಅದರ ಕೋಡನ್ನೇ ಮುರಿದರು. ಹಾಗೆಯೇ ಮಠದ ಭಕ್ತರಿಗೆ ಆನೆಯ ಕೊಂಬಿನಂಥ ಕಷ್ಟವನ್ನು ಬಗ್ಗಿಸುವ ಅದ್ಬುತ ಶಕ್ತಿಯಿದೆ. ಮರುಳುಸಿದ್ದರಿಗೆ ರಾಜಾಶ್ರಯ ಇಲ್ಲದಿದ್ದರೂ ಜನಬಲವಿತ್ತು ಎಂದರು.

ಮನುಷ್ಯನೇ ದ್ವೇಷ ಮಾಡುತ್ತಾನೆ ವಿನಾ ಪ್ರಾಣಿಗಳಲ್ಲ. ಮನುಷ್ಯನ ದ್ವೇಷಕ್ಕೇ ಮಿತಿಯಿಲ್ಲ.

ಬಸವಣ್ಣನ ವಚನಗಳು ಪ್ರಪಂಚಾದ್ಯಂತ ಹರಡುವ ಹಿರಿಯ ಗುರುಗಳ ಬಹುದೊಡ್ಡ ಆಸೆಯನ್ನು ಈಡೇರಿಸಲು ವಚನಗಳನ್ನು ಆನ್ ಲೈನ್ನಲ್ಲಿ ಅಳವಡಿಸಿದ್ದೇವೆ. ಪುಸ್ತಕ ಓದುವ ಹವ್ಯಾಸವಿಲ್ಲದವರೂ ಮೊಬೈಲ್ ನಲ್ಲಿ ವಚನ ಸಾಹಿತ್ಯ ಓದಬಹುದು.

22 ಕೆರೆ ಏತ ನೀರಾವರಿ ಸಮರ್ಪಕವಾಗಿಲ್ಲದ ಕಾರಣ, ಕೆಲವು ಕಡೆ ತೊಂದರೆಯಾಗಿದೆ. ಯಾವುದೇ ಹಳ್ಳಿಗಳಿಗೆ ಹೋದರೆ ದಾವಣಗೆರೆಗೆ ಬಂದಿದ್ದೇವೆ ಎಂಬ ಭಾವನೆ ಬರುವಂತೆ ಸುಸಜ್ಜಿತ ಮನೆಗಳಿವೆ. ರೈತರ ಬದುಕಿನಲ್ಲಿ ಭರವಸೆ ಬಂದಿದೆ. ರೈತರ ಕಷ್ಟಕ್ಕೆ ಜನಪ್ರತಿನಿಧಿಗಳು ಸ್ಪಂದಿಸಲಿ ಎಂದರು.



ಇಲ್ಲಿನ ಪಿಯು ಕಾಲೇಜು ಕಟ್ಟಡ ಹಾಳಾಗಿತ್ತು, ಆರು ಕೋಟಿ ವೆಚ್ಚದಲ್ಲಿ ಕಾಲೇಜು ನಿರ್ಮಿಸಲಾಗುತ್ತಿದೆ. ಹಿರಿಯ ಗುರುಗಳು ವಿದ್ಯೆಗೆ ಬೆಲೆಕೊಟ್ಟವರು ಹಾಗಾಗಿ ಕಾಲೇಜು ಕಟ್ಟಿದೆ. ಜನ ಸಂಘಟಿತರಾಗಿ ದೇವಸ್ಥಾನ ನಿರ್ಮಾಣ ಮಾಡಬೇಕು. ಭಕ್ತರು ವೈಯಕ್ತಿಕ ಕಾರ್ಯಕ್ರಮಕ್ಕೆ ಆಹ್ವಾನಿಸದಿದ್ದರೆ ಸಮಾಜದ ಕೆಲಸ ಮಾಡಲು ಅನುಕೂಲವಾಗುತ್ತದೆ. ನಮ್ಮ ಸತತ ಪ್ರಯತ್ನದಿಂದ ಮಠದ ಆಸ್ತಿಪಾಸ್ತಿ ಉಳಿದಿರುವುದು ಮಠಕ್ಕೆ ಹತ್ತಿರದವರಿಗೆ ಗೊತ್ತಿದೆ ಎಂದರು.



ಸಾಧು ಸದ್ಧರ್ಮ ಸಮಾಜದ ತಾಲ್ಲೂಕು ಅಧ್ಯಕ್ಷ ಎಚ್.ಡಿ. ಮಹೇಶ್ವರಪ್ಪ ದಿನೇದಿನೇ ರಥೋತ್ಸವಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚಿದೆ. ಆನಗೋಡಿನಲ್ಲಿ ನಿರ್ಮಾಣವಾಗುತ್ತಿರುವ ದೇವಾಲಯ ನಿರ್ಮಾಣಕ್ಕೆ ಧನಸಹಾಯ ಮಾಡಬೇಕು ಎಂದು ಮನವಿ ಮಾಡಿದರು ತಾವು ಇಲ್ಲಿಯವರೆಗೆ ಸಂಗ್ರಹಿಸಿದ ಹಣ ದೇವಸ್ಥಾನ ಕಮಿಟಿಗೆ ರೂ. 12,12,120 ವನ್ನು ದೇವಸ್ಥಾನ ಕಮಿಟಿಗೆ ನೀಡಿದರು.

ಸಮಾಜದ ರಾಜ್ಯಾಧ್ಯಕ್ಷ, ಎಚ್.ಆರ್. ಬಸವರಾಜಪ್ಪ, ಬಸವಾದಿ ಶರಣರ ಆಶಯದಂತೆ ಮಠ ಕೆಲಸ ಮಾಡುತ್ತಿದೆ. ಶೋಷಿತರ, ದಲಿತರ ಬದುಕು ಹಸನು ಮಾಡಲು ಮರುಳುಸಿದ್ದರು ಶ್ರಮಿಸಿದಂತೆ ಇಂದಿಗೂ ಶ್ರೀಗಳು ಶ್ರಮಿಸುತ್ತಿದ್ದಾರೆ.

ಶ್ರೀಗಳು ಕನ್ನಡದಿಂದ ವಚನಗಳನ್ನು ಹಿಂದಿ, ತೆಲಗು ಮತ್ತು ತಮಿಳಿಗೆ ಅನುವಾದಿಸಿ ಮಹತ್ಕಾರ್ಯ ಮಾಡಿದ್ದಾರೆ. ಕೆರೆ ಏತ ನೀರಾವರಿ ಮಾಡಿ, ಆನ್ ಲೈನ್ ಪರಿಹಾರ ದೊರಕಿಸಿ ರೈತರಿಗೆ ನೆರವಾಗಿದ್ದಾರೆ. ಶ್ರೀಮಠ ಜಾತ್ಯತೀತವಾಗಿ ಎಲ್ಲರಿಗೂ ನೆರವಾಗಿದೆ ಎಂದು ಶ್ಲಾಘಿಸಿದರು.

ಆನಗೋಡು ಸುತ್ತಮುತ್ತಲಿನ ಹಲವು ಹಳ್ಳಿಗಳ ಸಾವಿರಾರು ಭಕ್ತರು ಆಗಮಿಸಿದ್ದರು. ಭಕ್ತರು ಉತ್ಸಾಹದಿಂದ ತೇರು ಎಳೆದು ಸಂಭ್ರಮಿಸಿಸರು.

# ಅನುಪಯುಕ್ತ ಮಣ್ಣು ಕೃಷಿಭೂಮಿ, ರಸ್ತೆ ಸುರಿದು ಅಡ್ಡಿ : ಕ್ರಮಕ್ಕೆ ಒತ್ತಾಯ

**ಚಿಕ್ಕಮಗಳೂರು:** ಕೃಷಿ ಭೂಮಿ ಹಾಗೂ ರಸ್ತೆ ಮೇಲೆ ಸುರಿದಿರುವ ಅನುಪಯುಕ್ತ ಮಣ್ಣನ್ನು ತೆರವುಗೊಳಿಸಿ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಡಬೇಕು ಎಂದು ಅಂಬಳೆ, ಗೌಡನಹಳ್ಳಿ ಗ್ರಾಮಸ್ಥರು ಪ್ರಗತಿಪರ ಮುಖಂಡರುಗಳು ನೇತೃತ್ವದಲ್ಲಿ ಇಂದು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗೌಡನಹಳ್ಳಿ ಗ್ರಾಮಸ್ಥ ಹೇಮಂತ್ ತಾಲ್ಲೂಕಿನ ಅಂಬಳೆ ಮತ್ತು ಇಂಡಸ್ಟ್ರೀಯಲ್ ಮುಖಾಂತರ ಗೌಡನಹಳ್ಳಿಗೆ ಸಂಪರ್ಕ ರಸ್ತೆಯನ್ನು ಕಡಿತಗೊಳಿಸಿ ಅಭಿವೃದಿ ಪ್ರದೇಶದ ಅನುಪಯುಕ್ತ ಮಣ್ಣನ್ನು ರಸ್ತೆ, ಚರಂಡಿ, ರೈತರ ಭೂಮಿಗೆ ಹಾಕಲಾಗುತ್ತಿದೆ ಎಂದು ದೂರಿದರು.

ಅಂಬಳೆ ಮತ್ತು ಗೌಡನಹಳ್ಳಿ ಕೈಗಾರಿಕಾ ಪ್ರದೇಶದ ಮುಖಾಂತರ ಅಂಬಳೆ ಮುಖ್ಯ ರಸ್ತೆಯಿಂದ ಕೈಗಾರಿಕಾ ಪ್ರದೇಶದ ಗೌಡನಹಳ್ಳಿ



ಸಂಪರ್ಕ ರಸ್ತೆ ಸುಮಾರು 75 ವರ್ಷಗಳಿಂದೆಯೇ ನಿರ್ಮಿಸಲಾಗಿದ್ದು, ಈ ಮಾರ್ಗವಾಗಿ ಗ್ರಾಮಸ್ಥರು, ವಿದ್ಯಾರ್ಥಿಗಳು, ವಾಹನ ಸಂಚಾರ ವ್ಯವಸ್ಥೆಗಾಗಿ 30 ಅಡಿ ರಸ್ತೆ, ಚರಂಡಿ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದರು.

ಈ ರಸ್ತೆ ಪ್ರದೇಶದಲ್ಲಿ ಗೌಡನಹಳ್ಳಿ, ಅಂಬಳೆ ಗ್ರಾಮಸ್ಥರ ಕೃಷಿ ಭೂಮಿಯಿದೆ. ಈ ಮಾರ್ಗದಿಂದ ಕೈಗಾರಿಕಾ ಪ್ರದೇಶಕ್ಕೆ ಕಾರ್ಮಿಕರು ಸಂಚಾರ ಮಾಡುತ್ತಿರುವುದು ಅನುಕೂಲವಾಗಿದೆ. ಆದರೆ ಕೈಗಾರಿಕಾ ವಿಸ್ತೃತ ಭೂಪ್ರದೇಶದಲ್ಲಿ ಅಭಿವೃದ್ಧಿಪಡಿಸಿದ ಭೂಮಿಯ ಅನುಪಯುಕ್ತ ಮಣ್ಣನ್ನು ಎರಡು ಗ್ರಾಮಸ್ಥರ ಕೃಷಿ, ಭೂಮಿ ಮತ್ತು ರಸ್ತೆಗೆ ಹಾಕಿ ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಕೂಡಲೇ ಜಿಲ್ಲಾಡಳಿತ ಸ್ಥಳಕ್ಕೇ ಖುದ್ದು ಭೇಟಿ ನೀಡಿ, ಸ್ಥಳ ಪರಿಶೀಲನೆ ನಡೆಸಬೇಕು. ಕೃಷಿ ಭೂಮಿ ಮತ್ತು ರಸ್ತೆಗೆ ಅನಧಿಕೃತವಾಗಿ ಸುರಿದಿರುವ ಅನುಪಯುಕ್ತ ಮಣ್ಣನ್ನು ತೆರವುಗೊಳಿಸಿ ಗ್ರಾಮಸ್ಥರು ಸಂಚರಿಸಲು ಹಾಗೂ ಕೃಷಿ ಚಟುವಟಿಕೆಗೆ ಅಡ್ಡಿಯಾಗದಂತೆ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ರಮೇಶ್, ದೇವರಾಜ್, ನಾರಾಯಣ್, ಪ್ರತಾಪ್, ಹರೀಶ್, ನಿಂಗರಾಜು, ನಾಗೇಶ್, ಮುಖಂಡರುಗಳಾದ ಭೀಮಯ್ಯ, ಶ್ರೀನಿವಾಸ್, ಮಾಗಡಿ ಮಂಜುನಾಥ್, ರಾಕೇಶ್, ರಘು, ಮಂಜು, ಮಂಜುನಾಥ್ ಮತ್ತಿತರರು ಉಪಸ್ಥಿತರಿದ್ದರು.

# ಲೈಂಗಿಕ ಕಿರುಕುಳ: ಪ್ರಾಂಶುಪಾಲರ ವಿರುದ್ಧ ಕ್ರಮಕ್ಕೆ ಆಗ್ರಹ



**ಚಿಕ್ಕಮಗಳೂರು:** ಆಲ್ದೂರು ಮುರಾರ್ಜಿ ವಸತಿ ಶಾಲೆಯಲ್ಲಿ ವಾರ್ಡನ್ ಆಗಿ ಸೇವೆ ಸಲ್ಲಿಸುತ್ತಿರುವ ವೀಣಾ ಎಂಬುವವರಿಗೆ ಲೈಂಗಿಕ ಕಿರುಕುಳ ನೀಡಿ, ಅಸಭ್ಯ ವರ್ತನೆ ತೋರಿದ ಪ್ರಾಂಶುಪಾಲ ಮಧುಸೂಧನ್ ಎಂಬುವವರರನ್ನು ಅಮಾನತು ಮಾಡಿ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾ ಪಂಚಾಯಿತಿ ಎದುರು ಅಹೋರಾತ್ರಿ ಧರಣಿ ನಡೆಸುವುದಾಗಿ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯ ಸಮಿತಿ ಸದಸ್ಯ ಮರ್ಲೆ ಅಣ್ಣಯ್ಯ ಎಚ್ಚರಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಏ.5 ರಂದು ಮಹಿಳಾ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಅಟ್ರಾಸಿಟಿ, ಮಹಿಳಾ ದೌರ್ಜನ್ಯ ಪ್ರಕರಣ ದಾಖಲಾಗಿದ್ದು, ಎಂಬಾತ ಇದೇ ರೀತಿ ಹಿಂದೆ ನಂದಿಬಟ್ಟಲು ಮುರಾರ್ಜಿ ಶಾಲೆಯಲ್ಲಿ ವರ್ಗಾವಣೆ ಮಾಡಿಕೊಂಡು ಬಂದಿದ್ದಾರೆ ಎಂದು ದೂರಿದರು.

ದಸಂಸ ಅಂಬೇಡ್ಕರ್ ವಾದ ಸಮಿತಿ ಸದಸ್ಯರು ಅರ್ಪಿತಾ ಎಂಬ ಮಹಿಳೆಗೆ ಅನ್ಯಾಯವಾಗಿರುವ ಬಗ್ಗೆ ಪ್ರಶ್ನಿಸಲು ಹೋದಾಗ ಬೀಕನಹಳ್ಳಿಯ ಮುರಾರ್ಜಿ ಶಾಲೆ ಪ್ರಾಂಶುಪಾಲ ಮಧುಸೂಧನ್ ಅವರು ನಮ್ಮ ಮೇಲೆ ದೌರ್ಜನ್ಯ ಮಾಡಿ, ಅರ್ಪಿತಾಳಿಗೆ ಜಾತಿ ನಿಂದಿಸಿ, ರೌಡಿಗಳು ಎಂಬ ಹಣೆಪಟ್ಟಿ ಕಟ್ಟಿದ್ದರು ಎಂದು ಆರೋಪಿಸಿದರು.

ನಮ್ಮ ಹೋರಾಟದ ಫಲವಾಗಿ ಈ ಪ್ರಾಂಶುಪಾಲರನ್ನು ಬೇರೆಡೆಗೆ ವರ್ಗಾವಣೆ ಮಾಡಿದ್ದರು. ರಾಜಕೀಯ ಪ್ರಭಾವ ಬಳಸಿ, ಪುನಃ ಆಲ್ದೂರು ಮುರಾರ್ಜಿ ಶಾಲೆಯ ಪ್ರಾಂಶುಪಾಲರಾಗಿ ಕೆಲಸ ಮಾಡುತ್ತಿದ್ದು, ಮಧುಸೂಧನ್ ಎಂಬುವವರು ಮಹಿಳಾ ವಾರ್ಡನ್ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಕಿರುಕುಳ ನೀಡುತ್ತಿದ್ದಾರೆ ಎಂದು ದೂರಿದರು.

ಈ ಸಂಬಂಧ ಸಹ ಶಿಕ್ಷಕ ವಿಜಯ್ ಕುಮಾರ್ ಸಂಘಟನೆ ಮುಖಂಡರಾದ ಸಂತೋಷ್ ರವರನ್ನು ಪೋಷಕರ ಸಭೆಯಲ್ಲಿ ಜಾತಿ ನಿಂದನೆ ಮಾಡಿ, ಅವಾಚ್ಯ ಶಬ್ಧಗಳಿಂದ ನಿಂದಿಸಿದ ಹಿನ್ನೆಲೆಯಲ್ಲಿ ಈತನ ವಿರುದ್ಧ ಜಾತಿ ನಿಂದನೆ ದೂರು ದಾಖಲಾಗಿದ್ದರೂ ಪೊಲೀಸರು, ಬಂಧಿಸಿಲ್ಲ ಎಂದು ಟೀಕಿಸಿದರು.

ಇಷ್ಟೆಲ್ಲಾ ದೂರುಗಳಿದ್ದರೂ ಸಂಘಟನೆ ಮುಖಂಡರು ಮುರಾರ್ಜಿ ಶಾಲೆಗೆ ಭೇಟಿ ನೀಡಿರುವುದಿಲ್ಲ, ಆದರೂ ಇಲ್ಲಸಲ್ಲದ ಆರೋಪ ಮಾಡಿ, ಸಂಘಟನೆ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಕೂಡಲೇ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಸಮಗ್ರ ತನಿಖೆ ನಡೆಸಿ, ಸಹ ಶಿಕ್ಷಕರು ಹಾಗೂ ಪ್ರಾಂಶುಪಾಲರನ್ನು ಅಮಾನತು ಮಾಡಿ, ನೊಂದ ಮಹಿಳಾ ವಾರ್ಡನ್‌ಗೆ ನ್ಯಾಯ ದೊರಕಿಸಬೇಕು, ಇಲ್ಲದಿದ್ದರೆ ಜಿಲ್ಲಾ ಪಂಚಾಯಿತಿ ಎದುರು ಅಹೋರಾತ್ರಿ ಧರಣಿ ನಡೆಸುವುದಾಗಿ ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದಸಂಸ ಒಕ್ಕೂಟದ ಮುಖಂಡರುಗಳಾದ ದಂಟರಮಕ್ಕಿ ಶ್ರೀನಿವಾಸ್, ಮಂಜಯ್ಯ, ಸಂತೋಷ್ ಲಕ್ಯಾ, ರಘು ವಿ.ಎಂ, ಪೂರ್ಣೇಶ್, ಶೇಖರ್, ಸಣ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ಪುಷ್ಟೀಕರಣ ಮತ್ತು ಯುವ ಮನಸ್ಸುಗಳನ್ನು ಬೆಳಗಿಸುವ ಕಾರ್ಯಕ್ರಮ

**ಚಿಕ್ಕಮಗಳೂರು:** ಪುಷ್ಟೀಕರಣ ಚಟುವಟಿಕೆ ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನವನ್ನು ನಿರ್ಮಿಸುವುದಲ್ಲದೆ, ಹೊಸ ಜನರೊಂದಿಗೆ ಸಹಯೋಗದಿಂದ ಕೆಲಸ ಮಾಡುವುದು, ಸಮಸ್ಯೆ ಪರಿಹರಿಸುತ್ತದೆ ಎಂದು ಹಾಸನ ಮಲ್ನಾಡ್ ಇಂಜಿನಿಯರಿಂಗ್ ಕಾಲೇಜು ಉಪನ್ಯಾಸಕಿ ಡಾ.ಗೀತಾ ಕಿರಣ್ ಹೇಳಿದರು.

ನಗರದ ಎಐಟಿ ಕಾಲೇಜಿನಲ್ಲಿ ವಿದ್ಯುತ್ ಮತ್ತು ವಿದ್ಯುನ್ಮಾನ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವಿದ್ಯಾರ್ಥಿ ಪುಷ್ಟೀಕರಣ ಮತ್ತು ಯುವ ಮನಸ್ಸುಗಳನ್ನು ಬೆಳಗಿಸುವ ಕಾರ್ಯಕ್ರಮವನ್ನು ಇಂದು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಗುಂಪುಗಳಾಗಿ ವಿಂಗಡಿಸಿ ವಿಶೇಷ ತರಬೇತಿ ನೀಡಿ, ಆಗು-ಹೋಗುಗಳ ವೈಫಲ್ಯಗಳ ವಿಧ ವಿಧದ ಹಾಗೂ ಶ್ರಮಗಳ



ಬಗ್ಗೆ ಸಾಧನೆ ಹೇಗೆ ಮಾಡಬೇಕು. ಪರಸ್ಪರ ಒಬ್ಬರಿಗೊಬ್ಬರು ಮಾಹಿತಿ ತಂತ್ರಜ್ಞಾನಗಳನ್ನು ಬದಲಾಯಿಸಿ ಅಳವಡಿಸಿಕೊಳ್ಳುವ ಬಗ್ಗೆ ಒಳ್ಳೆಯ ಉದ್ದೇಶ ಹಾಗೂ ಸಾಧನೆಗಳ ಬಗ್ಗೆ ಮಾಹಿತಿ ನೀಡಿ-ದರು.

ಪ್ರಸ್ತುತ ಕಾಲದಲ್ಲಿ ಜನಸಾಮಾನ್ಯರಿಗೆ ಮಾಹಿತಿ ಮುಟ್ಟಿಸುವುದು. ಸಮಾಜದಲ್ಲಿನ ವಿವಿಧ ಸಮಸ್ಯೆಗಳ ಸವಾಲುಗಳನ್ನು ಎದುರಿಸುವ ಮತ್ತು ಅತಿಮುಖ್ಯವಾಗಿ ವಿದ್ಯಾರ್ಥಿಗಳು ಪರೀಕ್ಷಾ ಸಮಯಗಳಲ್ಲಿ ಆತ್ಮಸ್ಥೈರ್ಯದಿಂದ ಎದುರಿಸಲು ಕೆಲವು ಮಾಹಿತಿಗಳನ್ನು ಸಮಗ್ರವಾಗಿ ವಿದ್ಯಾರ್ಥಿಗಳಿಗೆ ಬೋಧಿಸಿದರು.

ವಿದ್ಯಾರ್ಥಿಗಳು ತಮ್ಮ ಆಸಕ್ತಿಗಳನ್ನು ಅನುಸರಿಸಲು, ಹೊಸ ಆಸಕ್ತಿ ಮತ್ತು ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಪ್ರೋತ್ಸಾಹಿಸಲು ಪುಷ್ಟೀಕರಣ ಕಾರ್ಯಕ್ರಮ ಆಯೋಜಿಸಿ ತಿಳಿ ಹೇಳಲಾಗುತ್ತಿದೆ. ವಿದ್ಯಾರ್ಥಿಗಳು ನೀಡಬಹುದಾದ ಚಟುವಟಿಕೆಗಳ ಬಗ್ಗೆ ಯೋಚಿಸಬೇಕು. ವಿಭಿನ್ನ ರೀತಿಯಲ್ಲಿ ಪ್ರಯತ್ನಿಸಬೇಕು ಎಂದು ಕಿವಿಮಾತು ಹೇಳಿದರು.

ಎಐಟಿ ಕಾಲೇಜು ಪ್ರಾಂಶುಪಾಲ ಸಿ.ಟಿ.ಜಯದೇವ್ ಮಾತನಾಡಿ, ವಿದ್ಯುತ್ ಮತ್ತು ವಿದ್ಯುನ್ಮಾನ ವಿದ್ಯಾಭ್ಯಾಸದ ಮಕ್ಕಳ ಪಯಣ ಬಹುಬೇಡಿಕೆಯ ಕ್ಷೇತ್ರವಾಗಿದೆ. ಶಿಸ್ತು, ಸಂಯಮ ಹಾಗೂ ಕಠಿಣ ಪರಿಶ್ರಮದಿಂದ ಅಭ್ಯಾಸಿದರೆ ಯಶಸ್ಸು ಕೈಮುಟ್ಟಿಯಲ್ಲಿದೆ. ಸೋಲುಂಡರೆ ಮತ್ತೊಮ್ಮೆ ಪ್ರಯತ್ನಿಸಬಹುದು. ಆದರೆ ಕೈಗೆ ಬಂದ ಯಶಸ್ಸು ಕೈತಪ್ಪಿಸಬಾರದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಾಸನ ಇಂಜಿನಿಯರ್ ಕಾಲೇಜು ಪ್ರಾಧ್ಯಾಪಕಿ ಡಾ.ಮೋಹನಲಕ್ಷ್ಮೀ, ವಿದ್ಯುತ್ ಮತ್ತು ವಿದ್ಯುನ್ಮಾನ ವಿಭಾಗದ ಮುಖ್ಯಸ್ಥ ಜಿ.ಆರ್.ವೀರೇಂದ್ರ, ಸಂಯೋಜಕರಾದ ಕೆ.ಎಂ.ಕವಿತಾ, ಡಾ.ಪೋಶಿತಾ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಡಾ. ಅಂಬೇಡ್ಕರ್ ಜಯಂತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಬಣ್ಣನೆ

# ಶಿಕ್ಷಣ, ಸಂಘಟನೆ, ಹೋರಾಟ ಮಂತ್ರಗಳು ನವ ಭಾರತ ನಿರ್ಮಾಣಕ್ಕೆ ಮುನ್ನುಡಿಯಾಗಿವೆ

**ಚಿತ್ರದುರ್ಗ:** ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ "ಶಿಕ್ಷಣ-ಸಂಘಟನೆ-ಹೋರಾಟ" ಎಂಬ ಮೂರು ಸಿದ್ಧಾಂತಗಳನ್ನು ನಾವೆಲ್ಲರೂ ಪಾಲಿಸಬೇಕಾದ ಜೀವನದ ಮಂತ್ರವಾಗಿವೆ. ಶಿಕ್ಷಣದಿಂದ ಜ್ಞಾನ, ಹೋರಾಟದಿಂದ ಹಕ್ಕುಗಳು, ಸಂಘಟನೆಯಿಂದ ಶಕ್ತಿ ಪಡೆದುಕೊಳ್ಳುವ ಮಾರ್ಗದಲ್ಲಿ ನಡೆಯುವುದು ನವ ಭಾರತ ನಿರ್ಮಾಣದ ಪ್ರಥಮ ಹೆಜ್ಜೆಯಾಗಿದೆ ಎಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ತ.ರಾ.ಸು. ರಂಗಮಂದಿರದಲ್ಲಿ ಸೋಮವಾರ ಏರ್ಪಡಿಸಲಾದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಅಂಬೇಡ್ಕರ್ ಅವರು ಕೇವಲ ಸಮಾಜಸೇವಕರಲ್ಲ, ಅವರು ಭಾರತದ ಪುನರ್ ನಿರ್ಮಾಣಕ್ಕೆ ಕೊಡುಗೆ ನೀಡಿದ ಮಹಾತ್ಮ. ಶೋಷಿತರಿಗೆ ಧೈರ್ಯ, ಶಿಕ್ಷಣ, ಆತ್ಮಗೌರವ ಮತ್ತು ನ್ಯಾಯದ ಮಾರ್ಗವನ್ನು ತೋರಿದ ದಾರಿದೀಪ. ಅವರ ಜೀವನದ ಪ್ರಮುಖ ಕೊಂಡಿಯಾಗಿದ್ದು ಭಾರತದ ಸಂವಿಧಾನ. ಅವರು ಅಧ್ಯಕ್ಷರಾಗಿದ್ದ ಕರಡು ಸಮಿತಿಯ ಮಾರ್ಗದರ್ಶನದಲ್ಲಿ ರೂಪುಗೊಂಡ ನಮ್ಮ ಸಂವಿಧಾನವು ಸಮಾನತೆ, ಧರ್ಮನಿರಪೇಕ್ಷತೆ, ಸಾಮಾಜಿಕ ನ್ಯಾಯ ಮತ್ತು ವ್ಯಕ್ತಿಗತ ಹಕ್ಕುಗಳನ್ನು ನಮ್ಮೆಲ್ಲರಿಗೂ ನೀಡುವ ಪವಿತ್ರಗ್ರಂಥವಾಗಿದೆ.

12ನೇ ಶತಮಾನದಲ್ಲಿ ಈ ಭೂಮಿಯಲ್ಲಿ ಸಮಾನತೆಯ ಸಂದೇಶ ಸಾರಿ ಹೋಗಿದ್ದ ಮಹಾ ಮಾನವತಾವಾದಿ ಬಸವಣ್ಣ ಮತ್ತು 20ನೆಯ ಶತಮಾನದಲ್ಲಿ ಅದೇ ಸಂದೇಶವನ್ನು ಜಾರಿಗೊಳಿಸಿದ ಡಾ|| ಬಾಬಾ ಸಾಹೇಬ ಅಂಬೇಡ್ಕರ್ ಇಬ್ಬರಲ್ಲೂ ಹಲವು ಸಾಮ್ಯತೆಗಳು ಕಾಣುತ್ತವೆ. ಇಬ್ಬರದು ಧ್ಯೇಯ, ಉದ್ದೇಶ ಒಂದೇ ಆಗಿತ್ತು, ಸಮಾಜದಲ್ಲಿ ಮೇಲು, ಕೀಳು ಎನ್ನುವ ಭಾವನೆ ಇರಬಾರದು, ಎಲ್ಲರಿಗೂ ಬದುಕಿನ ಹಕ್ಕು ಸಮಾನವಾಗಿ ಸಿಗಬೇಕು. ನೈಸರ್ಗಿಕ ಸಂಪನ್ಮೂಲಗಳ ಬಳಕೆಗೆ ಸಮಾನ ಅಧಿಕಾರವಿರಬೇಕು, ಎಲ್ಲಾ ಹಕ್ಕುಗಳು ಸಮಾನವಿರಬೇಕು ಎನ್ನುವ ಉದ್ದೇಶದೊಂದಿಗೆ ಅರಿವಿನ ಸಮಾಜ ನಿರ್ಮಿಸಿ, ಹೊಸ ಬೆಳಕನ್ನು ಕಾಣುವ ಹೊಸ ಕನಸು ಹೊತ್ತವರು ಡಾ. ಅಂಬೇಡ್ಕರ್ ಅವರು ಎಂದರು.

ಸಮಾಜದಲ್ಲಿನ ಅಸಮಾನತೆಗಾಗಿ ಅಂಬೇಡ್ಕರ್ ಅವರಿಗೆ ಬಹಳ ದೊಡ್ಡಮಟ್ಟದ ಅಸಮಾಧಾನವಿತ್ತು, ಆದರೆ ಅದಕ್ಕಾಗಿ ಅವರೆಂದೂ ತಾಳ್ಮೆ ಕಳೆದುಕೊಳ್ಳಲಿಲ್ಲ. ಅಹಿಂಸೆಯ ಮಾರ್ಗ ತುಳಿಯಲಿಲ್ಲ ಅತ್ಯಂತ ಸಮಾಧಾನದಿಂದಲೇ ಅರಿವು ಮೂಡಿಸಲು ಪ್ರಯತ್ನಿಸಿದರು, ಅದೇ ತತ್ವದ ಆಧಾರದ ಮೇಲೆ ಸಂವಿಧಾನವನ್ನು ರಚಿಸಿದರು. ಅವರ ಜೀವಿತದುದ್ದಕ್ಕೂ ಯಾರನ್ನೂ ದ್ವೇಷಿಸಲಿಲ್ಲ,



ಯಾರ ಹಕ್ಕುಗಳನ್ನು ಅಧಿಕಾರವನ್ನು, ಅವರು ಕಸಿದುಕೊಳ್ಳಲು ಬಯಸಿರಲಿಲ್ಲ. ಮನುಷ್ಯನಾಗಿ ಹುಟ್ಟಿದವರು ಹೇಗೆ ಬದುಕಬಹುದು ಎಂದು ತೋರಿಸುವ ಮೂಲಕ ಇಡೀ ಮಾನವ ಕುಲಕ್ಕೆ ಆದರ್ಶರಾದರು. ಕಾನೂನು ತಜ್ಞರಾಗಿ ಸಮಾಜ ಸುಧಾರಕರಾಗಿ ಅರ್ಥ ಶಾಸ್ತ್ರಜ್ಞರಾಗಿ, ಪತ್ರಕರ್ತರಾಗಿ, ತತ್ವಜ್ಞಾನಿಯಾಗಿ, ಸಾಹಿತಿಯಾಗಿ ತಮ್ಮ ಇರುವಿಕೆಯನ್ನು ತೋರ್ಪಡಿಸಿದರು. ಹಾಗಾಗಿ ಅವರ ಹೆಸರೇ ನಮಗೆಲ್ಲಾ ಸ್ಫೂರ್ತಿ, ಸಾಧನೆಗೆ ಪ್ರೇರಣೆ, ಅವರ ಬದುಕು ತತ್ವ ಆದರ್ಶಗಳು ನಮ್ಮೆಲ್ಲರ ಪಾಲಿಗೆ ಸರ್ವಕಾಲಿಕ ಮಾರ್ಗದರ್ಶಕ. ಸಮಾನತೆಯಿಂದಲೆ ಪ್ರಗತಿ ಎನ್ನುವುದು ಅವರ ಪರಮೋಚ್ಚ ನಂಬಿಕೆಯಾಗಿತ್ತು ಎಂದರು.

ಅಂಬೇಡ್ಕರ್ ಅವರ ಕನಸಿನಂತೆ, ಎಲ್ಲಾ ಹಂತಗಳಲ್ಲಿಯೂ ಶಿಕ್ಷಣ-ಸಮಾನತೆಯನ್ನು ನೀಡುವಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಕಂಕಣ ಬದ್ಧವಾಗಿದೆ. ಅಂಬೇಡ್ಕರ್ ಜಯಂತಿ ಎನ್ನುವುದು ಕೇವಲ ಪುಷ್ಪಾರ್ಚನೆಗೆ ಸೀಮಿತವಾಗಬಾರದು. ಇದು ಪ್ರತಿಜ್ಞಾ ದಿನವಾಗಬೇಕು, ನಾವು ಜಾತಿಯ ಹೆಸರಿನಲ್ಲಿ ನಡೆಯುವ ಯಾವುದೇ ಹಿಂಸೆಯನ್ನು ವಿರೋಧಿಸೋಣ. ಎಲ್ಲ ಮಕ್ಕಳಿಗೂ ಸಮಾನ ಶಿಕ್ಷಣ, ಮಹಿಳೆಯರಿಗೆ ಗೌರವ, ದಲಿತರಿಗೆ ಸವಲತ್ತು, ಪರಿಶ್ರಮಿಕರಿಗೆ ಪರಿಗಣನೆ, ಎಲ್ಲ ವರ್ಗದ ಜನತೆಗೆ ಸನ್ಮಾನ, ಈ ಎಲ್ಲವನ್ನು ನಾವು ಕಲ್ಪಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, 1927 ರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಧೃಢ ನಿರ್ಧಾರ ಕೈಗೊಂಡು ಮನಸ್ಮೃತಿ ಎನ್ನುವ ಅಲಿಖಿತ ಸಂವಿಧಾನವನ್ನು ಸುಟ್ಟು ಹಾಕಿದರು. ವಿದ್ಯಾಭ್ಯಾಸದಿಂದ ಅಂಬೇಡ್ಕರ್ ಗಳಿಸಿದ ವಿದ್ವತ್ ಇಂತಹ ಧೃಡ ನಿರ್ಧಾರ ಕೈಗೊಳ್ಳಲು ಕಾರಣವಾಯಿತು. ಬಹಳಷ್ಟು ಜನರು ಇದನ್ನು ವಿರೋಧಿಸಿದರು. ದೇಶದ ಸಂವಿಧಾನ ರಚನೆ ಮಾಡಿ, ದೇಶದಲ್ಲಿ ಜಾ-ರಿಯಾದ ಮೇಲೂ ಅಂಬೇಡ್ಕರ್ ರಚಿಸಿದ ಸಂವಿಧಾನ ಒಪ್ಪದಂತೆ ವಿರೋಧಿಸಿ ಅಂದಿನ ಕಾಲದಲ್ಲಿ ಚಳುವಳಿಯನ್ನು ಸಹ ನಡೆಸಲಾಯಿತು. ಇಂದಿಗೂ ಸಂವಿಧಾನವನ್ನು ಬದಲಾವಣೆ ಮಾಡುವ ಹುನ್ನಾರ ದೇಶದಲ್ಲಿ ನಡೆಯುತ್ತಿದೆ. ಸಂವಿಧಾನವನ್ನು ರಕ್ಷಿಸುವ ಜವಬ್ದಾರಿ ನಮ್ಮೆಲ್ಲರ ಮೇಲಿದೆ. ಸಂವಿಧಾನ ರಚಿಸಿ ಪ್ರಜಾಪ್ರಭುತ್ವಕ್ಕೆ ಅಡಿಪಾಯ ಹಾಕಿದವರು ಡಾ.ಬಿ.ಆರ್.ಅಂಬೇಡ್ಕರ್, ದೇಶದಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ರಾಜಯಕೀಯ ಸಮಾನತೆ ಮೂಡಬೇಕು ಎನ್ನುವುದು ಅವರ ಆಶಯವಾಗಿತ್ತು. ಇಂದು ಮಹಿಳೆಯರಿಗೆ ಸ್ವಾತಂತ್ರ್ಯ ದೊರಕಲು ಬಾಬಾ ಸಾಹೇಬ್ ಅಂಬೇಡ್ಕರ್ ಕಾರಣವಾಗಿದ್ದಾರೆ. ಭಾರತ ದೇಶ ಇಂದು ಆಧುನಿಕವಾಗಿ ಪ್ರಗತಿ ಹೊಂದಲು ಅಂಬೇಡ್ಕರ್ ಅವರ ಕೊಡುಗೆ ಮಹತ್ವದ್ದಾಗಿದೆ. ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ ಗುತ್ತಿಗೆಯಲ್ಲೂ ಮೀಸಲಾತಿ ನೀಡಿದೆ. ಅಂಬೇಡ್ಕರ್ ಅವರ ಆಶಯ ಈಡೇರಿಸುವಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ಅಂಬೇಡ್ಕರ್ ನೀಡಿದ ಸಂವಿಧಾನದಿಂದಲೇ ಇಂದು ನಾವೆಲ್ಲರೂ ಜಾತಿ ಪದ್ಧತಿ ಮೀರಿ, ವಿದ್ಯಾಭ್ಯಾಸ ಹೊಂದಿ ಉನ್ನತ ಸ್ಥಾನಗಳನ್ನು ಅಲಂಕರಿಸುವಂತಾಗಿದೆ. ಇಡೀ ದೇಶವನ್ನು ಒಗ್ಗೂಡಿಸಿ ಮುನ್ನಡೆಸುವ ಅಂಬೇಡ್ಕರ್ ರಚಿಸಿದ ಶಕ್ತಿ ಸಂವಿಧಾನಕ್ಕೆ ಇದೆ ಎಂದರು.

ಚಳ್ಳಕೆರೆ ಕೋಟೆ ಬೋರಮ್ಮ ಪಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ಪ್ರಾಧ್ಯಾಪಕ ಸಂಜೀವ್ ಕುಮಾರ್ ಪೋತೆ ಮಾತನಾಡಿ, ಜಾತಿ ಪದ್ಧತಿಯ ಕಷ್ಟ ಕಾರ್ಪಣ್ಯಗಳನ್ನು ಮೀರಿ ಅಂಬೇಡ್ಕರ್ ಸಾಧನೆ ಮಾಡಿದ್ದಾರೆ. ಸೈದ್ಧಾಂತಿಕವಾಗಿ ಅಂಬೇಡ್ಕರ್ ಮನುವಾದವನ್ನು ವಿರೋಧಿಸಿದ್ದಾರೆ. ಯಾವುದೇ ರಾಜಕೀಯ ಪಕ್ಷಗಳ ಬಗ್ಗೆ ಅಂಬೇಡ್ಕರ್ ಎಂದೂ ವಿರೋಧ ವ್ಯಕ್ತ ಪಡಿಸಿರಲಿಲ್ಲ. ಅಂಬೇಡ್ಕರ್ ವಿಶ್ವದ ಅತ್ಯುತನ್ನತ ಅರ್ಥಶಾಸ್ತ್ರಜ್ಞರಲ್ಲಿ ಒಬ್ಬರಾಗಿದ್ದಾರೆ. ಅವರ ಸಲಹೆ ಮೇರೆಗೆ ಬ್ರಿಟೀಷ್ ಆಡಳಿತದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪಿಸಲಾಯಿತು. ಕಾರ್ಮಿಕ ಸಚಿವರಾಗಿ ಕಾರ್ಮಿಕರಿಗೆ 8 ಗಂಟೆಗಳ ಕೆಲಸದ ಅವಧಿ ನಿಗಧಿ, ಐ.ಎಸ್.ಐ ಸೌಲಭ್ಯ, ಮಹಿಳಾ ಕಾರ್ಮಿಕರಿಗೆ ಹೆರಿಗೆ ಪೂರ್ವ ಹಾಗೂ ನಂತರದಲ್ಲಿ ರಜೆ ಸೌಲಭ್ಯಗಳನ್ನು ಕಲ್ಪಿಸಿದರು. ಉತ್ತಮ ದೂರದರ್ಶಿತ್ವ ಹೊಂದಿದ್ದ ಅಂಬೇಡ್ಕರ್ ದಾಮೋದರ್ ಕಣಿವೆ ನೀರಾವರಿ ಯೋಜನೆ, ಹಿರಾಕುಡ್ ಅಣೆಕಟ್ಟು ನಿರ್ಮಾತೃವಾಗಿದ್ದಾರೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**